ಉಳ್ಳಾಲ ವಾಣಿ
ವಾರ್ಷಿಕ ಚಂದಾದಾರಾಗಿರಿ
ಒಂದು ವರ್ಷ ಪೂರ್ತಿ ಪತ್ರಿಕೆ ಮನೆಗೆ ತಲುಪಿಸಲು
₹250 ಪಾವತಿಸಿ

ಮಂಗಳೂರು ಜನವರಿ 01–15: 2026 ಸಂಪುಟ 2, ಸಂಚಿಕೆ 11, ಪುಟಗಳು–8 REG.No.MAG/CR27/2023/E-243218 Posted at Pandeshwar RNI:KARKAN28322 www.ullalavani.com ullalavani@gmail.com ₹10

# ಉಳ್ಳಾಲ ವಾಣಿ

ಕನ್ನಡ ಪತ್ರಿಕೆ

ಕಡಲ ಮಗಳ್

ಸುದ್ದಿ, ಪತ್ರಿಕೆ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
ಉಳ್ಳಾಲ ವಾಣಿ
ಅಪ್ಪಚ್ಚಿ ಕಾಂಪ್ಲೆಕ್ಸ್, ಯೆನೆಪೋಯ ಆಸ್ಪತ್ರೆ ಹತ್ತಿರ, ಕುತ್ತಾರುಪದವು
9972528110

ಪುಟ 2 ವೀರರಾಣಿ ಅಬ್ಬಕ್ಕ ಉತ್ಸವ ಪ್ರಶಸ್ತಿಗೆ ಅರ್ಜಿ ಆಹ್ವಾನ
ಪುಟ 3 ಮಂಗಳೂರು ಕಂಬಳ 141 ಜೊತೆ ಕೋಣಗಳು ಭಾಗಿ
ಪುಟ 4 ಅಮೂಲ್ ಐಸ್ ಕ್ರೀಮ್ ಪಾರ್ಲರ್ ಲಕ್ಕಿ ಡ್ರಾ, ಬಹುಮಾನ ವಿತರಣೆ
ಪುಟ 7 ಸೋಮೇಶ್ವರದಲ್ಲಿ ಕ್ರಿಸ್ಮಸ್–ಹೊಸ ವರ್ಷಾಚರಣೆ



ಕುತ್ತಾರು ಶ್ರೀ ಪಂಜಂದಾಯ ಬಂಟ ವೈದ್ಯನಾಥ ದೈವಗಳ ಪುದ್ದಾರ್ದ ಮೆಚ್ಚಿ ನೇಮ ಶ್ರೀ ವಿಷ್ಣುಮೂರ್ತಿ ದೇವಸ್ಥಾನ ಸಮೀಪ ಜರಗಿತು.
stories_by sk_tulunaduvision



ಕೊಲ್ಯ ಮಲಯಾಳಕೋಡಿ ಮಲಯಾಲ ಚಾಮುಂಡಿ ದೈವಸ್ಥಾನದ ವಾರ್ಷಿಕ ಕಟ್ಟೆ ಜಾತ್ರೆ ಇತ್ತೀಚೆಗೆ ಜರಗಿತು.
stories_by karthii

# ಕುಂಪಲ–ಮಡ್ಯಾರ್ ರಸ್ತೆ ಸಂಪರ್ಕಕ್ಕೆ ಮೊದಲ ಅಂಕುಶ

**ಕುಂಪಲ:** ಕುಂಪಲ–ಮಡ್ಯಾರ್ ಸಂಪರ್ಕ ರಸ್ತೆಯ ಕುರಿತು ಉಳ್ಳಾಲವಾಣಿ ಸರಣಿ ಲೇಖನ ಪ್ರಕಟಿಸಿ ಅಭಿಯಾನ ನಡೆಸಿತ್ತು. ಅದರ ಫಲವಾಗಿ ಇತ್ತೀಚೆಗೆ ಕೋಟೆಕಾರು ಪಟ್ಟಣ ಪಂಚಾಯತ್ ನಲ್ಲಿ ಜರಗಿದ ಸಾಮಾನ್ಯ ಸಭೆಯಲ್ಲಿ ಕೌನ್ಸಿಲರ್ ವಿಚಾರವನ್ನು ಮಂಡಿಸಿದ ಹಿನ್ನೆಲೆಯಲ್ಲಿ ಇದೀಗ ಆಡಳಿತಾತ್ಮಕ ನಿರ್ಣಯದಲ್ಲಿ ಸಂಪರ್ಕ ರಸ್ತೆ ಕಲ್ಪಿಸುವ ಕುರಿತು ನಿರ್ಣಯ ದಾಖಲಾಗುವ ಮೂಲಕ ರಸ್ತೆ ನಿರ್ಮಾಣಕ್ಕೆ ಮೊದಲ ಅಂಕುಶ ದೊರೆತಿದೆ.

ಸೋಮೇಶ್ವರ ಪುರಸಭೆ ವ್ಯಾಪ್ತಿಯ ಕುಂಪಲ ಭಾಗದಿಂದ ಕೋಟೆಕಾರು ಪಟ್ಟಣ ಪಂಚಾಯತ್ ವ್ಯಾಪ್ತಿಯ ಬೀರಿ ದೇರಳಕಟ್ಟೆ ಮುಖ್ಯ ಸ್ತರತೆಗೆ ಸಂಪರ್ಕ ರಸ್ತೆ ಕಲ್ಪಿಸುವಂತೆ ಎರಡು ಗ್ರಾಮದ ಜನರ ಬೇಡಿಕೆಯಾಗಿದೆ. ಈ ಬಗ್ಗೆ ರಸ್ತೆ ನಿರ್ಮಾಣಕ್ಕೆ ಕೆಲವು ಖಾಸಗಿ ಜಮೀನಿನ ಅಗತ್ಯವಿದೆ. ಜಮೀನು ಮಾಲಕರಲ್ಲಿ ಮಾತುಕತೆ ನಡೆಸಿ ಖಾಸಗಿ ರಸ್ತೆ ನಿರ್ಮಿಸಿಲು



ಕುಂಪಲ ಮಡ್ಯಾರು ಸಂಪರ್ಕ ರಸ್ತೆಗೆ ಹೆಚ್ಚಿದ ಒಲವು: ಎರಡು ಗ್ರಾಮಗಳ ಒಗ್ಗಟ್ಟಿಗೆ ಜನಬಲ ಬೆಂಬಲ ಅಗತ್ಯ

ಉಳ್ಳಾಲ ವಾಣಿ ಫಲಶ್ರುತಿ

ಒಪ್ಪಿದ್ದಲ್ಲಿ ಅದಕ್ಕೆ ಬೇಕಾದ ರಸ್ತೆ ನಿರ್ಮಿಸಲು ಸ್ಥಳ ಪರಿಶೀಲನೆ ಮಾಡಲಾಗುವುದೆಂದು ಸರ್ವಾನುಮತದಿಂದ ತೀರ್ಮಾನಿಸಲಾಗಿದೆ ಎಂದು ನಿರ್ಣಯದಲ್ಲಿ ಉಲ್ಲೇಖಿಸಲಾಗಿದೆ.

2025ರ ಅ.16–30 ರ ಉಳ್ಳಾಲವಾಣಿ ಪತ್ರಿಕೆಯ ಸಂಚಿಕೆಯಲ್ಲಿ ಎರಡು ಗ್ರಾಮಗಳ ಸಂಪರ್ಕಕ್ಕೆ ಒಲವು ಹರಿಸುವ ಕುರಿತು ವರದಿ ಪ್ರಕಟಿಸಲಾಗಿತ್ತು. ಅದರಂತೆ ಸಾಮಾನ್ಯ ಸಭೆಯಲ್ಲಿ ಉಳ್ಳಾಲವಾಣಿಯ ವರದಿಯನ್ನು ಆಧರಿಸಿ ಕೌನ್ಸಿಲರ್ ಹರೀಶ್ ರಾವ್ ವಿಚಾರವನ್ನು ಮಂಡಿಸಿದಾಗ, ಅಧ್ಯಕ್ಷೆ ದಿವ್ಯಾ ಸತೀಶ್ ಶೆಟ್ಟಿ ಅವರು ಒಲವು ಹರಿಸಿದ್ದರು. ಇದರಿಂದ ಕಿರಿದಾದ ಕುಂಪಲದ ರಸ್ತೆಯಿಂದ ದಿನಕ್ಕೆ ನೂರಾರು ಜನರು ಸಂಚರಿಸುವವರಿಗೆ ಮುಕ್ತಿ ದೊರಕಲಿದೆ. ಎರಡು ಗ್ರಾಮಗಳ ಸಂಪರ್ಕ ಆದಾಗ ಅಭಿವೃದ್ಧಿ ಕಾರ್ಯಗಳು ಭರಪೂರವಾಗಿ ನಡೆಯಲಿದೆ. ಅನ್ನುವ ಅಭಿಪ್ರಾಯವನ್ನು ವ್ಯಕ್ತಪಡಿಸಿದ್ದರು. ಇದೀಗ ಅದರಂತೆ ನಿರ್ಣಯ ಪ್ರತಿಯಲ್ಲಿ ರಸ್ತೆ ಕಲ್ಪಿಸುವ ವಿಚಾರ ದಾಖಲಾಗುವ ಮುಖೇನ ಮೊದಲ ಯಶಸ್ಸು ದೊರೆತಿದೆ.

- 2025ರ ಅ.16–30 ರ ಉಳ್ಳಾಲವಾಣಿ ಪತ್ರಿಕೆಯ ಸಂಚಿಕೆಯಲ್ಲಿ ಎರಡು ಗ್ರಾಮಗಳ ಸಂಪರ್ಕಕ್ಕೆ ಒಲವು ಹರಿಸುವ ಕುರಿತು ವರದಿ ಪ್ರಕಟಿಸಲಾಗಿತ್ತು.
- ನಿರ್ಣಯ ಪ್ರತಿಯಲ್ಲಿ ರಸ್ತೆ ಕಲ್ಪಿಸುವ ವಿಚಾರ ದಾಖಲಾಗುವ ಮುಖೇನ ಮೊದಲ ಯಶಸ್ಸು ದೊರೆತಿದೆ.

### ಧರ್ಮದ ಗಡಿಯನ್ನು ಮೀರಿ ಒಂದಾದ ಹೃದಯಗಳು


# ಮಂಜನಾಡಿ ಉರೂಸ್‌ಗೆ ಹಿಂದೂಗಳ ಹೊರೆಕಾಣಿಕೆ



**ಮಂಜನಾಡಿ:** ಕರಾವಳಿಯ ಮಣ್ಣಿನಲ್ಲಿ ಸೌಹಾರ್ದತೆಯ ಕಂಪು ಮತ್ತೊಮ್ಮೆ ಪಸರಿಸಿದೆ. ಧರ್ಮ ಯಾವುದಾದರೇನು, ಮನುಷ್ಯತ್ವವೇ ಮೊದಲು ಎಂಬುದನ್ನು ಅಸೈಗೋಳಿಯ ಹಿಂದೂ ಬಾಂಧವರು ಸಾಬೀತುಪಡಿಸಿದ್ದಾರೆ. ಹಝ್ರತ್ ಅಸಯ್ಯದ್ ಇಸ್ಮಾಯಿಲ್ ವಲಿಯುಲ್ಲಾಹಿಲ್ ಬುಖಾರಿ ಮಂಜನಾಡಿ ಉರೂಸ್ ಸಂಭ್ರಮಕ್ಕೆ ಈ ಬಾರಿ ಹಿಂದೂ ಸಹೋದರರು ಪ್ರೀತಿಯ 'ಸೌಹಾರ್ದ ಹೊರೆಕಾಣಿಕೆ'ಯನ್ನು ಅರ್ಪಿಸುವ ಮೂಲಕ ನಾಡಿಗೆ ಮಾದರಿಯಾಗಿದ್ದಾರೆ. ಹೌದು, ನಿತ್ಯಾನಂದ ಸೇವಾ ಸಮಿತಿ ನಿತ್ಯಾನಂದ ನಗರ, ಹನುಮಾನ್ ಫ್ರೆಂಡ್ಸ್ ಹಿಂದೂಪುರ ಅಸೈಗೋಳಿ, ಟೀಮ್ ಅಸೈಗೋಳಿ,ಶಕ್ತಿ ಫ್ರೆಂಡ್ಸ್ ಆಕಾಶಭವನ ಮಂಗಳೂರು, ಸ್ನೇಹ ಬಳಗ ಮಂಗಳೂರು, ಓಂ ಶಕ್ತಿ ಮಂಗಳೂರು, ಬರ್ಕೆ ಫ್ರೆಂಡ್ಸ್ ಕುದ್ರೋಳಿ,ಬ್ರರ್ಸ್ ಕೊಲ್ಯ, ಸಾಯಿ ಫ್ರೆಂಡ್ಸ್ ಅಸೈಗೋಳಿ ಸೇರಿದಂತೆ ಮಂಗಳೂರಿನ ವಿವಿಧ ಸಂಘಟನೆಗಳ ಒಕ್ಕೂಟದಿಂದ ಈ ↘ 2ನೇ ಪುಟಕ್ಕೆ

- ಈ ಮೆರವಣಿಗೆಯಲ್ಲಿ ಸುಮಾರು 15 ಕ್ವಿಂಟಾಲ್ ಅಕ್ಕಿ, ಸಕ್ಕರೆ, ತರಕಾರಿ ಹಾಗೂ ಇನ್ನಿತರ ಅಗತ್ಯ ಸಾಮಗ್ರಿಗಳನ್ನು ಸಲ್ಲಿಕೆ ಮಾಡಲಾಯಿತು.

# ಉಳ್ಳಾಲ ನಗರಸಭೆ ಪೌರಾಯುಕರಾಗಿ ಸಂತೋಷ್ ಎಸ್.ಡಿ ನೇಮಕ





**ಉಳ್ಳಾಲ:** ಉಳ್ಳಾಲ ನಗರ ಸಭೆಯ ನೂತನ ಪೌರಾಯುಕ್ತರಾಗಿ ಸಂತೋಷ್ ಎಸ್ ಡಿ. ನೇಮಕಗೊಂಡಿದ್ದಾರೆ.

ಉಳ್ಳಾಲ ನಗರ ಸಭಾ ವ್ಯಾಪ್ತಿಯಲ್ಲಿ ಸೇವಾ ಕಾರ್ಯ ಚುರುಕು ಗೊಳಿಸಲು ಉಳ್ಳಾಲಕ್ಕೆ ಪೂರ್ಣ ಅವಧಿಯ ಉತ್ತಮ ಪೌರಾಯುಕ್ತರ ನೇಮಕ ಮಾಡಿ ಎಂದು ನಾಗರಿಕರಿಂದ ಆಗ್ರಹ ಕೇಳಿಬಂದಿತ್ತು. ಇದಕ್ಕೆ ಸ್ಪಂದಿಸಿದ ಸ್ಪೀಕರ್ ಯು.ಟಿ.ಖಾದರ್ ಅವರ ಶಿಫಾರಸ್ಸು ಮೇರೆಗೆ ಉಳ್ಳಾಲ ನಗರ ಸಭೆಗೆ ಪೌರಾಯುಕ್ತರಾಗಿ ಸಂತೋಷ್ ಎಸ್ ಡಿ ಅವರನ್ನು ನೇಮಕಗೊಳಿಸಿದ್ದಾರೆ.

ಮೂಲತಃ ತೀರ್ಥಹಳ್ಳಿಯ ಸಂತೋಷ್‌ರವರು ಈ ಮೊದಲು ಕುಂದಾಪುರ, ಕಾಪು ಪುರಸಭೆ ಮುಖ್ಯಾಧಿಕಾರಿ, ಉಡುಪಿ ನಗರ ಸಭೆಯ ಕಂದಾಯ ಅಧಿಕಾರಿಯಾಗಿ ಹಾಗೂ ಉಡುಪಿ ಜಿಲ್ಲಾ ವ್ಯಾಪ್ತಿಯಲ್ಲಿ ಸುಮಾರು 15 ವರ್ಷಗಳ ಕಾಲ ಕರ್ತವ್ಯ ನಿಷ್ಠೆ, ಪ್ರಾಮಾಣಿಕ ಸೇವೆ ಸಲ್ಲಿಸುವ ಮೂಲಕ ಅಲ್ಲಿನ ಜನರ ಪ್ರೀತಿ,ವಿಶ್ವಾಸ, ಗೌರವಕ್ಕೆ ಪಾತ್ರರಾಗಿದ್ದರು.

# ಮೆಟ್ರೋ ಮೂಲಕ ಮಣಿಪಾಲ ಕೊಣಾಜೆ ಸಂಪರ್ಕ ಯೋಜನೆ

## ಜ್ಞಾನ ನಾಡಿಗೆ ನೂತನ ನಾಡಿ

**ಕೊಣಾಜೆ:** ಆರೋಗ್ಯ ಹಾಗೂ ಶೈಕ್ಷಣಿಕ ಕೇಂದ್ರಗಳಾಗಿ ರಾಷ್ಟ್ರದ ನಕ್ಷೆಯಲ್ಲಿ ವಿಶೇಷ ಸ್ಥಾನ ಪಡೆದಿರುವ ಮಣಿಪಾಲ– ಕೊಣಾಜೆ ವ್ಯಾಪ್ತಿಯ ಅಭಿವೃದ್ಧಿಗೆ ಹೊಸ ಚೈತನ್ಯ ತುಂಬುವ ಸಾಧ್ಯತೆ ಮತ್ತೆ ಮೂಡಿದೆ. ಈಗಾಗಲೇ ಹಲವು ವರ್ಷಗಳ ಹಿಂದೆ ರೂಪಿಸಲಾಗಿದ್ದ 'ನಾಲೇಜ್ ಕಾರಿಡಾರ್' ಯೋಜನೆಯ ಆಧಾರದಲ್ಲಿ ಭವಿಷ್ಯದಲ್ಲಿ ಮೆಟ್ರೋ ರೈಲು ಸಂಪರ್ಕ ಕಲ್ಪಿಸುವ ಯೋಜನೆಯನ್ನು ಜಾರಿಗೊಳಿಸಲಾಗುವುದು ಎಂದು ವಿಧಾನಸಭಾ ಅಧ್ಯಕ್ಷ ಯು.ಟಿ. ಖಾದರ್ ತಿಳಿಸಿದ್ದಾರೆ.

ನರಿಂಗಾನ ಗ್ರಾಮ ಪಂಚಾಯತ್ ವಠಾರದಲ್ಲಿ ಗಾಂಧಿ ಪ್ರತಿಮೆ ಅನಾವರಣ,ಗ್ರಾಮ ವ್ಯಾಪ್ತಿಯ ಬೋಳದಲ್ಲಿ ನಿರ್ಮಿಸಲಾದ ಸ್ವಚ್ಛ ಸಂಕೀರ್ಣ ಮತ್ತು ಮಲತ್ಯಾಜ್ಯ ಘಟಕ ಉದ್ಘಾಟನೆ,ಆಶಾ ಕಾರ್ಯಕರ್ತೆಯರಿಗೆ ಸ್ಕೂಟರ್ ಹಸ್ತಾಂತರ,ಹಕ್ಕುಪತ್ರ ವಿತರಣೆ,ನೀರಿನ ಟ್ಯಾಂಕ್ ಉದ್ಘಾಟನೆ,ವಿಶೇಷ ಚೇತನರಿಗೆ ಚೆಕ್ ವಿತರಣೆ ಸೇರಿದಂತೆ ನರಿಂಗಾನ ಗ್ರಾಮದಲ್ಲಿ ಐದು ಕೋಟಿ ಅನುದಾನದ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಖಾದರ್ ಅವರು ಶಾಸಕರಾಗಿದ್ದ ಅವಧಿಯಲ್ಲಿ ಸುಮಾರು ಐದು ವರ್ಷಗಳ ಹಿಂದೆ ಈ ಮಹತ್ವಾಕಾಂಕ್ಷಿ ಯೋಜನೆಯನ್ನು ಇಲಾಖೆಯ ಮುಂದಿಟ್ಟಿದ್ದರು. ಆರೋಗ್ಯ ವಿಜ್ಞಾನ, ವೈದ್ಯಕೀಯ ಶಿಕ್ಷಣ, ವಿಶ್ವವಿದ್ಯಾಲಯಗಳು, ಸಂಶೋಧನಾ ಕೇಂದ್ರಗಳು, ತಂತ್ರಜ್ಞಾನ ಸಂಸ್ಥೆಗಳು ಸಮೂಹಗೊಂಡಿರುವ ಈ ಬೆಲ್ಟ್ ಅನ್ನು ಸರಾಗ ಸಂಚಾರ ಮತ್ತು ದೀರ್ಘಕಾಲಿಕ ಮೂಲಸೌಕರ್ಯಗಳ ಮೂಲಕ ವಿಶ್ವಮಟ್ಟದ ಜ್ಞಾನ–ತಂತ್ರಜ್ಞಾನ ಹಬ್ಬಾಗಿಸುವ ಕಲ್ಪನೆ ಅದರ ಹಿಂದೆ ಇತ್ತು.

ಈಗ ಮತ್ತೊಮ್ಮೆ ಇದೇ ಪ್ರಸ್ತಾಪವನ್ನು ಪುನರ್‌ಜೀವಗೊಳಿಸಿರುವುದು ಯೋಜನೆ ಗಂಭೀರವಾಗಿ ಪರಿಗಣನೆಯಲ್ಲಿರುವುದನ್ನು ಸೂಚಿಸಿದೆ.

ಮೆಟ್ರೋ ಜಾಲ ವಿಸ್ತರಣೆ ಮೂಲಕ ಮಣಿಪಾಲದಿಂದ ಕೊಣಾಜೆ ನಡುವೆ ದಿನನಿತ್ಯ ಸಂಚರಿಸುವ ಸಾವಿರಾರು ವಿದ್ಯಾರ್ಥಿಗಳು, ಆಸ್ಪತ್ರೆ ಸಿಬ್ಬಂದಿ, ಸಂಶೋಧಕರು ಹಾಗೂ ಉದ್ಯೋಗಿಗಳಿಗೆ ವೇಗವಾದ, ಸುರಕ್ಷಿತ ಹಾಗೂ ಪರಿಸರ ಸ್ನೇಹಿ ಸಂಚಾರ ಸಾಧ್ಯವಾಗಲಿದೆ. ಪ್ರಸ್ತುತ ರಸ್ತೆ ಸಂಚಾರದಲ್ಲಿ ಕಂಡುಬರುವ ಅತಿಯಾದ ವಾಹನ ↘ 2ನೇ ಪುಟಕ್ಕೆ



### ಸಾಮರಸ್ಯದ ನಾಡು ನರಿಂಗಾನ



ಸೌಹಾರ್ದತೆಯ ಸಮಾಜವನ್ನು ಜನಪ್ರತಿನಿಧಿಗಳಿಂದ, ಆಡಳಿತ ವ್ಯವಸ್ಥೆಯಿಂದ ನಿರ್ಮಾಣ ಮಾಡಲು ಸಾಧ್ಯವಿಲ್ಲ. ಜನರು ಪರಸ್ಪರ ಪ್ರೀತಿ ವಿಶ್ವಾಸದೊಂದಿಗೆ ಒಗ್ಗಟ್ಟಿನಿಂದ ಮುನ್ನಡೆದರೆ ಮಾತ್ರ ಇದು ಸಾಧ್ಯ. ನರಿಂಗಾನ ಸಾಮರಸ್ಯದ ಗ್ರಾಮವಾಗಿ ರೂಪುಗೊಂಡು ಇದೀಗ ಗ್ರಾಮಕ್ಕೆ ಪೂರಕವಾಗಿ ಅನೇಕ ಅಭಿವೃದ್ಧಿ ಕಾಮಗಾರಿಗಳು ನಡೆದು ಇಡೀ ರಾಜ್ಯಕ್ಕೆ ಮಾದರಿಯಾಗಿದೆ. ಉಳ್ಳಾಲ ಕ್ಷೇತ್ರದಲ್ಲಿ 20 ಕೋಟಿ ಅನುದಾನದಲ್ಲಿ ಸೈಬರ್ ಸೆಕ್ಯೂರಿಟಿ ಜಾರಿಗೆ ತರಲು ಯೋಚಿಸಲಾಗಿದ್ದು ಉನ್ನತ ಅಧಿಕಾರಿಗಳ ಜೊತೆ ಚರ್ಚಿಸಲಾಗಿದೆ.ಇದು ಜಾರಿಯಾದಲ್ಲಿ ಅಪರಾಧ ಸಹಿತ ಎಲ್ಲಾ ರೀತಿಯ ಸಮಸ್ಯೆಗಳಿಗೂ ಕಡಿವಾಣ ಹಾಕಲು ಸಾಧ್ಯ. ನರಿಂಗಾನ ಗ್ರಾಮಸ್ಥರಿಗೆ ಈ ಮೊದಲು ನೀಡಿದ ಭರವಸೆಯಂತೆ 24 ಗಂಟೆ ಕುಡಿಯುವ ನೀರು, ರಸ್ತೆ, ಶಿಕ್ಷಣ ಸೇರಿದಂತೆ ಇನ್ನಿತರ ಅಭಿವೃದ್ಧಿ ಕೆಲಸಗಳು ನರಿಂಗಾನ ಗ್ರಾಮದಲ್ಲಿ ನಡೆದು ಗ್ರಾಮವು ಅಭಿವೃದ್ಧಿ ಹಂತಕ್ಕೆ ತಲುಪಿದೆ. ಗ್ರಾಮದಲ್ಲಿ ಜನಪ್ರತಿನಿಧಿಗಳು ಅಭಿವೃದ್ಧಿ ಯೋಜನೆಗಳನ್ನು ರೂಪಿಸಿದರೂ ಅದನ್ನು ಅನುಷ್ಠಾನಗೊಳಿಸಿ ಮುಂದೆಯೂ ಕಾಪಾಡಿಕೊಂಡು ಹೋಗುವ ಜವಾಬ್ದಾರಿ ಗ್ರಾಮಸ್ಥರದ್ದು. ಆಶಾ ಕಾರ್ಯಕರ್ತೆಯರಿಗೆ ಉಚಿತವಾಗಿ ದ್ವಿಚಕ್ರ ವಾಹನ ಕೊಡಿಸುವ ವ್ಯವಸ್ಥೆಯನ್ನು ನರಿಂಗಾನ ಗ್ರಾಮ ಪಂಚಾಯತ್ ಮಾಡಿದ್ದು ಇದು ಇಡೀ ರಾಜ್ಯಕ್ಕೆ ಮಾದರಿಯಾಗಿದೆ. ದುಶ್ಚಟ ಮುಕ್ತ ದ್ವೇಷ ಮುಕ್ತ, ಕಸಮುಕ್ತ ಗ್ರಾಮಗಳನ್ನಾಗಿ ರೂಪಿಸುವುದೇ ನಮ್ಮ ಉದ್ದೇಶವಾಗಿದೆ. ಜನಶಿಕ್ಷಣ ಟ್ರಸ್ಟ್ ಅವರ ಸಹಕಾರದೊಂದಿಗೆ ಅನೇಕ ಯೊಜನೆಗಳ ಅನುಷ್ಠಾನ ಕುರಿತು ಚರ್ಚಿಸಲಾಗಿದೆ.

■ ಯು.ಟಿ. ಖಾದರ್, ವಿಧಾನಸಭಾ ಅಧ್ಯಕ್ಷ



### ನವಾಝ್ ನರಿಂಗಾನ ನೇತೃತ್ವ ಗ್ರಾಮಕ್ಕೆ ಬೆಳವಣಿಗೆಯ ಬೆಳ್ಳಿ ಬೆಳಕು



ಸಕ್ರಿಯ ಯುವನಾಯಕನಾಗಿ ಹೆಸರು ಮಾಡಿದ ಅಧ್ಯಕ್ಷ ನವಾಝ್ ನರಿಂಗಾನ ಅವರು ಗ್ರಾಮದಲ್ಲಿ ಹಲವು ಅಭಿವೃದ್ಧಿ ಕಾಮಗಾರಿಗಳನ್ನು ಜಾರಿಗೆ ತಂದು ಜನರ ವಿಶ್ವಾಸ ಗಳಿಸಿದ್ದಾರೆ. ಯುವಶಕ್ತಿ, ಸಂಘಟನೆ ಹಾಗೂ ಪ್ರಾಮಾಣಿಕ ಆಡಳಿತ ಎಂಬ ಮೂರು ಅಂಶಗಳನ್ನು ಬೆಸೆದುಕೊಂಡು, ಗ್ರಾಮದ ಮೂಲಸೌಕರ್ಯವನ್ನು ಬಲಪಡಿಸುವಲ್ಲಿ ಅವರು ಹೊಸ ಚೈತನ್ಯ ಮೂಡಿಸಿದ್ದಾರೆ.

ಗ್ರಾಮದ ರಸ್ತೆ–ಬಡಾವಣೆಗಳ ಸುಧಾರಣೆ, ಬೆಳಕು ವ್ಯವಸ್ಥೆಯ ನವೀಕರಣ, ಕುಡಿಯುವ ನೀರಿನ ಲಭ್ಯತೆ, ಒಳಚರಂಡಿ ವ್ಯವಸ್ಥೆಯ ಸುಧಾರಣೆ, ಸಾರ್ವಜನಿಕ ಸೌಕರ್ಯಗಳ ಅಭಿವೃದ್ಧಿ ಎಲ್ಲವೂ ↘ 2ನೇ ಪುಟಕ್ಕೆ

# ಕ್ರಿಸ್ಮಸ್ ಹಬ್ಬದ ವೇಳೆ ಕ್ರೈಸ್ತ ಸಮುದಾಯದ ಮೇಲಿನ ದಾಳಿ ಖಂಡನೀಯ: ಮಂಗಳೂರು ಕ್ರೈಸ್ತ ಧರ್ಮಪ್ರಾಂತ್ಯ



**ಮಂಗಳೂರು:** ಕ್ರಿಸ್ಮಸ್ ಹಬ್ಬವನ್ನು ಗುರಿಯಾಗಿಸಿಕೊಂಡು ಕರ್ನಾಟಕ ಸೇರಿದಂತೆ ದೇಶಾದ್ಯಂತ ಕ್ರೈಸ್ತ ಸಮುದಾಯದ ಮೇಲೆ ನಡೆಯುತ್ತಿರುವ ಹಲ್ಲೆಗಳು ಖಂಡನೀಯ ಮತ್ತು ಸಂಬಂಧಪಟ್ಟ ಸರಕಾರಗಳು ಸಮುದಾಯದ ಭದ್ರತೆಗೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಮಂಗಳೂರು ಕ್ರೈಸ್ತ ಧರ್ಮಪ್ರಾಂತ್ಯ ಪ್ರಕಟನೆ ತಿಳಿಸಿದೆ.

ಈ ಬಗ್ಗೆ ಪತ್ರಿಕಾ ಪ್ರಕಟನೆ ನೀಡಿರುವ ಧರ್ಮಪ್ರಾಂತ್ಯದ ಸಾರ್ವಜನಿಕ ಸಂಪರ್ಕ ಅಧಿಕಾರಿಗಳಾದ ವಂ. ಜೆ. ಬಿ. ಸಲ್ಡಾನಾ ಮತ್ತು ರೋಯ್ ಕ್ಯಾಸ್ತಲಿನೋ, ಕೇರಳದ ಪಾಲಕ್ಕಾಡ್‌ನಲ್ಲಿ ಕ್ರಿಸ್ಮಸ್ ಕ್ಯಾರಲ್ಸ್ ತಂಡದ ಮೇಲೆ ಮತೀಯವಾದಿಗಳು ಹಲ್ಲೆ ನಡೆಸಿದ್ದು, ಇನ್ನು ಕೆಲವೆಡೆ ಕ್ರಿಸ್ಮಸ್ ಸಂಬಂಧಿತ ವಸ್ತುಗಳನ್ನು ಮಾರಾಟ ಮಾಡುತ್ತಿದ್ದವರಿಗೆ ತಡೆಯೊಡ್ಡಿ ಹಿಂಸೆ ನೀಡಲಾಗಿದೆ. ನವದೆಹಲಿಯಲ್ಲಿ ಸಾಂತಾಕ್ಲಾಸ್ ಟೋಪಿ ಧರಿಸಿದ್ದ ಕ್ರಿಶ್ಚಿಯನ್ ಮಹಿಳೆಯರು ಮತ್ತು ಮಕ್ಕಳ ಗುಂಪಿನ ವಿರುದ್ಧ ಮತಾಂತರದ ಆರೋಪ ಹೊರಿಸಿ ಹಿಂದೂ ಸಂಘಟನೆಯ ಕಾರ್ಯಕರ್ತರು ಅನುಚಿತವಾಗಿ ವರ್ತನೆ ನಡೆಸಿದ್ದಾರೆ.

ಇತ್ತೀಚಿನ ಕ್ರಿಸ್ಮಸ್ ಆಚರಣೆಯ ಸಂದರ್ಭದಲ್ಲಿ ಕೇರಳ, ನವದೆಹಲಿ, ಉತ್ತರಪ್ರದೇಶ, ರಾಜಸ್ಥಾನ, ಉತ್ತರಾಖಂಡ ಹಾಗೂ ಒಡಿಶಾ ಸೇರಿದಂತೆ ಹಲವು ರಾಜ್ಯಗಳಲ್ಲಿ ಮತಾಂಧ ಶಕ್ತಿಗಳಿಂದ ಹಲ್ಲೆ, ಗಲಾಟೆ ಹಾಗೂ ಹಬ್ಬದ ಸಂಭ್ರಮವನ್ನು ಹಾಳು ಮಾಡುವ ಘಟನೆಗಳು ನಡೆದಿರುವುದು ಸಂವಿಧಾನಾತ್ಮಕ ಮೌಲ್ಯಗಳಲ್ಲಿ ನಂಬಿಕೆ ಇಟ್ಟು ಬದುಕುತ್ತಿರುವ ಕ್ರೈಸ್ತ ಸಮುದಾಯಕ್ಕೆ ತೀವ್ರ ನೋವು ತಂದಿದೆ. ಕ್ರೈಸ್ತರ ಸಂಪ್ರದಾಯಗಳ ಮೇಲೆ ಇತ್ತೀಚೆಗೆ ನಡೆದ ದಾಳಿಗಳು ಕೇವಲ ಒಂದು ಸಮುದಾಯದ ಮೇಲಿನ ಹಲ್ಲೆಯಲ್ಲ, ಬದಲಾಗಿ ಭಾರತದ ಸಾಂವಿಧಾನಿಕ ಮೌಲ್ಯಗಳ ಮೇಲಿನ ದಾಳಿಗಳಾಗಿವೆ. ಆರಾಧನೆಯ ಸ್ವಾತಂತ್ರ್ಯಕ್ಕೆ ಬೆದರಿಕೆ ಹಾಕುವುದು ಸಂವಿಧಾನ ವಿರೋಧಿ ಕೃತ್ಯವಾಗಿದ್ದು, ಇದು ಪ್ರಜಾಪ್ರಭುತ್ವದ ಮೂಲ ತತ್ವಗಳಿಗೆ ಧಕ್ಕೆ ತರುವಂತಹದ್ದು. ಈ ದೇಶದಲ್ಲಿ ಪ್ರತಿಯೊಬ್ಬರಿಗೂ ತಮ್ಮ ಧರ್ಮವನ್ನು ಪಾಲನೆ ಮಾಡಲು ಸಂವಿಧಾನ ಸೂಕ್ತ ಅವಕಾಶ ನೀಡಿದ್ದು ಜಾತ್ಯಾತೀತ ರಾಷ್ಟ್ರದಲ್ಲಿ ನಡೆಯುತ್ತಿರುವ ಇಂತಹ ದೌರ್ಜನ್ಯಗಳು ಖಂಡನೀಯವಾಗಿದೆ. ↘ 2ನೇ ಪುಟಕ್ಕೆ

### ಕ್ರಿಸ್ಮಸ್ ಆಚರಣೆಯನ್ನು ಧ್ವಂಸಗೊಳಿಸುತ್ತಿರುವುದು ಖಂಡನೀಯ

ಬೆಂಗಳೂರಿನ ಕಾರ್ಯ ಕ್ರಮವೊಂದಕ್ಕೆ ಉದ್ದೇಶ ಪೂರ್ವಕವಾಗಿ ಪ್ರವೇಶ ಮಾಡಿ ಸತ್ಯ ನಿಷ್ಠ ಆರ್ಯ ಮತ್ತು ಆತನ ಬೆಂಬಲಿಗರು ಚರ್ಚಿನ ಪಾದ್ರಿಯೋರ್ವರಿಗೆ ಬೆದರಿಕೆ ಹಾಕಿರುವುದು ಸಂವಿಧಾನದ ಆಶಯಗಳ ವಿರುದ್ಧ ನಡೆಯು ತ್ತಿರುವ ಹಲ್ಲೆಯಾಗಿದೆ. ದೇಶದ ಪ್ರಧಾನಿ ದೆಹಲಿ ಚರ್ಚಿಗೆ ಹೋಗಿ ಕ್ರಿಸ್ಮಸ್ ಪ್ರಾರ್ಥನೆಯಲ್ಲಿ ಪಾಲ್ಗೊಳ್ಳುತ್ತಿದ್ದರೆ ಅದೇ ಸಮಯದಲ್ಲಿ ಹೊರಗಡೆ ದೇಶದ ವಿವಿಧ ರಾಜ್ಯಗಳಲ್ಲಿ ಮತಾಂಧ ಶಕ್ತಿಗಳು ಕ್ರಿಸ್ಮಸ್ ಆಚರಣೆಯನ್ನು ಧ್ವಂಸಗೊಳಿಸುತ್ತಿರುವುದು ಖಂಡನೀಯ.

ಚಿತ್ರ: ಸ್ಟಾರ್ ಸ್ಟುಡಿಯೋ ಉಳ್ಳಾಲ



ತೊಕ್ಕೊಟ್ಟು ಸಂತ ಸೆಬೆಸ್ತಿಯನ್ನರ ಇಗರ್ಜಿ ಕ್ರಿಸ್ಮಸ್ ಪ್ರಯುಕ್ತ ವಿದ್ಯುತ್ ದೀಪಗಳಿಂದ ಅಲಂಕೃತಗೊಂಡಿರುವುದು.

## ಸಂಪಾದಕೀಯ

# ಮದ್ಯಪಾನ ಹೇಗೆ ಮಾಡಬೇಕು? ವೈಜ್ಞಾನಿಕ ಮತ್ತು ಆರೋಗ್ಯಪರ ದೃಷ್ಟಿಕೋನ

ಮದ್ಯಪಾನ ಎಂಬುದು ಶತಮಾನಗಳಿಂದಲೂ ಮಾನವ ಸಮಾಜದೊಂದಿಗೆ ಬೆಸೆದುಕೊಂಡಿರುವ ಒಂದು ಸಾಮಾಜಿಕ ವಾಸ್ತವ. ಇದನ್ನು ಸಂಪೂರ್ಣವಾಗಿ ನಿರಾಕರಿಸುವ ಪ್ರಯತ್ನಗಳು ಹಲವಾರು ಬಾರಿ ವಿಫಲವಾಗಿವೆ ಎಂಬುದು ಇತಿಹಾಸವೇ ಸಾಕ್ಷಿ. ಆದ್ದರಿಂದ ಮದ್ಯಪಾನವನ್ನು ನಿಷೇಧಿಸುವುದಕ್ಕಿಂತಲೂ, ಅದನ್ನು ವೈಜ್ಞಾನಿಕ, ಆರೋಗ್ಯಪರ ಮತ್ತು ಹೊಣೆಗಾರಿಕೆಯ ಚೌಕಟ್ಟಿನಲ್ಲಿ ನಿಯಂತ್ರಿಸುವುದು ಸಮಾಜದ ಹಿತಕ್ಕೆ ಹೆಚ್ಚು ಸೂಕ್ತವೆನ್ನಿಸುತ್ತದೆ.

ಇದಕ್ಕೆ ಅತ್ಯುತ್ತಮ ಉದಾಹರಣೆಯಾಗಿ ಸೈನ್ಯ ವ್ಯವಸ್ಥೆ ನಮ್ಮ ಮುಂದಿದೆ. ಭಾರತೀಯ ಸೈನ್ಯದಲ್ಲಿ ಮಿಲಿಟರಿ ಸಿಬ್ಬಂದಿಗೆ ಮದ್ಯಪಾನಕ್ಕೆ ಅವಕಾಶವಿದ್ದರೂ, ಅದು ಕಟ್ಟುನಿಟ್ಟಾದ ನಿಯಮಗಳು, ಸಮಯ, ಪ್ರಮಾಣ ಮತ್ತು ಶಿಸ್ತುಬದ್ಧ ನಿಯಂತ್ರಣದ ಒಳಗಿದೆ. ಅಲ್ಲಿ ಮದ್ಯಪಾನ ಸ್ವೈರಾಚಾರವಲ್ಲ; ಅದು ಆರೋಗ್ಯ, ಕಾರ್ಯಕ್ಷಮತೆ ಮತ್ತು



ಹೊಣೆಗಾರಿಕೆಯೊಂದಿಗೆ ಜೋಡಿಸಲಾದ ಕ್ರಮ. ಇದೇ ಮಾದರಿಯನ್ನು ನಾಗರಿಕ ಸಮಾಜದಲ್ಲೂ ಅಳವಡಿಸುವ ಕುರಿತು ಗಂಭೀರ ಚರ್ಚೆ ಅಗತ್ಯವಾಗಿದೆ. ಮದ್ಯಪಾನಕ್ಕೆ ಅವಕಾಶ ನೀಡುವ ಮೊದಲು ವೈದ್ಯಕೀಯ ಅನುಮತಿ ಕಡ್ಡಾಯವಾಗಬೇಕು. ವ್ಯಕ್ತಿಯ ವಯಸ್ಸು, ದೈಹಿಕ ಸ್ಥಿತಿ, ರಕ್ತದೊತ್ತಡ, ಲಿವರ್ ಆರೋಗ್ಯ, ಹೃದಯ ಸಂಬಂಧಿತ ಸಮಸ್ಯೆಗಳು ಸೇರಿದಂತೆ ಹಲವು ಅಂಶಗಳನ್ನು ವೈದ್ಯರು ಪರಿಶೀಲಿಸಬೇಕು. ಈ ಆಧಾರದ ಮೇಲೆ ವೈದ್ಯಕೀಯ ಪ್ರಮಾಣಪತ್ರ ನೀಡಿದವರಿಗೆ ಮಾತ್ರ ನಿಯಂತ್ರಿತ ಪ್ರಮಾಣದಲ್ಲಿ ಮದ್ಯಪಾನಕ್ಕೆ ಅವಕಾಶ ಇರಬೇಕು. ಈ ವ್ಯವಸ್ಥೆಯನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲು ಅಬಕಾರಿ ಇಲಾಖೆ ಮತ್ತು ವೈದ್ಯಕೀಯ ಇಲಾಖೆ ಸಂಯುಕ್ತವಾಗಿ ನೀತಿ ರೂಪಿಸಬೇಕು. ಮದ್ಯಪಾನವನ್ನು ಕೇವಲ ಆದಾಯ ಮೂಲವಾಗಿ ನೋಡದೆ, ಸಾರ್ವಜನಿಕ ಆರೋಗ್ಯದ ವಿಚಾರವಾಗಿ ಪರಿಗಣಿಸುವ ದೃಷ್ಟಿಕೋನ ಇದರಿಂದ ಬೆಳೆಸಬಹುದು. ಇಂದಿನ ಸಮಾಜದಲ್ಲಿ ಮದ್ಯಪಾನದ ದುಷ್ಪರಿಣಾಮಗಳಿಗೆ ಪ್ರಮುಖ ಕಾರಣವಾಗಿರುವುದು ರಾಸಾಯನಿಕವಾಗಿ ಸಂಸ್ಕರಿಸಲಾದ ಮದ್ಯಗಳು. ಇದಕ್ಕೆ ಪರ್ಯಾಯವಾಗಿ, ನಮ್ಮ ಪರಂಪರೆಯಲ್ಲಿ ಬೆಳೆದು ಬಂದ ನೈಸರ್ಗಿಕ ಅಲ್ಕೋಹಾಲ್ ಪೇಯಗಳು, ಶೇಂದಿ, ನೀರಾ, ಗೇರು ಹಣ್ಣಿನ ಪೇಯ, ದ್ರಾಕ್ಷಿ ವೈನ್ ಮೊದಲಾದವುಗಳನ್ನು ನಿಯಂತ್ರಿತ ಪ್ರಮಾಣದಲ್ಲಿ ಲಭ್ಯವಾಗುವಂತೆ ಮಾಡಬೇಕು.

ಇದರಿಂದ ಆರೋಗ್ಯ ರಕ್ಷಣೆಗೆ ಸಹಕಾರ , ಸ್ಥಳೀಯ ಕೃಷಿ ಮತ್ತು ಗ್ರಾಮೀಣ ಆರ್ಥಿಕತೆಗೆ ಉತ್ತೇಜನ, ಪಾರಂಪರಿಕ ಆಹಾರ ಪಾನ ಸಂಸ್ಕೃತಿಯ ಸಂರಕ್ಷಣೆ, ಮದ್ಯ ಅಂಗಡಿಗಳ ಪರ್ಯಾಯ ವ್ಯವಸ್ಥೆ ಪ್ರಸ್ತುತ ಇರುವ ಮದ್ಯ ಅಂಗಡಿಗಳು ನಿಯಂತ್ರಣವಿಲ್ಲದ ಮದ್ಯಪಾನಕ್ಕೆ ಕಾರಣವಾಗುತ್ತಿರುವುದು ನಿರಾಕರಣೀಯ ಸತ್ಯ. ಆದ್ದರಿಂದ ಇವುಗಳನ್ನು ಹಂತ ಹಂತವಾಗಿ ಬಂದ್ ಮಾಡಿ, ಆಧಾರ್ ಕಾರ್ಡ್ ಆಧಾರಿತ ವಯಸ್ಸು ಮತ್ತು ಆರೋಗ್ಯ ಪ್ರಮಾಣಪತ್ರದ ಮೂಲಕ ಮಾತ್ರ ಮದ್ಯ ಸರಬರಾಜು ಮಾಡುವ ವ್ಯವಸ್ಥೆ ತರಬೇಕಾಗಿದೆ.

ಸರಕಾರದ ಆರೋಗ್ಯ ಹಾಗೂ ಅಬಕಾರಿ ಇಲಾಖೆಗಳ ಮೂಲಕ ಈ ವ್ಯವಸ್ಥೆ ಜಾರಿಯಾದರೆ, ಅತಿಮದ್ಯಪಾನ, ಕಳ್ಳ ಮದ್ಯ, ಅಪರಾಧ ಪ್ರವೃತ್ತಿ, ಕುಟುಂಬ ಮತ್ತು ಸಾಮಾಜಿಕ ಸಮಸ್ಯೆಗಳು ಗಣನೀಯವಾಗಿ ಕಡಿಮೆಯಾಗುವ ಸಾಧ್ಯತೆ ಇದೆ. ಮದ್ಯಪಾನವನ್ನು ವೈಯಕ್ತಿಕ ಸ್ವಾತಂತ್ರ್ಯ ಎಂದು ಮಾತ್ರ ನೋಡುವ ಮನೋಭಾವವೇ ಬಹುತೇಕ ಸಮಸ್ಯೆಗಳ ಮೂಲ. ವಾಸ್ತವವಾಗಿ, ಮದ್ಯಪಾನವು ಒಂದು ಆರೋಗ್ಯ ಸಂಬಂಧಿತ ನಿರ್ಧಾರ. ಅದು ವ್ಯಕ್ತಿಯ ಜೀವನಕ್ಕಷ್ಟೇ ಅಲ್ಲ, ಕುಟುಂಬ, ಸಮಾಜ ಮತ್ತು ಮುಂದಿನ ಪೀಳಿಗೆಯ ಮೇಲೂ ಪರಿಣಾಮ ಬೀರುತ್ತದೆ. ಆದ್ದರಿಂದ, ಮದ್ಯಪಾನ ಸ್ವಾತಂತ್ರ್ಯವಲ್ಲ; ಅದು ಹೊಣೆಗಾರಿಕೆಯೊಂದಿಗೆ ನಡೆಸಬೇಕಾದ ಆರೋಗ್ಯ ನಿರ್ಧಾರ. ವೈಜ್ಞಾನಿಕ ನಿಯಂತ್ರಣ, ವೈದ್ಯಕೀಯ ಮೇಲ್ವಿಚಾರಣೆ ಮತ್ತು ಸಾಮಾಜಿಕ ಹೊಣೆಗಾರಿಕೆಯ ಸಮನ್ವಯವೇ ಆರೋಗ್ಯಕರ ಸಮಾಜದ ದಾರಿ. ಮದ್ಯಪಾನವನ್ನು ಸಮಾಜದ ಶತ್ರುವಾಗಿ ಅಲ್ಲ, ಆದರೆ ನಿಯಂತ್ರಣ ಅಗತ್ಯವಿರುವ ವಾಸ್ತವವಾಗಿ ನೋಡಿದಾಗ ಮಾತ್ರ ಸಮತೋಲನದ, ಆರೋಗ್ಯಕರ ಮತ್ತು ಸುರಕ್ಷಿತ ಸಮಾಜವನ್ನು ನಿರ್ಮಿಸಬಹುದು.

**ಸಂಪಾದಕ**

# ಕ್ರಿಸ್ಮಸ್ ಹಬ್ಬದ ವೇಳೆ ಕ್ರೈಸ್ತ ಸಮುದಾಯದ ಮೇಲಿನ ದಾಳಿ

↗1ನೇ ಪುಟದಿಂದ

ಹಬ್ಬದ ಆಚರಣೆಯ ಸಂದರ್ಭದಲ್ಲಿ ಅಶಾಂತಿಯನ್ನು ಸೃಷ್ಟಿಸುವ ಹುನ್ನಾರ ಮೂಲಭೂತವಾದಿ ಗುಂಪುಗಳು ಹೊಂದಿದ್ದು ಇಂತಹವರ ವಿರುದ್ಧ ಸರಕಾರಗಳು ಕಠಿಣ ಕಾನೂನು ಕ್ರಮ ಜರುಗಿಸಬೇಕು. ಈ ಮೂಲಕ ದೇಶದಲ್ಲಿ ಕ್ರೈಸ್ತ ಬಾಂಧವರು ಶಾಂತಿಯುತವಾಗಿ ನೆಮ್ಮದಿಯಿಂದ ಬದುಕು ಸಾಗಿಸಲು ಕೇಂದ್ರ ಹಾಗೂ ರಾಜ್ಯ ಸರಕಾರಗಳು ಕ್ರಮವಹಿಸಬೇಕು ಎಂದು ಅವರು ಪ್ರಕಟನೆಯಲ್ಲಿ ಒತ್ತಾಯಿಸಿದ್ದಾರೆ.

### ಕುಂಪಲ ಬಾಲಕೃಷ್ಣ ಮಹಿಳಾ ಸೇವಾ ಸಮಿತಿಯ ಬೆಳ್ಳಿ ಹಬ್ಬ “ರಜತ ರುಕ್ಮಿಣಿ” ಉದ್ಘಾಟನೆ

# ಸೇವೆ–ಸಮರ್ಪಣೆಯೇ ಮಹಿಳೆಯ ಸಹಜ ಗುಣ: ಒಡಿಯೂರು ಶ್ರೀ ಮಾತಾನಂದಮಯೀ

**ಉಳ್ಳಾಲ:** ಮಹಿಳೆಯರ ಸಂಕಲ್ಪ ಮತ್ತು ಶ್ರಮಕ್ಕೆ ಮಿತಿ ಇಲ್ಲ ಎಂಬುದನ್ನು ಕುಂಪಲದ ಬಾಲಕೃಷ್ಣ ಮಹಿಳಾ ಸೇವಾ ಸಮಿತಿಯ ಕಾರ್ಯಚಟುವಟಿಕೆಗಳು ಸ್ಪಷ್ಟವಾಗಿ ತೋರಿಸುತ್ತವೆ. ಸೇವೆ ಮತ್ತು ಸಮರ್ಪಣೆಯ ಮನೋಭಾವ ಮಹಿಳೆಯರಲ್ಲಿ ಸಹಜವಾಗಿ ಅಡಗಿರುವ ಗುಣವಾಗಿದ್ದು, ಧಾರ್ಮಿಕವಾಗಲಿ ಅಥವಾ ಸಾಮಾಜಿಕವಾಗಲಿ ಯಾವುದೇ ಕಾರ್ಯದಲ್ಲಿ ಅವರು ಪೂರ್ಣ ಮನಸ್ಸಿನಿಂದ ತೊಡಗಿಸಿಕೊಳ್ಳುತ್ತಾರೆ. ನಮ್ಮೊಳಗಿನ ದುರ್ಗುಣಗಳನ್ನು ತ್ಯಜಿಸಿ, ಭಗವಂತನ ನಾಮಸ್ಮರಣೆಯ ಮೂಲಕ ಅಂತರಂಗವನ್ನು ಶುದ್ಧಗೊಳಿಸಿ, ಆತ್ಮವಿಕಾಸದ ಕೃಷಿಯನ್ನು ನಡೆಸುವುದು ಪ್ರತಿಯೊಬ್ಬರ ಕರ್ತವ್ಯವೆಂಬ ಸಂದೇಶವನ್ನು ಈ ಮಹಿಳೆಯರು ತಮ್ಮ ಬದುಕಿನ ಮೂಲಕ ಸಾರುತ್ತಿದ್ದಾರೆ.ಒಡಿಯೂರು ಶ್ರೀ ಗುರುದೇವದತ್ತ ಸಂಸ್ಥಾನಮ್ ನ ಶ್ರೀ ಮಾತಾನಂದಮಯೀ ಆಶಿಸಿದರು. ಕುಂಪಲದ ಶ್ರೀ ಬಾಲಕೃಷ್ಣ ಮಂದಿರದ ಅಂಗ ಸಂಸ್ಥೆಯಾದ ಶ್ರೀ ಬಾಲಕೃಷ್ಣ ಮಹಿಳಾ ಸೇವಾ ಸಮಿತಿಯ ಬೆಳ್ಳಿ ಹಬ್ಬದ ಪ್ರಯುಕ್ತ ಭಾನುವಾರದಂದು ಕುಂಪಲ ಬಾಲಕೃಷ್ಣ ಮಂದಿರದ ಕೃಷ್ಣಾಂಗಣದಲ್ಲಿ ಉದ್ಘಾಟನೆಗೊಂಡ "ರಜತ ರುಕ್ಮಿಣಿ" ಸಮಾರಂಭವನ್ನುದ್ದೇಶಿಸಿ ಅವರು ಆಶೀರ್ವಚನದ ಮಾತುಗಳನ್ನಾಡಿದರು.ಬಾಲಕೃಷ್ಣ ಮಂದಿರದಲ್ಲಿ ನಿತ್ಯ ಕೃಷ್ಣನ ನಾಮಸ್ಮರಣೆ ನಡೆಯುತ್ತಿರುವುದರಿಂದಲೇ ಕುಂಪಲದ



ಹೆಸರು ಇಂದು ದೇಶಾದ್ಯಂತ ಪಸರಿಸಿದೆ. ಇಂದು ನೆರವೇರಿದ ರಜತ ರುಕ್ಮಿಣಿ ಕಾರ್ಯಕ್ರಮವು ಸ್ವರ್ಣ ರುಕ್ಮಿಣಿ ಸಮಾರಂಭಕ್ಕೆ ಪ್ರೇರೇಪಣೆಯಾಗಲೆಂದು ಶುಭ ಹಾರೈಸಿದರು. ಮಂಗಳೂರು ವಿಶ್ವವಿದ್ಯಾಲಯದ ಸಹಾಯಕ ಪ್ರಾಧ್ಯಾಪಕಿ ಡಾ.ಭಾರತಿ ಗಟ್ಟಿ ಪಿಲಾರು ಮಾತನಾಡಿ ಭಗವಾನ್ ಶ್ರೀಕೃಷ್ಣನು ಸಾರಿದ ಭಗವದ್ಗೀತೆಯ ಸಂದೇಶಗಳು ಸರ್ವಕಾಲಿಕವಾಗಿದೆ.ಕೃಷ್ಣನ ಆರಾಧನೆಯ ಮೂಲಕ ಕುಂಪಲದ ಬಾಲಕೃಷ್ಣ ಮಂದಿರವು ಜಿಲ್ಲೆಯಲ್ಲೇ ಪ್ರಸಿದ್ಧಿಯನ್ನು ಪಡೆದಿದೆ.ಭಜನಾ ಮಂದಿರಗಳು ಊರಿಗೆ ಜೀವಾಳವಾಗಿದ್ದು ಸ್ವಸ್ಥ ಸಮಾಜ ನಿರ್ಮಾಣದಲ್ಲಿ ಪ್ರಮುಖ ಪಾತ್ರವಹಿಸುತ್ತಿವೆಯೆಂದರು. ಉದ್ಯಮಿ ಮೋಹನ ಕುಮಾರಿ ರಜತ ರುಕ್ಮಿಣಿ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಪ್ರಗತಿಪರ ಕೃಷಿಕರಾದ ಪಿಲಾರು ಮೇಗಿನಮನೆಯ ಮೀನಾಕ್ಷಿ ಸೀತಾರಾಮ ಶೆಟ್ಟಿ ಅವರು ದಕ್ಷಿಣ ಕನ್ನಡ–ಕಾಸರಗೋಡು ಉಭಯ ಜಿಲ್ಲಾ ಮಟ್ಟದ ಮಹಿಳೆಯರ "ಮಾತೃವಾಣಿ"ಭಜನಾ ಸ್ಪರ್ಧೆಗೆ ಚಾಲನೆ ನೀಡಿದರು.

> **ಭಜನೆಯಂತಹ ದೈವಿಕ ಕಾರ್ಯಗಳಲ್ಲಿ ಒಲವು ಮೂಡಿಸಲು ಪೋಷಕರು ತಮ್ಮ ಮಕ್ಕಳನ್ನ ಪ್ರೇರೇಪಿಸಬೇಕು. ಆಧುನಿಕ ಜೀವನ ಪದ್ಧತಿಯಲ್ಲಿ ಒತ್ತಡ,ಆತಂಕಗಳು ಹೆಚ್ಚಾಗಿ ರೋಗಗಳು ಭಾದಿಸಿದಾಗ ನಾವು ಔಷಧಗಳಿಗೆ ಮೊರೆ ಹೋಗುತ್ತೇವೆಯೇ ಹೊರತು ಎಲ್ಲಾ ಸಮಸ್ಯೆಗಳಿಗೂ ಪರಿಹಾರ ನೀಡುವ ಭಗವಂತನನ್ನ ಮಾತ್ರ ಮರೆತೇ ಬಿಟ್ಟಿದ್ದೇವೆ. ನಗರವಾಸಿಗಳೇ ಇಂದು ನೆಮ್ಮದಿ, ಶಾಂತಿಯ ಜೀವನ ಕಂಡುಕೊಳ್ಳಲು ಹಳ್ಳಿಯತ್ತ ಮುಖಮಾಡುತ್ತಿದ್ದು ಹಳೆಯ ಸಂಸ್ಕೃತಿ,ಜೀವನ ಪದ್ಧತಿಗಳೇ ಜನರನ್ನ ಮತ್ತೆ ಆಕರ್ಷಿಸುತ್ತಿದೆ.**
>
> ■ ಡಾ.ಭಾರತಿ ಗಟ್ಟಿ ಪಿಲಾರು.ಸಹ ಪ್ರಾಧ್ಯಾಪಕರು,ಮಂಗಳೂರು ವಿವಿ.

ಕರ್ನಾಟಕ ಜನಪದ ಪರಿಷತ್ ಉಳ್ಳಾಲ ಘಟಕದ ಅಧ್ಯಕ್ಷರಾಗಿ ನೇಮಕಗೊಂಡ ಬಾಲಕೃಷ್ಣ ಮಂದಿರದ ಸಂಘಟನಾ ಕಾರ್ಯದರ್ಶಿ ಪ್ರವೀಣ್ ಎಸ್.ಕುಂಪಲ ಅವರನ್ನ ವೇದಿಕೆಯಲ್ಲಿ ಸನ್ಮಾನಿಸಲಾಯಿತು. ಬಿಜೆಪಿ ಮಹಿಳಾ ಮೋರ್ಚದ ಜಿಲ್ಲಾಧ್ಯಕ್ಷರಾದ ಡಾ.ಮಂಜುಳಾ ರಾವ್ ಅಧ್ಯಕ್ಷತೆ ವಹಿಸಿದ್ದರು.ಮನಪಾ ಸದಸ್ಯರಾದ ಶ್ವೇತಾ ಪೂಜಾರಿ,ತೊಕ್ಕೊಟ್ಟು ಶಕ್ತಿ ಕಾಂಪ್ಲೆಕ್ಸ್ ಮಾಲಕರಾದ ಮಧುಶ್ರೀ ಸುರೇಶ್ ಭಟ್ನಗರ,ಸೋಮೇಶ್ವರ ಪುರಸಭೆ ಅಧ್ಯಕ್ಷರಾದ ಕಮಲ ,ಕೋಟೆಕಾರು ಪಟ್ಟಣ ಪಂಚಾಯತ್ ಅಧ್ಯಕ್ಷರಾದ ದಿವ್ಯಾ ಶೆಟ್ಟಿ,ಸೂರ್ಯಕಾಂತಿ ಚಾರಿಟೇಬಲ್ ಫೌಂಡೇಷನ್ ಅಧ್ಯಕ್ಷರಾದ ವಿದ್ಯಾ ರಾಕೇಶ್ ,ಕಾಸರಗೋಡಿನ ಕಂದಾಯಾಧಿಕಾರಿ ಸ್ವಪ್ನ ಗಣೇಶ್ ,ಜಿಲ್ಲಾ ಸಣ್ಣ ಕೈಗಾರಿಕಾ ಸಂಘದ ಅಧ್ಯಕ್ಷರಾದ ಕುಸುಮ ಹೆಚ್.ದೇವಾಡಿಗ,ಭುವನ್ ಕನ್ ಸ್ಟ್ರಕ್ಷನ್ಸ್ ನಿರ್ದೇಶಕಿ ಗಾಯತ್ರಿ ಸುಂದರಗಟ್ಟಿ,ಬಾಲಕೃಷ್ಣ ಮಹಿಳಾ ಸೇವಾ ಸಮಿತಿಯ ಗೌರವಾಧ್ಯಕ್ಷರಾದ ವಿನಯ ಪ್ರಭಾಕರ್ ,ಅಧ್ಯಕ್ಷರಾದ ಜಯಲಕ್ಷ್ಮಿ ಬಿ.ಜೆ ಮೊದಲಾದವರು ಉಪಸ್ಥಿತರಿದ್ದರು. ಬಾಲಕೃಷ್ಣ ಮಹಿಳಾ ಸೇವಾ ಸಮಿತಿಯ ಪ್ರಧಾನ ಕಾರ್ಯದರ್ಶಿ ಮಮತ ಸತೀಶ್ ಕುಂಪಲ ಸ್ವಾಗತಿಸಿದರು.ಪ್ರವೀಣ್ ಎಸ್.ಕುಂಪಲ ಮತ್ತು ಕೃಷ್ಣ ಪೊಣ್ಣೆತ್ತೋಡು ನಿರೂಪಿಸಿದರು.ಸುಮಂಗಲ ಗಿರೀಶ್ ವಂದಿಸಿದರು.

# ಹೊಸ ವರ್ಷದ ಸಂಕಲ್ಪ, ಕಣಂತೂರು ಕ್ಷೇತ್ರಕ್ಕೆ ಸಾವಿರ ಬಟ್ಟೆಚೀಲ ಯೋಜನೆ

**ಉಳ್ಳಾಲ:** ಪ್ಲಾಸ್ಟಿಕ್ ಬಳಕೆ ಕಡಿಮೆ ಮಾಡುವ ನಿಟ್ಟಿನಲ್ಲಿ ಧರ್ಮಗುರುಗಳ ಮೂಲಕ ಇನ್ನಷ್ಟು ಜಾಗೃತಿ ಮಾಡಿಸುವ ಕಾರ್ಯಕ್ರಮದಲ್ಲಿ ಯಶಸ್ಸು ಗಳಿಸುವ ವಿಶ್ವಾಸ ಇದೆ, ಪ್ರತಿಯೊಬ್ಬರೂ ಅಂಗಡಿಗೆ ಹೋಗುವಾಗ ಬಟ್ಟೆ ಚೀಲ ಕೊಂಡೊಯ್ದಾಗ ಪ್ಲಾಸ್ಟಿಕ್ ಬಳಕೆ ಕಡಿಮೆ ಮಾಡಲು ಸಾಧ್ಯ ಎಂದು ಬಾಳೆಪುಣಿ ಜನಜೀವನ ಅಧ್ಯಕ್ಷ ರಮೇಶ್ ಶೇಣವ ಅಭಿಪ್ರಾಯಪಟ್ಟರು. ಜನಶಿಕ್ಷಣ ಟ್ರಸ್ಟ್ ಆಶ್ರಯದಲ್ಲಿ ಸ್ಟೈಲ್ ಸ್ಕಿಲ್ ಸ್ಕೂಲ್ ವತಿಯಿಂದ ಹೊಸ ವರ್ಷದ ಸಂಕಲ್ಪವಾಗಿ ಕಣಂತೂರು ಶ್ರೀ ತೋಡಕುಕ್ಕಿನಾರ್ ಕ್ಷೇತ್ರಕ್ಕೆ ಸಾವಿರ ಬಟ್ಟೆಚೀಲ ಕೊಡುಗೆ ಯೋಜನೆ ಉದ್ಘಾಟಿಸಿ ಮಾತನಾಡಿದರು. ಬಾಳೆಪುಣಿ ಜನಜೀವನ



ಗೌರವಾಧ್ಯಕ್ಷ ರಾಧಾಕೃಷ್ಣ ರೈ ಉಮಿಯ ಮಾತನಾಡಿ, ಇಂದಿಗೂ ರಸ್ತೆಬದಿ ಕಸದ ರಾಶಿ ಕಾಣಲು ಸಿಗುತ್ತಿದ್ದು ಜನರು ಪೂರ್ಣಪ್ರಮಾಣದಲ್ಲಿ ಪರಿವರ್ತನೆಯಾಗಿಲ್ಲ ಎನ್ನುವುದು ತೋರಿಸುತ್ತದೆ ಎಂದರು. ಕಣಂತೂ ರು ಕ್ಷೇತ್ರದ ಆಡಳಿತ ಮೊಕ್ತೇಸರ ದೇವಿಪ್ರಸಾದ್ ಪೊಯ್ಯತ್ತಬೈಲ್ ಮಾತನಾಡಿ, ಕ್ಷೇತ್ರದಲ್ಲಿ ಈಗಾ ಗಲೇ ಪ್ಲಾಸ್ಟಿಕ್ ಚೀಲ ಬದಲು ಸೆಣಬಿನ ಚೀಲ ಬಳಸಲಾಗುತ್ತಿದೆ. ಪ್ಲಾಸ್ಟಿಕ್ ಹಲವು ವರ್ಷಗಳ ಪಿಡುಗು. ನಿಷೇಧಕ್ಕೆ ಸರ್ಕಾರ ಮುಂದಾಗಬೇಕು. ಪ್ಲಾಸ್ಟಿಕ್ ವಿಚಾರದಲ್ಲಿ ಮಹಿಳೆಯರ ಪಾತ್ರ ಮಹತ್ವದ್ದು. ಸುಂದರ ಪರಿಸರ ನಿರ್ಮಾಣ ನಮ್ಮ ಗುರಿಯಾಗಲಿ ಎಂದರು. ಕಲಾವಿದ ದಿನೇಶ್ ನಡಾರ್, ಸಾಹಿತಿ ಚಂದ್ರಹಾಸ ಕಣಂತೂರು, ಕಮಲಾಕ್ಷ ಶೆಟ್ಟಿ ಮೊದಲಾದವರು ಉಪಸ್ಥಿತರಿದ್ದರು.

ಜಿಲ್ಲಾ ಸ್ವಚ್ಛತಾ ರಾಯಭಾರಿ ಶೀನ ಶೆಟ್ಟಿ ಹಾಗೂ ಜನಶಿಕ್ಷಣ ಟ್ರಸ್ಟ್ ನಿರ್ದೇಶಕ ಕೃಷ್ಣ ಮೂಲ್ಯ ಕಾರ್ಯಕ್ರಮ ನಿರೂಪಿಸಿದರು.

# ವೀರರಾಣಿ ಅಬ್ಬಕ್ಕ ಉತ್ಸವ 2025–26, ವೀರರಾಣಿ ಅಬ್ಬಕ್ಕ ಪ್ರಶಸ್ತಿ : ವೀರರಾಣಿ ಅಬ್ಬಕ್ಕ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

**ಉಳ್ಳಾಲ:** ಉಳ್ಳಾಲ ವೀರರಾಣಿ ಅಬ್ಬಕ್ಕ ಉತ್ಸವ ಸಮಿತಿ ವತಿಯಿಂದ 2026ರ ಫೆಬ್ರವರಿ–14ನೇ ಶನಿವಾರದಂದು ಜರಗುವ ವೀರರಾಣಿ ಅಬ್ಬಕ್ಕ ಉತ್ಸವದಲ್ಲಿ ಓರ್ವ ಮಹಿಳಾ ಸಾಧಕಿಗೆ ವೀರರಾಣಿ ಅಬ್ಬಕ್ಕ ಪ್ರಶಸ್ತಿ ,ಮತ್ತೋರ್ವ ಮಹಿಳಾ ಸಾಧಕಿಗೆ ವೀರರಾಣಿ ಅಬ್ಬಕ್ಕ ಪುರಸ್ಕಾರವನ್ನು ನೀಡಲು ನಿರ್ಧರಿಸಲಾಗಿದೆ. ಉಳ್ಳಾಲ ವೀರರಾಣಿ ಅಬ್ಬಕ್ಕ ಉತ್ಸವ ಸಮಿತಿ ವತಿಯಿಂದ ನೀಡಲಾಗುವ ಈ ಪ್ರಶಸ್ತಿಗಳು ನಗದು ಮತ್ತು ಪ್ರಶಸ್ತಿ ಫಲಕಗಳನ್ನು ಒಳಗೊಂಡಿರುತ್ತದೆ.

**ವೀರರಾಣಿ ಅಬ್ಬಕ್ಕ ಪುರಸ್ಕಾರ:** ತುಳು ಸಂಸ್ಕೃತಿಯ ಹಿನ್ನೆಲೆಯೊಂದಿಗೆ ಕಲೆ,ಕ್ರೀಡೆ,ಸಮಾಜಸೇವೆ ಇತ್ಯಾದಿ ಕ್ಷೇತ್ರಗಳಲ್ಲಿ ಮಹತ್ವದ ಸಾಧನೆ ಮಾಡಿದ ಮಹಿಳೆಯೋರ್ವರಿಗೆ ಅಬ್ಬಕ್ಕ ಪುರಸ್ಕಾರ ನೀಡಲು ಉದ್ದೇಶಿಸಲಾಗಿದೆ. ಚಲನಚಿತ್ರ, ನಾಟಕ, ಲಲಿತ ಕಲೆಗಳು,ಕ್ರೀಡಾರಂಗ, ನಾಟಿವೈದ್ಯ, ಜನಪದ ಪ್ರಕಾರಗಳಲ್ಲಿರುವ ಪರಿಶ್ರಮಗಳನ್ನು ಗಣನೆಗೆ ತೆಗೆದುಕೊಳ್ಳಲಾಗುವುದು. ಪ್ರಶಸ್ತಿ ಮತ್ತು ಪುರಸ್ಕಾರಗಳಿಗೆ ಅರ್ಹತೆ ಹೊಂದಿದವರು ಅಥವಾ ಅವರ ಬಗ್ಗೆ ತಿಳಿದವರು ದಿನಾಂಕ 15.01.2026 ರೊಳಗೆ ಈ ಕೆಳಗಿನ ವಿಳಾಸಕ್ಕೆ ಮಾಹಿತಿ ನೀಡಲು ಕೋರಲಾಗಿದೆ. (ಈ ಹಿಂದೆ ಪ್ರಶಸ್ತಿಗಾಗಿ ವಿವರಗಳನ್ನು ಕಳುಹಿಸಿ ಕೊಟ್ಟವರು ಪುನ: ಕಳುಹಿಸಿ ಕೊಡುವ ಅವಶ್ಯಕತೆಯಿರುವುದಿಲ್ಲ.) ಸಂಪರ್ಕ ವಿಳಾಸ: ದಿನಕರ ಉಳ್ಳಾಲ್ ಅಧ್ಯಕ್ಷರು, ಉಳ್ಳಾಲ ವೀರರಾಣಿ ಅಬ್ಬಕ್ಕ ಉತ್ಸವ ಸಮಿತಿ(ರಿ) ಅಪ್ಪಯ್ಯ ಮೆನ್ಷನ್, ಪೆರ್ಮನ್ನೂರು ಅಂಚೆ, ಮಂಗಳೂರು – 575017. ದ.ಕ. ಮೊಬೈಲ್:9880088333 / 9343343888 ಈಮೇಲ್:deeceecon@yahoo.co.in

> **ವೀರರಾಣಿ ಅಬ್ಬಕ್ಕ ಪ್ರಶಸ್ತಿ:**
> **ತುಳುನಾಡಿನಲ್ಲಿ ಹುಟ್ಟಿ ಸಾಹಿತ್ಯ,ಸಂಸ್ಕೃತಿ ಮತ್ತು ಸಂಶೋಧನಾ ವಿಭಾಗಗಳಲ್ಲಿ ಗಣನೀಯ ಸಾಧನೆ ಮಾಡಿದ ಓರ್ವ ಮಹಿಳೆಗೆ ಈ ಪ್ರಶಸ್ತಿ ಮೀಸಲಾಗಿದೆ.ನಾಡು,ನುಡಿ ಹಾಗೂ ಪರಂಪರೆಗೆ ನೀಡಿದ ಮಹತ್ವದ ಸೇವೆಯನ್ನು ಇಲ್ಲಿ ಪರಿಗನಿಸಲಾಗುವುದು.**

# ಕಣಚೂರು ಮಹಿಳಾ ಪದವಿ ಪೂರ್ವ ಕಾಲೇಜು ದೇರಳಕಟ್ಟೆ ಇದರ 2025–26ನೇ ಸಾಲಿನ ವಾರ್ಷಿಕೋತ್ಸವ ಕಾರ್ಯಕ್ರಮ

**ಕೊಣಾಜೆ:** ಕಣಚೂರು ಮಹಿಳಾ ಪದವಿ ಪೂರ್ವ ಕಾಲೇಜು ದೇರಳಕಟ್ಟೆ ಇದರ 2025 – 26ನೇ ಸಾಲಿನ ವಾರ್ಷಿಕೋತ್ಸವ ಕಾರ್ಯಕ್ರಮ ಕಾಲೇಜಿನ ಸಭಾಂಗಣದಲ್ಲಿ ನಡೆಯಿತು. ಮುಖ್ಯ ಅತಿಥಿ ಡಾಕ್ಟರ್ ಅಶ್ವಿನಿ ದತ್. ಆರ್ ಶೈಕ್ಷಣಿಕ ಡೀನ್ ಮತ್ತು ಯೆನೆಪೋಯ (ಪರಿಗಣಿತ ವಿಶ್ವವಿದ್ಯಾನಿಲಯ)ವೈದ್ಯಕೀಯ ಕಾಲೇಜಿನ ಶರೀರಶಾಸ್ತ್ರ ಪ್ರಾಧ್ಯಾಪಕರು, ಇವರು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಾ, ‘ವಿದ್ಯಾರ್ಥಿಗಳು ಭವಿಷ್ಯದಲ್ಲಿ ತಮ್ಮ ಆಸಕ್ತಿದಾಯಕ ವೃತ್ತಿಗಳನ್ನು ಹೊಂದಬೇಕು,ಇದರಿಂದ ಸಂತೋಷದಾಯಕ ಜೀವನ ನಮ್ಮದಾಗುತ್ತದೆ’ ಎಂದರು. ಕಾರ್ಯಕ್ರಮದ ಗೌರವಾನ್ವಿತ ಅತಿಥಿ ಪ್ರೊ.ಡಾ.ಎಂ. ಅಬ್ದುಲ್ ರಹಿಮಾನ್, ಕಣ್ಣೂರ್ ಮತ್ತು ಕ್ಯಾಲಿಕಟ್ ವಿಶ್ವವಿದ್ಯಾನಿಲಯದ ಮಾಜಿ ಕುಲಪತಿಗಳು, ಕಣಚೂರ್ ಅಕಾಡೆಮಿ ಆಫ್ ಜನರಲ್ ಎಜುಕೇಶನ್ ಸಲಹಾ ಸಮಿತಿಯ ಅಧ್ಯಕ್ಷರು,ವಿದ್ಯಾರ್ಥಿಗಳಿಗೆ ಹಿತವಚನಗಳನ್ನು



ಹೇಳುತ್ತಾ," ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಕರುಣೆ ಸಹಾನುಭೂತಿಗಳನ್ನು ಹೊಂದಿ ತಮ್ಮ ಪ್ರತಿಭೆಯ ಮೂಲಕ ಆಧುನಿಕ ಶಿಕ್ಷಣವನ್ನು ಪಡೆದು,ಭವಿಷ್ಯವನ್ನು ಉಜ್ವಲಗೊಳಿಸಬೇಕು" ಎಂದರು.ಕಣಚೂರು ಅಕಾಡೆಮಿ ಆಫ್ ಜನರಲ್ ಎಜುಕೇಶನ್ ಸಂಚಾಲಕರಾದ ಅಬ್ದುಲ್ ರೆಹಮಾನ್ ವ್ಯಕ್ತಿಯ ಯಶಸ್ಸಿಗೆ ತನ್ನ ವೃತ್ತಿಯಲ್ಲಿ ಸಹಾನುಭೂತಿ ಮತ್ತು ಕರ್ತವ್ಯನಿಷ್ಠೆ ಬಹಳ ಮುಖ್ಯ .ಶಿಕ್ಷಣ ವ್ಯಕ್ತಿಗೆ ಶಕ್ತಿ ಕೊಡುತ್ತದೆ .ವಿದ್ಯಾರ್ಥಿಗಳು ಇದನ್ನು ಗಳಿಸಬೇಕು ಎಂದರು. ಕಾರ್ಯಕ್ರಮದಲ್ಲಿ 2025 – 26ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ನಡೆಸಲಾದ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು. ಹಾಗೂ ಕಾಲೇಜಿನ ವಾರ್ಷಿಕ ಪ್ರತಿಭಾ ಸಂಚಿಕೆ ಬಿಡುಗಡೆಗೊಳಿಸಲಾಯಿತು. ಕಣಚೂರು ಪದವಿ ಕಾಲೇಜಿನ ಪ್ರಾಂಶುಪಾಲರಾದ ಪ್ರೊಫೆಸರ್ ಇಕ್ಬಾಲ್ ಅಹಮದ್ ಯು ಟಿ, ಕಣಚೂರು ಪಬ್ಲಿಕ್ ಸ್ಕೂಲಿನ ಪ್ರಾಂಶುಪಾಲರಾದ ಕ್ಯಾರನ್ ಡಿಸೋಜ, ಮತ್ತು ಪ್ರೈಮರಿ ಸ್ಕೂಲಿನ ಪ್ರಾಂಶುಪಾಲರಾದ ಲಿನೆಟ್ ಡಿಸೋಜಾ ಹಾಗೂ ವಿದ್ಯಾರ್ಥಿ ಸಂಘದ ಅಧ್ಯಕ್ಷೆ ಆಯಿಶಾ ಅಲೀನಾ ಉಪಸ್ಥಿತರಿದ್ದರು.

ಕಾಲೇಜಿನ ಅರ್ಥಶಾಸ್ತ್ರ ಉಪನ್ಯಾಸಕಿ ಚೇತನ ವಿದ್ಯಾರ್ಥಿಗಳ ಬಹುಮಾನ ವಿತರಿಸಿದರು. ಕಾಲೇಜಿನ ಪ್ರಾಂಶುಪಾಲೆ ಶಾಹಿದಾ ಬಿ. ಎಂ. , ವಾಣಿಜ್ಯ ವಿಭಾಗದ ಉಪನ್ಯಾಸಕಿ ಶಿಬಾನಿ ಅತಿಥಿಗಳನ್ನು ಸ್ವಾಗತಿಸಿದರು.

ದ್ವಿತೀಯ ವಾಣಿಜ್ಯ ವಿಭಾಗದ ವಿದ್ಯಾರ್ಥಿನಿ ಶ್ಯಾರನ್ ಶಲೋನಿ ಮಾಬೆನ್ ನಿರೂಪಿಸಿ, ವಿದ್ಯಾರ್ಥಿ ನಾಯಕಿ ಆಯಿಶಾ ಅಲೀನಾ ವಂದಿಸಿದರು.

# ಮಣಿಪಾಲ ಕೊಣಾಜೆಗೂ ಮೆಟ್ರೋ

↗1ನೇ ಪುಟದಿಂದ

ಸಂಚಾರ, ಪೀಕ್ ಅವರ್ ದಟ್ಟಣೆ ಮತ್ತು ಸಮಯ ನಷ್ಟಗಳನ್ನು ಇದು ಗಣನೀಯವಾಗಿ ಕಡಿಮೆ ಮಾಡುವ ಸಂಭವವಿದೆ. ಮೆಟ್ರೋ ಮಾರ್ಗದರ್ಶನದೊಂದಿಗೆ ರಸ್ತೆ ಮೂಲ ಸೌಕರ್ಯಗಳ ನವೀಕರಣ, ಬಸ್ ಫೀಡರ್ ಸೇವೆಗಳ ಅಭಿವೃದ್ಧಿ ಮತ್ತು ವ್ಯಾಪಾರಿಕ ಚಟುವಟಿಕೆಗಳ ವಿಸ್ತರಣೆಗೆ ಅವಕಾಶ ದೊರೆಯಬಹುದು. ಇದೇ ವೇಳೆ ನಾಲೇಜ್ ಕಾರಿಡಾರ್ ಜೀವಂತಗೊಂಡರೆ, ಶಿಕ್ಷಣ ಹಾಗೂ ವೈದ್ಯಕೀಯ ಪ್ರವಾಸೋದ್ಯಮಕ್ಕೆ ದೊಡ್ಡ ಉತ್ತೇಜನ ಸಿಗುವ ಸಾಧ್ಯತೆ ಇದೆ. ಅನೇಕ ಸಂಸ್ಥೆಗಳ ಮಧ್ಯೆ ಶೈಕ್ಷಣಿಕ–ಸಂಶೋಧನಾ ಸಹಕಾರ ಹೆಚ್ಚುವುದರ ಜೊತೆಗೆ ಅಂತರರಾಷ್ಟ್ರೀಯ ವಿದ್ಯಾರ್ಥಿ ರೋಗಿಗಳ ಚಲನವಲನಕ್ಕೆ ಸಹಾಯಕವಾಗುವ ಮೂಲಸೌಕರ್ಯ ನಿರ್ಮಾಣ ಆಗಲಿದೆ. ಮೆಟ್ರೋ ಮಾರ್ಗವು ಹತ್ತಿರದ ಊರು–ಪಟ್ಟಣಗಳಿಗೂ ಸಂಪರ್ಕ ನೀಡುವ ಮೂಲಕ ಆರ್ಥಿಕ ಚಟುವಟಿಕೆಗಳು ಹೊಸ ಮಟ್ಟ ತಲುಪಲಿವೆ. ಯೋಜನೆ ಪ್ರಸ್ತುತ ಪ್ರಾರಂಭಿಕ ಅವಧಿಯಲ್ಲಿದ್ದು, ತಾಂತ್ರಿಕ–ಆರ್ಥಿಕ ಅಧ್ಯಯನಗಳು, ಸಾಧ್ಯತಾ ವರದಿಗಳು, ಹಾಗೂ ಕೇಂದ್ರ ಮತ್ತು ರಾಜ್ಯ ಮಟ್ಟದ ಅನುಮೋದನೆಗಳು ಮುಂದಿನ ಹಂತವಾಗಿವೆ. ಆದರೆ, ಯು.ಟಿ. ಖಾದರ್ ಅವರ ಪುನಃ ಒತ್ತಾಯ ಈ ಪ್ರದೇಶದ ದೀರ್ಘಕಾಲಿಕ ಅಭಿವೃದ್ಧಿ ನಮೂನೆಯತ್ತ ಸರ್ಕಾರದ ಗಮನ ಸೆಳೆಯುವ ಮಹತ್ವದ ಹೆಜ್ಜೆ ಎಂದು ವಿಶ್ಲೇಷಕರು ಅಭಿಪ್ರಾಯಪಟ್ಟಿದ್ದಾರೆ ಎಂದರು.

ಪಂಚಾಯಿತಿ ಅಧ್ಯಕ್ಷ ನವಾಝ್ ನರಿಂಗಾನ ಅಧ್ಯಕ್ಷತೆ ವಹಿಸಿದ್ದರು.ಗ್ರಾಮ ಪಂಚಾಯಿತಿ ಅಧ್ಯಕ್ಷ ಮಹಮ್ಮದ್ ನವಾಝ್ ನರಿಂಗಾನ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಗೇರು ಅಭಿವೃದ್ಧಿ ನಿಗಮದ ಅಧ್ಯಕ್ಷತೆ ಮಮತಾ ಡಿ.ಎಸ್ ಗಟ್ಟಿ, ಉಪಾಧ್ಯಕ್ಷೆ ಜ್ಯೋತಿ ಡಿಸೋಜ, ನರಿಂಗಾನ ಲವ ಕುಶ ಜೋಡುಕರೆ ಕಂಬಳ ಸಮಿತಿ ಕಾರ್ಯಾಧ್ಯಕ್ಷ ಪ್ರಶಾಂತ್ ಕಾಜವ, ಗೇರು ಅಭಿವೃದ್ಧಿ ನಿಗಮದ ಅಧ್ಯಕ್ಷೆ ಮಮತಾ ಗಟ್ಟಿ, ಗ್ಯಾರಂಟಿ ಸಮಿತಿಯ ಜಿ.ಪಂ. ಮಾಜಿ ಅಧ್ಯಕ್ಷ ಎ.ಸಿ.ಭಂಡಾರಿ, ಬೋಳಿಯಾರ್ ಗ್ರಾ.ಪಂ. ಮಾಜಿ ಅಧ್ಯಕ್ಷ ರಮೇಶ್ ಶೆಟ್ಟಿ ಬೋಳಿಯಾರ್, ಮಂಗಳೂರು ತಾ.ಪಂ. ಮಾಜಿ ಅಧ್ಯಕ್ಷ ಮಹಮ್ಮದ್ ಮೋನು ಮಲಾರ್, ಮಾಜಿ ಒಂಬುಡ್ಸ್ ಮೆನ್ ಶೀನ ಶೆಟ್ಟಿ, ಬೋಳ ಸಂತ ಲಾರೆನ್ಸ್ ದೇವಾಲಯದ ಧರ್ಮಗುರು ರೆ.ಪಾ.ಪೀಟರ್ ಡಿಸೋಜ, ಜನಶಿಕ್ಷಣ ಟ್ರಸ್ಟ್ ನಿರ್ದೇಶಕ ಕೃಷ್ಣ ಮೂಲ್ಯ, ಲೋಕೋಪಯೋಗಿ ಇಲಾಖೆಯ ಅಧಿಕಾರಿ ವೀರೇಂದ್ರ, ಬಂಟ್ವಾಳ ಉಪವಿಭಾಗ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ತಾರನಾಥ ಸಾಲಿಯನ್ ಪಿ., ಗ್ರಾ.ಪಂ. ಅಭಿವೃದ್ಧಿ ಅಧಿಕಾರಿ ನಿಕಟಪೂರ್ವ ಪಿಡಿಓ ರಜನಿ ಉಪಸ್ಥಿತರಿದ್ದರು.ಪಿಡಿಓ ಶ್ವೇತಾ ಕೆ. ವಿ. ಸ್ವಾಗತಿಸಿದರು. ಕಾರ್ಯದರ್ಶಿ ಎ.ಕೆ.ನಳಿನಿ ಸನ್ಮಾನಪತ್ರ ವಾಚಿಸಿ, ವಂದಿಸಿದರು. ಪತ್ರಕರ್ತ ಸತೀಶ್ ಕುಮಾರ್ ಪುಂಡಿಕಾಯಿ ಕಾರ್ಯಕ್ರಮ ನಿರೂಪಿಸಿದರು.

## ನವಾಝ್ ನರಿಂಗಾನ ನೇತೃತ್ವ ಗ್ರಾಮಕ್ಕೆ ಬೆಳವಣಿಗೆಯ ಬೆಳ್ಳಿ ಬೆಳಕು

↗1ನೇ ಪುಟದಿಂದ

**ಅವರ ಅವಧಿಯಲ್ಲಿ ಸ್ಪಷ್ಟವಾದ ಪ್ರಗತಿಯನ್ನು ಕಂಡಿವೆ. ಜನರೊಂದಿಗೆ ನೇರ ಸಂವಾದ ನಡೆಸಿ ಅವರ ಅಗತ್ಯಗಳನ್ನು ಪ್ರಾಮುಖ್ಯತೆಯಿಂದ ಪರಿಗಣಿಸುತ್ತಿರುವ ನವಾಝ್, “ಯುವ ನಾಯಕತ್ವ ಕಾರ್ಯಕ್ಷಮತೆ ಮೂಲಕವೇ ಬೆಳವಣಿಗೆ” ಎಂಬ ಮಾತಿನ ನೈಜ ಉದಾಹರಣೆಯಾಗಿ ಕಾಣಿಸಿಕೊಂಡಿದ್ದಾರೆ.**

**ಯುವಕರಿಗಾಗಿ ಕ್ರೀಡಾ ಸೌಲಭ್ಯಗಳ ವಿಸ್ತರಣೆ, ಮಹಿಳಾ ಸ್ವಸಹಾಯಕ ಸಂಘಗಳಿಗೆ ಬೆಂಬಲ, ಹಾಗೂ ಶಿಕ್ಷಣ–ಆರೋಗ್ಯ ಕಾಳಜಿಗೆ ಸಂಬಂಧಿಸಿದ ಹಲವಾರು ಯೋಜನೆಗಳನ್ನೂ ಅವರು ಗ್ರಾಮಕ್ಕೆ ತಂದಿದ್ದಾರೆ. ಅಲ್ಲದೆ ಸರ್ಕಾರಿ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ ನಿಧಿ ವಿಲೇವಾರಿ, ಯೋಜನೆಗಳ ವೇಗದ ಅನುಷ್ಠಾನ ಹಾಗೂ ಫಲಿತಾಂಶದ ಮೇಲ್ವಿಚಾರಣೆ ಈ ಎಲ್ಲದರ ಮೂಲಕ ಗ್ರಾಮಕ್ಕೆ ಮಾದರಿ ಅಭಿವೃದ್ಧಿ ದಿಕ್ಕು ತೋರಿಸಿದ್ದಾರೆ.**

**ಜನರ ಮಾತು ಕೇಳಿ, ಕೆಲಸಕ್ಕೆ ಬದ್ಧನಾಗಿ, ಗ್ರಾಮವನ್ನು ಸಮಗ್ರ ಅಭಿವೃದ್ಧಿಯ ಹಾದಿಯಲ್ಲಿ ಮುನ್ನಡೆಸುತ್ತಿರುವ ನವಾಝ್ ನರಿಂಗಾನ ಅವರ ಕಾರ್ಯಶೈಲಿ ಸ್ಥಳೀಯ ಆಡಳಿತಕ್ಕೆ ಹೊಸ ಮಾನದಂಡ ನಿರ್ಮಿಸುತ್ತಿದೆ.**

# ಮಂಜನಾಡಿ ಉರೂಸ್‌ಗೆ ಹಿಂದೂಗಳ ಹೊರೆಕಾಣಿಕೆ

↗1ನೇ ಪುಟದಿಂದ

ಅದ್ದೂರಿ ಹೊರೆಕಾಣಿಕೆ ಮೆರವಣಿಗೆ ನಡೆಯಿತು. ಅಸೈಗೋಳಿ ಜಂಕ್ಷನ್‌ನಿಂದ ಮಂಜನಾಡಿ ಕೇಂದ್ರ ಮಸೀದಿಯವರೆಗೆ ನಡೆದ ಈ ಮೆರವಣಿಗೆಯಲ್ಲಿ ಸುಮಾರು 15 ಕ್ವಿಂಟಾಲ್ ಅಕ್ಕಿ, ಸಕ್ಕರೆ, ತರಕಾರಿ ಹಾಗೂ ಇನ್ನಿತರ ಅಗತ್ಯ ಸಾಮಗ್ರಿಗಳನ್ನು ಸಲ್ಲಿಕೆ ಮಾಡಲಾಯಿತು. ಬರ್ಕೆ ಫ್ರೆಂಡ್ಸ್, ಸಾಯಿ ಫ್ರೆಂಡ್ಸ್, ಸ್ನೇಹ ಬಳಗ ಹೀಗೆ ಹತ್ತಾರು ಸಂಘಟನೆಗಳು ಕೈಜೋಡಿಸಿ ಉರೂಸ್ ಯಶಸ್ವಿಯಾಗಲು ತಮ್ಮ ಅಳಿಲು ಸೇವೆಯನ್ನು ನೀಡಿವೆ. ಈ ಸಂದರ್ಭದಲ್ಲಿ ಮಾತನಾಡಿದ ಸಾಯಿ ಫ್ರೆಂಡ್ಸ್ ಅಸೈಗೋಳಿ ಅಧ್ಯಕ್ಷರಾದ ಸುನಿಲ್ ಪೂಜಾರಿ, "ನಾವೆಲ್ಲರೂ ಒಂದಾಗಿರಬೇಕು ಎಂಬ ಉದ್ದೇಶದಿಂದ ಈ ಕಾರ್ಯಕ್ರಮ ಆಯೋಜಿಸಿದ್ದೇವೆ. ಒಗ್ಗಟ್ಟಿನಿಂದ ಈ ಉರೂಸ್ ಯಶಸ್ವಿಗೊಳಿಸೋಣ" ಎಂದರು. ಮತ್ತೊಬ್ಬ ಮುಖಂಡರಾದ ಗಣೇಶ್ ಅಸೈಗೋಳಿ ಮಾತನಾಡಿ, "ದೇವರು ನಮ್ಮನ್ನು ಹೀಗೆಯೇ ಸೌಹಾರ್ದತೆಯಿಂದ ಮುಂದುವರೆಸಲು ಅನುಗ್ರಹಿಸಲಿ" ಎಂದು ಪ್ರಾರ್ಥಿಸಿದರು. ಹಿಂದೂ ಬಾಂಧವರ ಈ ಪ್ರೀತಿಗೆ ಮಂಜನಾಡಿ ಮಸೀದಿಯ ಅಧ್ಯಕ್ಷರಾದ ಅಬ್ದುಲ್ ಅಝೀಝ್ ಮೈಸೂರು ಬಾವ ಸಂತಸ ವ್ಯಕ್ತಪಡಿಸಿದರು. ಇನ್ನು ಅಬ್ದುಲ್ ಅಝೀಝ್ ಪರ್ತಿಪ್ಪಾಡಿ ಮಾತನಾಡಿ, "ಇದು ಕೇವಲ ಸಾಮಗ್ರಿಗಳ ಕಾಣಿಕೆಯಲ್ಲ, ಇದು ನಮ್ಮ ಮೇಲಿರುವ ಅಭಿಮಾನ ಹಾಗೂ ಭಾವೈಕ್ಯತೆಯ ಸಂಕೇತ" ಎಂದು ಶ್ಲಾಘಿಸಿದರು.

ಈ ಸೌಹಾರ್ದ ಕ್ಷಣಕ್ಕೆ ಸಾಕ್ಷಿಯಾಗಿ ಪ್ರದೀಪ್ ಅಸೈಗೋಳಿ, ಶ್ರೀಕಾಂತ್, ಅಶ್ರಫ್, ಶೌಕತ್ ಆಲಿ ಅಸೈಗೋಳಿ, ಪ್ರವೀಣ್ ಮುನ್ನ, ಹರೀಶ್ ಪೂಜಾರಿ, ಕೆ. ಮಂಜುನಾಥ್, ವಿಕ್ಕಿ ಪೂಜಾರಿ ಮಂಗಳೂರು, ನಾಗರಾಜ್ ಶೆಟ್ಟಿ ಮಾಣಿ, ಪ್ರೀತಂ ಶೆಟ್ಟಿ ಆಲಾಡಿ, ಇಕ್ಬಾಲ್ ಬರುವ ಸೇರಿದಂತೆ ಅನೇಕ ಗಣ್ಯರು ಹಾಗೂ ನೂರಾರು ಕಾರ್ಯಕರ್ತರು ಪಾಲ್ಗೊಂಡಿದ್ದರು. ಕರಾವಳಿಯ ಸೌಹಾರ್ದತೆ ಹೀಗೆಯೇ ಮುಂದುವರಿಯಲಿ ಎಂಬುದು ಎಲ್ಲರ ಆಶಯ.

# ಮಿಸೆಸ್ ಇಂಡಿಯಾ–2025 ಕಿರೀಟ ಮುಡಿಗೇರಿಸಿದ ಕನ್ನಡತಿ ಡಾ.ರಶ್ಮಾ ಎಂ. ಶೆಟ್ಟಿ



**ಮಂಗಳೂರು :** ಮುಲುಂಡ್‌ನ ಪ್ರಕೃತಿ ಚಿಕಿತ್ಸಕಿ ವೈದ್ಯೆ ಡಾ. ರಶ್ಮಾ ಮೋಹಿತ್ ಶೆಟ್ಟಿ ಅವರು ಡಿ. 18 ರಿಂದ ಡಿ 21 ರವರೆಗೆ ಜೈಪುರದ ಜೈಬಾಗ್ ಪ್ಯಾಲೇಸ್‌ನಲ್ಲಿ ದೀಪಾಳಿ ಫಡ್ನಿಸ್ ಅವರ ಆಯೋಜನೆಯಲ್ಲಿ ನಡೆದ ಅಂತಿಮ ಸ್ಪರ್ಧೆಯಲ್ಲಿ ಮಿಸೆಸ್ ಇಂಡಿಯಾ ಸೀಸನ್ 15 ಕಿರೀಟವನ್ನು ಮುಡಿಗೇರಿಸಿಕೊಂಡಿದ್ದಾರೆ.

ಮಿಸೆಸ್ ಇಂಡಿಯಾ ಭಾರತದಲ್ಲಿನ ಅತ್ಯಂತ ಪ್ರತಿಷ್ಠಿತ ಹಾಗೂ ದೀರ್ಘಕಾಲದಿಂದ ನಡೆದ ಸೌಂದರ್ಯ ಸ್ಪರ್ಧೆಗಳಲ್ಲಿ ಒಂದಾಗಿದೆ. ದೇಶದ ವಿವಿಧ ಭಾಗಗಳಿಂದ ಆಯ್ಕೆಯಾದ 40 ಅಂತಿಮ ಸ್ಪರ್ಧಿಗಳು ಭಾಗವಹಿಸಿದ್ದ ಈ ನಾಲ್ಕು ದಿನಗಳ ಸ್ಪರ್ಧೆಯಲ್ಲಿ ಪ್ರತಿಭಾ ಸುತ್ತು, ಪ್ರೇರಣಾದಾಯಕ ಜೀವನ ಕಥೆ, ವೈಯಕ್ತಿಕ ಸಂದರ್ಶನ, ರ್‍ಯಾಂಪ್ ವಾಕ್, ರಾಷ್ಟ್ರೀಯ ವೇಷಭೂಷಣ, ಸಾಂಪ್ರದಾಯಿಕ ಸುತ್ತು ಹಾಗೂ ಈವಿನಿಂಗ್ ಗೌನ್ ಸುತ್ತುಗಳ ಮೂಲಕ ಸ್ಪರ್ಧಿಗಳನ್ನು ಮೌಲ್ಯಮಾಪನ ಮಾಡಲಾಯಿತು.

ರಾಷ್ಟ್ರಮಟ್ಟದ ವೇದಿಕೆಯಲ್ಲಿ ಡಾ. ರಶ್ಮಾ ಮೋಹಿತ್ ಶೆಟ್ಟಿ ಅವರು ತೋರಿದ ಆತ್ಮವಿಶ್ವಾಸ, ಸಮರ್ಪಣೆ ಮತ್ತು ಸರ್ವತೋಮುಖ ಶ್ರೇಷ್ಠತೆ ಈ ಗೌರವಕ್ಕೆ ಕಾರಣವಾಗಿದೆ ಎಂದು ಆಯೋಜಕರು ತಿಳಿಸಿದ್ದಾರೆ.

ಮಿಸೆಸ್ ಇಂಡಿಯಾ ಕರ್ನಾಟಕ 2024 ಸ್ಪರ್ಧೆಯಲ್ಲಿ ಪ್ರಥಮ ರನ್ನರ್ ಅಪ್ ಪ್ರಶಸ್ತಿಯನ್ನು ಗಳಿಸಿದ್ದಾರೆ. ಈ ಸ್ಪರ್ಧೆಯಲ್ಲಿ ಟ್ಯಾಲೆಂಟ್ ರೌಂಡ್ ನಲ್ಲಿ ಉತ್ತಮ ಪ್ರದರ್ಶನ ಬಹುಮಾನ , ರ್‍ಯಾಂಪ್ ವಾಕ್ ಸ್ಪರ್ಧೆಯಲ್ಲಿ ಅತ್ಯುತ್ತಮ ನಡೆ ಬಹುಮಾನ, ಉತ್ತಮ ಟಾಸ್ಕ್ ವಿಭಾಗದ ಸ್ಪರ್ಧೆಯಲ್ಲಿ ಪ್ರಥಮ ಬಹುಮಾನ ಲಭಿಸಿದೆ.

ಮೇ 19, ರಂದು ಮಂಗಳೂರಿನ ಕದ್ರಿ ಪಾರ್ಕ್‌ನಲ್ಲಿ ನಡೆದ ಪ್ರತಿಷ್ಠಿತ ಮಿಸೆಸ್ ಇಂಡಿಯಾ ಕರ್ನಾಟಕ ಮಂಗಳೂರು ಸ್ಪರ್ಧೆಯಲ್ಲಿ ಪ್ರಥಮ ರನ್ನರ್ ಅಪ್ ಪ್ರಶಸ್ತಿ ಹಾಗೂ ಬಂಟರ ಸಂಘ ಮುಂಬಯಿ ಯುವ ವಿಭಾಗ ಆಯೋಜಿಸಿದ ಆಕಾಂಕ್ಷ ಮಿಸೆಸ್ ಬಂಟ್ಸ್ 2023 ಸ್ಪರ್ಧೆಯಲ್ಲಿ ಪ್ರಥಮ ರನ್ನರ್ ಅಪ್ ಪ್ರಶಸ್ತಿಯನ್ನು ಗಳಿಸಿದ್ದಾರೆ.

ನಾರ್ಯಗುತ್ತು ರಘುನಾಥ ಶೆಟ್ಟಿ ಮತ್ತು ಅಮ್ಟೂರು ಬಾಳಿಕೆ ಕಸ್ತೂರಿ ಶೆಟ್ಟಿ ದಂಪತಿಯ ಸುಪುತ್ರಿ, ಡಾ.ರಶ್ಮಾ ಎಂ.ಶೆಟ್ಟಿ ಯವರು ಮೋಹಿತ್ ಶೆಟ್ಟಿಯವರ ಪತ್ನಿ. ಇವರಿಗೆ 7 ವರ್ಷದ ನೇಸರ ಎಂಬ ಮಗಳಿದ್ದಾರೆ. ಕಟಪಾಡಿ ಮೂಡು ಬೆಟ್ಟು ಹೊಸಮನೆ ಮನೋಹರ್ ಶೆಟ್ಟಿ ಮತ್ತು ಮುಚ್ಚೂರು ಬರ್ಕೆ ದಿ. ಮಮತಾ ಶೆಟ್ಟಿ ಅವರ ಸೊಸೆಯಾದ ಡಾ.ರಶ್ಮಾ ಮೋಹಿತ್ ಶೆಟ್ಟಿ ಅವರು ಪುತ್ತೂರಿನ ಮುಂಡೂರು ಗ್ರಾಮದ ಪೊನೋನಿಯದಲ್ಲಿ ಬೆಳೆದು ಪ್ರಸ್ತುತ ಮುಂಬೈನಲ್ಲಿ ವೈದ್ಯರಾಗಿ ಸೇವೆ ಸಲ್ಲಿಸುತ್ತಿದ್ದಾರೆ.

ಇವರು ವೈದ್ಯಕೀಯ ಸೇವೆಯೊಂದಿಗೆ, ಗೃಹಿಣಿಯಾಗಿ ಜೊತೆಗೆ, ಸಮಾಜ ಸೇವೆಯಲ್ಲಿ ಸಕ್ರಿಯರಾಗಿದ್ದಾರೆ. ಮುಲುಂಡ್ ಹಿಲ್ಸ್ ಇನ್ನರ್ ವೀಲ್ ಕ್ಲಬ್‌ನ ಸಮಿತಿಯ ಕಾರ್ಯದರ್ಶಿಯಾಗಿ, ಮಹಿಳೆಯರ ಆರೋಗ್ಯ ಮತ್ತು ಜೀವನಶೈಲಿಯ ಅಸ್ವಸ್ಥತೆಗಳ ಕುರಿತು ಅನೇಕ ಲೈವ್ ಸೆಮಿನಾರ್‌ಗಳನ್ನು ನಡೆಸಿದ್ದಾರೆ. ನವಿ ಮುಂಬಯಿಯ ಡಾ. ಡಿವೈ ಪಾಟೀಲ್ ಪ್ರಕೃತಿ ಚಿಕಿತ್ಸೆ ಕಾಲೇಜಿನಲ್ಲಿ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸುತ್ತಿದ್ದಾರೆ.

ಡಾ.ರಶ್ಮಾ ಎಂ. ಶೆಟ್ಟಿ ತಮ್ಮ ಪ್ರಾಥಮಿಕ ಮತ್ತು ಪ್ರೌಢ ಶಾಲಾ ಶಿಕ್ಷಣವನ್ನು ಪಾಪೆಮಜಲು ಸರ್ಕಾರಿ ಶಾಲೆಯಲ್ಲಿ ಪೂರ್ಣಗೊಳಿಸಿದ್ದು, ನಂತರ ಪುತ್ತೂರು ಕೊಂಬೆಟ್ಟು ಸರ್ಕಾರಿ ಕಾಲೇಜಿನಲ್ಲಿ ಪ್ರಿ–ಯುನಿವರ್ಸಿಟಿ ಶಿಕ್ಷಣವನ್ನು ಪಡೆದುಕೊಂಡಿದ್ದಾರೆ. ಅವರು ಮೂಡುಬಿದಿರೆಯ ಆಳ್ವಾಸ್ ಕಾಲೇಜಿನಲ್ಲಿ ಪ್ರಕೃತಿ ಚಿಕಿತ್ಸೆ ಪದವಿಯನ್ನು ಪಡೆದು, ರಾಜೀವ್ ಗಾಂಧಿ ವಿಶ್ವವಿದ್ಯಾಲಯದಲ್ಲಿ ಎರಡನೇ ಸ್ಥಾನ ಪಡೆದರು ಮತ್ತು ತಮ್ಮ ಕಾಲೇಜಿನ ಅತ್ಯುತ್ತಮ ವಿದ್ಯಾರ್ಥಿಯಾಗಿ ಘೋಷಿಸಲ್ಪಟ್ಟ ಇವರು ರಾಜ್ಯಮಟ್ಟದ ಅಥ್ಲೆಟಿಕ್ ಮತ್ತು ಥ್ರೋಬಾಲ್ ಆಟಗಾರ್ತಿಯೂ ಆಗಿದ್ದು, ಮುಲುಂಡ್ ಬಂಟ್ಸ್ ಮಹಿಳಾ ವಿಭಾಗದ ಸದಸ್ಯೆಯಾಗಿ , 2024 ರ ಡಿ.8ರಂದು ಮುಂಬಯಿ ಬಂಟರ ಭವನ ಕುರ್ಲಾ ದಲ್ಲಿ ನಡೆದ ಕರ್ನಾಟಕ ಸಂಘ ಅಂಧೇರಿ (ರಿ) ಹಾಗೂ ಕನ್ನಡ ಕಲಾ ಕೇಂದ್ರ, ಮುಂಬಯಿ ಸಹಯೋಗ ಹಾಗೂ ಕರ್ನಾಟಕ ಗಡಿ ಅಭಿವೃದ್ಧಿ ಪ್ರಾಧಿಕಾರ ಸಹಕಾರದಿಂದ ಆಯೋಜಿಸಿದ ರಾಜ್ಯ ಮಟ್ಟದ "ಡಾ! ಶಿವರಾಮ ಕಾರಂತ ನಾಟಕೋತ್ಸವ –2024 ಸ್ಪರ್ಧೆಯಲ್ಲಿ, ಕಲಾ ಸ್ಪಂದನ ಮುಂಬಯಿ ತಂಡ ಪ್ರಸ್ತುತ ಪಡಿಸಿದ ಬಾಬಾ ಪ್ರಸಾದ್ ಅರಸ ನಿರ್ದೇಶನದ "ಸ್ವಾಮಿ ಕೊರಗಜ್ಜ " ನಾಟಕದಲ್ಲಿ ಅತ್ಯುತ್ತಮ ನಟಿ ಪ್ರಥಮ ಪ್ರಶಸ್ತಿಯನ್ನು ಡಾ. ರಶ್ಮಾ ಶೆಟ್ಟಿ ಪಡೆದಿರುತ್ತಾರೆ.

## ಕೀರ್ತಿಶೇಷ ದಾಮೋದರ ಆರ್ ಸುವರ್ಣ ಅವರ 101ನೇ ಜನ್ಮ ಜಯಂತಿ

# ವಿದ್ಯಾರ್ಥಿ ವೇತನ ವಿತರಣೆ, ಪ್ರತಿಭಾ ಪುರಸ್ಕಾರ

ಮಂಗಳೂರು : ಸಂಘಟನೆಯನ್ನು ಬಲಪಡಿಸಿ, ಪರಸ್ಪರ ವಿಶ್ವಾಸ ಮತ್ತು ಸಹಕಾರವನ್ನು ಹೆಚ್ಚಿಸಿಕೊಂಡು, ಸಮಾಜದಲ್ಲಿ ದೊರಕುವ ಪ್ರತಿಯೊಂದು ಅವಕಾಶವನ್ನು ಸದುಪಯೋಗಪಡಿಸಿಕೊಂಡು ಶ್ರಮಪಟ್ಟು ದುಡಿದರೆ, ವ್ಯಕ್ತಿಗತ ಬೆಳವಣಿಗೆಯ ಜೊತೆ–ಗೆ ಸಮೂಹದ ಪ್ರಗತಿಗೂ ದಾರಿ ತೆರೆದು, ಸಮಾಜವು ಒಗ್ಗಟ್ಟಿನ ಶಕ್ತಿಯಾಗಿ ಗಟ್ಟಿಯಾಗಿ ಬೆಳೆಯಲು ಸಾಧ್ಯವಾಗುತ್ತದೆ ಎಂದು ಸಂಸದ ಕೋಟ ಶ್ರೀನಿವಾಸ ಪೂಜಾರಿ ಹೇಳಿದರು.

ಅವರು ಕುದ್ರೋಳಿ ಶ್ರೀಗೋಕರ್ಣನಾಥ ದೇವಸ್ಥಾನದ ಕಲ್ಯಾಣ ಮಂಟಪದಲ್ಲಿ ದಾಮೋದರ್ ಆರ್ ಸುವರ್ಣ ಎಜುಕೇಶನ್ ಟ್ರಸ್ಟ್ ಮಂಗಳೂರು ಇದರ ವತಿಯಿಂದ ಕೀರ್ತಿಶೇಷ ದಾಮೋದರ ಆರ್ ಸುವರ್ಣ ಅವರ 101ನೇ ಜನ್ಮ ಜಯಂತಿ ಸಂಭ್ರಮ, ವಿದ್ಯಾರ್ಥಿ ವೇತನ ವಿತರಣೆ ಮತ್ತು ಪ್ರತಿಭಾ ಪುರಸ್ಕಾರ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿ, ಎಲ್ಲರಂತೆ ಬದುಕಬೇಕು ಅಂತ ಸ್ವಾಭಿಮಾನದಿಂದ ತಲೆ ಎತ್ತಿ ನಿಲ್ಲುತ್ತೇನೆ ಅಂತ ಒಂದು ಕುಟುಂಬ ಯೋಜನೆ ಮಾಡಿದರೆ, ಆ ಕುಟುಂಬ ಬದುಕಲಿಕ್ಕೆ ಪೂರ್ಣ ಅವಕಾಶಗಳಿರುವಂತಹ ವ್ಯವಸ್ಥೆಗಳು ಇವತ್ತು ಸಮಾಜದಲ್ಲಿದೆ. ಅದಕ್ಕೆ ಕೀಳರಿಮೆಯನ್ನು ಬಿಟ್ಟು ಈ ಸಮಾಜದಲ್ಲಿ ನಾನೊಬ್ಬ ಸ್ಪರ್ಧಿ, ಎಲ್ಲರಂತೆ ನಾನು ತಲೆ ಎತ್ತಿ ಬದುಕಬೇಕು ಅಂತ ಯೋಜನೆ ಮಾಡಿದರೆ ಅವನ ಹಂಬಲ ಈಡೇರಲಿಕ್ಕೆ ಪರ್ಯಾಯ ಸರಿಯಾದ ಅವಕಾಶಗಳು ಇವತ್ತು ಸಮಾಜದಲ್ಲಿದೆ ಎಂದರು.

ಈ ಸಂದರ್ಭ ಮಂಗಳೂರು ಸಂಸದ ಕ್ಯಾ.ಬ್ರಿಜೇಶ್ ಚೌಟ ಮಾತನಾಡಿ, ಈ ಹಿಂದೆ ಹಿಂದೂ ಸಮಾಜದಲ್ಲೂ ಕೂಡ ಸಾಕಷ್ಟು ಸಮಸ್ಯೆಗಳು ವೈರುಧ್ಯಗಳು ಇತ್ತು. ಆದ–ರೆ ಸಮಾಜದೊಳಗೆ ಹುಟ್ಟಿದ ದಾರ್ಶನಿಕರು ಸಮಾಜಕ್ಕೆ ಸರಿಯಾದ ಗುರಿ, ದೆಸೆ ನೀಡುವ ಕಾಯಕವನ್ನು ಮಾಡಿದರು. ವಿಶೇಷವಾಗಿ ದಕ್ಷಿಣ ಕನ್ನಡದ ಹಿಂದೂ ಸಮಾಜ ಎಲ್ಲರನ್ನು ಒಟ್ಟು ಸೇರಿಸಿಕೊಂಡು ಮುಂದೆ ಸಾಗುವ ಗುಣ ಇಡೀ ದೇಶದಲ್ಲಿಯೇ ಭಿನ್ನ ಸ್ಥಾನವನ್ನು ಪಡೆದು–ಕೊಂಡಿದೆ. ಈಗಲೂ ಸಮಸ್ಯೆ ಇದ್ದಾಗ ಇಲ್ಲಿನ ಹಿಂದೂ ಸಮಾಜ ಒಟ್ಟು ಸೇರಿಸುವ ಶಕ್ತಿಯನ್ನು ಬೆಳೆಸಿಕೊಂಡಿದೆ ಎಂದರು.




> ಕೀರ್ತಿಶೇಷ ದಾಮೋದರ ಆರ್. ಸುವರ್ಣರು ಮಾಡಿದಂತಹ ಸಾಧನೆ ಸಮಾಜದ ಪ್ರತಿಯೊಬ್ಬರೂ ನೆನಪಿಟ್ಟುಕೊಳ್ಳಬೇಕಾದದ್ದು. ಅಖಿಲ ಭಾರತ ಬಿಲ್ಲವರ ಯೂನಿಯನ್ ಮುಖೇನ ಅರ್ಹ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನವನ್ನು ನೀಡಲಾಗುತ್ತಿದೆ. ಕಳೆದ ಏಳು ವರ್ಷಗಳಿಂದ ದಾಮೋದರ ಸುವರ್ಣ ಎಜುಕೇಶನ್ ಟ್ರಸ್ಟ್ ಆಶ್ರಯದಲ್ಲಿ ಈ ವಿದ್ಯಾರ್ಥಿವೇತನ ನೀಡಲಾಗುತ್ತಿದೆ. ಶೇಕಡಾ 75ಕ್ಕಿಂತ ಹೆಚ್ಚು ಅಂಕಗಳನ್ನು ಪಡೆದ ವಿದ್ಯಾರ್ಥಿಗಳು ವಿದ್ಯಾರ್ಥಿವೇತನಕ್ಕೆ ಅರ್ಹರಾಗಿರುತ್ತಾರೆ. ಮುಂದಿನ ದಿನಗಳಲ್ಲಿ ರೂ. 1 ಕೋಟಿವರೆಗೆ ವಿದ್ಯಾರ್ಥಿವೇತನ ಮೊತ್ತವನ್ನು ಹೆಚ್ಚಿಸುವ ಚಿಂತನೆ ಮಾಡಲಾಗಿದೆ.
>
> ■ **ನವೀನ್ ಚಂದ್ರ ಡಿ ಸುವರ್ಣ,** ಅಧ್ಯಕ್ಷರು

ಈ ಸಂದರ್ಭ ದಾಮೋದರ್ ಆರ್ ಸುವರ್ಣ ಎಜುಕೇಶನ್ ಟ್ರಸ್ಟಿನ ಅಧ್ಯಕ್ಷ ನವೀನ್ ಚಂದ್ರ ಡಿ ಸುವರ್ಣ, ಟ್ರಸ್ಟಿ ಆಶಾ ಸುವರ್ಣ, ಶಾಸಕ ವೇದವ್ಯಾಸ ಕಾಮತ್, ಸುಮಲತಾ ಸುವರ್ಣ, ವಿನಯಚಂದ್ರ ಸುವರ್ಣ, ಜಗದೀಪ ಸುವರ್ಣ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ದಾಮೋದರ್ ಆರ್ ಸುವರ್ಣ ಎಜುಕೇಶನ್ ಟ್ರಸ್ಟ್ನ ಅಧ್ಯಕ್ಷ ಮ್ಯಾನೇಜಿಂಗ್ ಟ್ರಸ್ಟೀ ಉದಯಚಂದ್ರ ಡಿ ಸುವರ್ಣ ಸ್ವಾಗತಿಸಿ, ಟ್ರಸ್ಟ್ನ ಮೂಲಕ ನಾನಾ ಸಾಮಾಜಿಕ ಸೇವೆಗಳನ್ನು ಮಾಡಲು ಯೋಜನೆ ರೂಪಿಸಲಾಗಿದೆ. ಸುವರ್ಣ ಎಜುಕೇಶನ್ ಲೋನ್ ಮೂಲಕ ಬಡ್ಡಿರಹಿತ ಶಿಕ್ಷಣ ಸಾಲ ನೀಡುವ ಚಿಂತನೆ ಕೂಡ ಮಾಡಲಾಗಿದೆ ಎಂದರು.

ಕೇಶವ ಬಂಗೇರ, ಜೀವನ್ ಕುಮಾರ್ ತೆ–ಣುಕ್ಕೊಟ್ಟು ಸ್ವಾಗತಿಸಿದರು. ಸೀತಪ್ಪ ಕೂಡೂರು ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಸಭಾ ಕಾರ್ಯಕ್ರಮದ ಮೊದಲು ಸಾಂಸ್ಕೃತಿಕ ಕಾರ್ಯಕ್ರಮ ನಡೆಯಿತು. ಮೀನಾ ದಿನೇಶ್ ಪ್ರಾರ್ಥಿಸಿದರು.

> ವಿದ್ಯಾರ್ಥಿಗಳನ್ನು ವಿದ್ಯಾವಂತರಾಗಿ ರೂಪಿಸಿ, ಟ್ರಸ್ಟ್ ಮುಖಾಂತರ ಸಾರ್ಥಕವಾಗಿ ನಡೆಸುತ್ತಿರುವ ಕಾರ್ಯ ನಿಜಕ್ಕೂ ಮಹತ್ತರವಾದದ್ದು. ವಿದ್ಯಾರ್ಥಿ ವೇತನ ನೀಡುವ ಉದ್ದೇಶದಿಂದ 60 ಲಕ್ಷಕ್ಕೂ ಮಿಕ್ಕಿದ ಹಣವನ್ನು ಮೀಸಲಿಟ್ಟು, ಕೀರ್ತಿಶೇಷ ದಾಮೋದರ ಸುವರ್ಣ ಅವರ ಸ್ಮರಣಾರ್ಥವಾಗಿ ಈ ವಿಶೇಷ ಚಿಂತನೆ ಕೈಗೊಳ್ಳಲಾಗಿದೆ. ಸಮಾಜವನ್ನು ಮುಖ್ಯವಾಹಿನಿಗೆ ತರಬೇಕೆಂಬ ದೃಢ ಉದ್ದೇಶದಿಂದ ವಿದ್ಯಾರ್ಥಿಗಳ ಶಿಕ್ಷಣದತ್ತ ಹೆಚ್ಚಿನ ಗಮನ ನೀಡಲಾಗಿದೆ. ತಮ್ಮ ಜೀವನಕ್ಕೆ ಯಶಸ್ಸು ತಂದುಕೊಟ್ಟವರು ಯಾರು ಎಂಬುದನ್ನು ಪ್ರತಿಯೊಬ್ಬರೂ ನೆನಪಿನಲ್ಲಿ ಇಟ್ಟುಕೊಳ್ಳಬೇಕು. ಸಹಕಾರ ನೀಡಿದ ಸಂಸ್ಥೆಗಳು ಹಾಗೂ ಹೆತ್ತವರನ್ನು ಸದಾ ಗೌರವದಿಂದ ಸ್ಮರಿಸಬೇಕು. ಋಣವನ್ನು ಮರೆಯದೇ ನೆನಪಿನಲ್ಲಿಟ್ಟರೆ ಸದಾ ಆಶೀರ್ವಾದ ದೊರೆಯುತ್ತದೆ. ವರ್ಷಕ್ಕೆ 5 ಲಕ್ಷ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಎಸ್‌ಎಸ್‌ಎಲ್‌ಸಿ ಯಿಂದ ಹಿಡಿದು ವೈದ್ಯಕೀಯ ಶಿಕ್ಷಣದವರೆಗೆ ಅಲ್ಪಸಂಖ್ಯಾತ ನಿಗಮದ ಮುಖೇನ ಸರಕಾರದಿಂದ ವಿದ್ಯಾರ್ಥಿ ವೇತನ ನೀಡಲಾಗುತ್ತಿದೆ. ಆದರೆ ನಾರಾಯಣ ಗುರು ಅಭಿವೃದ್ಧಿ ನಿಗಮವಾಗಲಿ, ಕುಲಾಲ ನಿಗಮವಾಗಲಿ , ವಿಶ್ವಕರ್ಮ ನಿಗಮಗಳಿಗೆ ಕಳೆದ ಎರಡೂವರೆ ವರ್ಷಗಳಿಂದ ಅನುದಾನವೇ ಬಾರದೇ ಇರುವುದು ಬೇಸರ ತರುತ್ತದೆ. ಈ ಕುರಿತು ವಿಧಾನಸಭೆಯಲ್ಲಿ ಪ್ರಸ್ತಾಪಿಸುತ್ತಲೇ ಬಂದಿದ್ದೇನೆ. ವಿದ್ಯಾರ್ಥಿಗಳಿಗೆ ನಿಗಮದಿಂದ ಕೇವಲ ನಿಗಮಗಳನ್ನು ರಚಿಸಿ, ಅಧ್ಯಕ್ಷರನ್ನು ಘೋಷಿಸಿ, ಕಾರು ನೀಡುವುದರಿಂದ ಸಮಾಜ ಅಭಿವೃದ್ಧಿಯಾಗುವುದಿಲ್ಲ ಎಂಬುದನ್ನು ಸರಕಾರ ಅರಿಯಬೇಕಿದೆ.
>
> ■ **ವೇದವ್ಯಾಸ ಕಾಮತ್,** ಶಾಸಕ

# ಮಂಗಳೂರು ಕಂಬಳ: 141 ಜೊತೆ ಕೋಣಗಳು ಭಾಗಿ

**ಮಂಗಳೂರು:** ನಗರದ ಬಂಗ್ರ ಕೂಳೂರಿನ ಗೋಲ್ಡ್‌ಫಿಂಚ್ ಸಿಟಿಯ ರಾಮ–ಲಕ್ಷ್ಮಣ ಜೋಡುಕರೆಯಲ್ಲಿ ಸಂಸದ ಕ್ಯಾ.ಬ್ರಿಜೇಶ್ ಚೌಟ ನೇತೃತ್ವದಲ್ಲಿ ನಡೆದ ಮಂಗಳೂರು ಕಂಬಳ ಭಾನುವಾರ ಸಂಪನ್ನವಾಗಿದ್ದು, ಒಟ್ಟು 141 ಜೊತೆ ಕೋಣಗಳು ಭಾಗವಹಿಸಿದವು.

ಕನೆಹಲಗೆ ವಿಭಾಗದಲ್ಲಿ 9 ಜೊತೆ. ಅಡ್ಡಹಲಗೆ ವಿಭಾಗದಲ್ಲಿ 10 ಜೊತೆ, ಹಗ್ಗ ಹಿರಿಯ ವಿಭಾಗದಲ್ಲಿ 17 ಜೊತೆ, ನೇಗಿಲು ಹಿರಿಯ ವಿಭಾಗದಲ್ಲಿ 26 ಜೊತೆ, ಹಗ್ಗ ಕಿರಿಯ ವಿಭಾಗದಲ್ಲಿ 19 ಜೊತೆ ಹಾಗೂ ನೇಗಿಲು ಕಿರಿಯ ವಿಭಾಗದಲ್ಲಿ 60 ಜೊತೆಕೋಣಗಳು ಪಾಲ್ಗೊಂಡಿವೆ ಎಂದು ಆಯೋಜ–ಕರು ತಿಳಿಸಿದ್ದಾರೆ.

**ಕಂಬಳದ ಫಲಿತಾಂಶಗಳು ಇಂತಿವೆ:**

**ಅಡ್ಡ ಹಲಗೆ: ಪ್ರಥಮ:** ಇರುವೈಲು ದೊಡ್ಡಗುತ್ತು ಜಗದೀಶ್ ಎಂ ಶೆಟ್ಟಿ 'ಎ' (11.68 ಸೆ.): ಹಲಗೆ ಮುಟ್ಟಿದವರು–ತೆಕ್ಕಟ್ಟಿ ಸುಧೀರ್ ದೇವಾಡಿಗ,

**ದ್ವಿತೀಯ:** ನಾರ್ಯ ಗುತ್ತು ಕುವೆತ್ತಬೈಲು ಸಂತೋಷ್ ರೈ ಬೋಳಿಯಾರು : ಹಲಗೆ ಮುಟ್ಟಿದವರು: ಬೈಂದೂರು ಮಹೇಶ್ ಪೂಜಾರಿ. ಹಗ್ಗ ಹಿರಿಯ: ಪ್ರಥಮ: ಕೊಳಕೆ ಇರ್ವತ್ತೂರು ಭಾಸ್ಕರ ಎಸ್ ಕೋಟ್ಯಾನ್ (11.41 ಸೆ.) ಓಡಿಸಿದವರು ಕಕ್ಕೆಪದವು ಪೆಂರ್ಗಾಲು ಕೃತಿಕ್ ಗೌಡ;

**ದ್ವಿತೀಯ:** ನಲ್ಲೂರು ಬಜಗೋಳಿ ಶಿವಪ್ರಸಾದ್ ನಿಲಯ ಪ್ರಾಣೇಶ್ ದಿನೇಶ್ ಭಂಡಾರಿ 'ಎ' ಓಡಿಸಿದವರು ಬೈಂದೂರು ವಿಶ್ವನಾಥ ದೇವಾಡಿಗ,



**ಹಗ್ಗ ಕಿರಿಯ: ಪ್ರಥಮ:** ಬೆಳುವಾಯಿ ಪೆರೋಡಿ ಪುತ್ತಿಗೆ ಗುತ್ತು ಕೌಶಿಕ್ ದಿನಕರ ಬಿ ಶೆಟ್ಟಿ 'ಬಿ' (11.41): ಓಡಿಸಿದವರು ಮಂಗಲ್ಪಾಡಿ ರಕ್ಷಿತ್ ಶೆಟ್ಟಿ; **ದ್ವಿತೀಯ:** ಎರ್ಮಾಳು ಡಾ.ಚಿಂತನ್ ರೋಹಿತ್ ಹೆಗ್ಡೆ; ಓಡಿಸಿದವರು ಮಿಜಾರು ಅಶ್ವಥಪುರ ಶ್ರೀನಿವಾಸ ಗೌಡ, **ನೇಗಿಲು ಹಿರಿಯ: ಪ್ರಥಮ:** 80 ಬಡಗಬೆಟ್ಟು ಕಲ್ಲಪಾಪು ಶ್ರೀಕಾ ಸಂದೀಪ್ ಶೆಟ್ಟಿ (10.87); ಓಡಿಸಿದವರು–ಕುಂದ ಬಾರಂದಡಿ ಮಾಸ್ತಿಕಟ್ಟೆ ಸ್ವರೂಪ್: **ದ್ವಿತೀಯ:** ಮಂಗಳೂರು ಮರಕಡ ಬಾಯಾಡಿ ಮನೆ ಶಾಂತ ಸಂಜಯ್ ಶೆಟ್ಟಿ 'ಎ' ಓಡಿಸಿದವರು– ಬಜಗೋಳಿ ಜೋಗಿಬೆಟ್ಟು ನಿಶಾಂತ್ ಶೆಟ್ಟಿ , ನೇಗಿಲು ಕಿರಿಯ: **ಪ್ರಥಮ:** ಎರ್ಮಾಳು ಪುಕ್ಕೊಟ್ಟು ಬೀಡು ಬಾಲಚಂದ್ರ ಲೋಕಯ್ಯ ಶೆಟ್ಟಿ 'ಬಿ' (11.56); ಓಡಿಸಿದವರು– ಕಾವೂರು ದೋಟ ಸುದರ್ಶನ್; ದ್ವಿತೀಯ: ಮೂಲ್ಕಿ ಚಿತ್ರಾಪು ಸಾನದಮನೆ ಅಂಬಿಕಾ ರವೀಂದ್ರ ಪೂಜಾರಿ:



ಓಡಿಸಿದವರು– ಬಾರಾಡಿ ನತೀಶ್ ಸಫಲಿಗ.

ಕಂಬಳ ಸಮಿತಿ ಅಧ್ಯಕ್ಷ ಕ್ಯಾ. ಬ್ರಿಜೇಶ್ ಚೌಟ, ಗೌರವಾಧ್ಯಕ್ಷ ಕೆ. ಪ್ರಕಾಶ್ ಶೆಟ್ಟಿ, ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ.ವಿಜಯೇಂದ್ರ, ವಿಧಾನ ಪರಿಷತ್ತಿನ ಪ್ರತಿಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ಸಂಸದ ಕೋಟ ಶ್ರೀನಿವಾಸ ಪೂಜಾರಿ, ಶಾಸಕರಾದ ಹರೀಶ್ ಪೂಂಜ, ಡಾ.ವೈ. ಭರತ್ ಶೆಟ್ಟಿ, ರಾಜೇಶ್ ನಾಯಕ್ ಉಳಿಪಾಡಿ, ಗುರುರಾಜ ಗಂಟಿಹೊಳೆ, ವೇದವ್ಯಾಸ ಕಾಮತ್, ಭಾಗೀರಥಿ ಮುರುಳ್ಯ ವಿಧಾನ ಪರಿಷತ್ ಸದಸ್ಯರಾದ ಪ್ರತಾಪ ಸಿಂಹ ನಾಯಕ್, ಕಿಶೋರ್ ಕುಮಾರ್ ಪ್ರಮುಖರಾದ ಪ್ರಮೋದ್ ಮಧ್ವರಾಜ್, ಬಿ. ನಾಗರಾಜ ಶೆಟ್ಟಿ, ಶಶಿಧರ ಶೆಟ್ಟಿ ಬರೋಡಾ ಪಾಲ್ಗೊಂಡಿದ್ದರು.

### 10 ಉದ್ಯಮಿಗಳಿಗೆ ಸನ್ಮಾನ

ಇಜಿ ಕಂಪನಿಯ ಆನಂದ್ ಫರ್ನಾಂಡಿಸ್, ಎಸ್‌ಇಝಡ್ ನಲ್ಲಿ ಸುಸ್ಥಿರ ಕಟ್ಟಡ ಸಾಮಗ್ರಿಗಳ ಘಟಕ ಸ್ಥಾಪಿಸಿದ ಎಂಐಆರ್ ಗ್ರೂಪ್‌ನ ಕಾರ್ಯ ನಿರ್ವಾಹಕ ನಿರ್ದೇಶಕ ನಿತಿನ್ ರತ್ನಾಕರ್, ಮಂಗಳೂರಿನ ಎಸ್‌ಇಝಡ್‌ನಲ್ಲಿ ಇಟ್ಯಾಗ್ ಎಂಟೆಕ್ನಿಕ್ ಪ್ರೈ. ಲಿ. ಉತ್ಪಾದನಾ ಘಟಕ ಸ್ಥಾಪಿಸಿದ ಬ್ರೂನೊ ಮರ್ವೆಲ್ ಪ್ರಕಾಶ್ ಪೆರೇರಾ, ಶೆಫ್ ಹಾಗೂ ಉದ್ಯಮಿ ಶ್ರೀಯಾ ಶೆಟ್ಟಿ, ಆಗ್ರಿಲೀಫ್‌ನ ಅವಿನಾಶ್ ರಾವ್, ಇಂಡಸ್ಟ್ರಿಯಲ್ ಆಟೋಮೇಷನ್ ಆ್ಯಂಡ್ ಡಿಜಿಟಲ್ ಟೆಕ್ನಾಲಜೀಸ್ನ ಸ್ಮಿತಾ ರಾವ್, ಬೋಸ್ ಪ್ರೊಫೆಷನಲ್ಸ್ ಇಂಡಿಯಾ ಆರ್ ಆ್ಯಂಡ್ ಡಿ ಸೆಂಟರ್ ಸ್ಥಾಪಿಸಿರುವ ನಮಿತಾ ಪಿ.ಪಿ., ಡೀನೆಟ್ ಡ್ವೀಸಸ್ ಪ್ರೈ.ಲಿ. ಸಂಸ್ಥೆಯ ಸಂದೇಶ್ ಡಿ. ಪೂಜಾರಿ, ಉದ್ಯಮಿ ಎಸ್‌ಎನ್ ಪೂಂಜಾ ಆ್ಯಂಡ್ ಕೋ ಮೂಲಕ ಕದ್ರಿ ಪರ್ ಅಭಿವೃದ್ಧಿ ಸೇರಿ ವಿವಿಧ ವೆಂಚರ್‌ಗಳನ್ನು ಸ್ಥಾಪಿಸಿರುವ ಸುಧಾಕರ್ ಪೂಂಜಾ, ಇಂಡಿಪೆಂಡೆಂಟ್ ಇನ್ನೋವೇಷನ್ ಕಂಪನಿಯನ್ನು ಮಂಗಳೂರಿಗೆ ವಿಸ್ತರಿಸಿರುವ ಅನ್ಸಾರಿ ಅಲಿ ಅವರನ್ನು ಕಂಬಳ ವೇದಿಕೆಯಲ್ಲಿ ಗೌರವಿಸಲಾಯಿತು.

## ಆಶಾಪ್ರಕಾಶ್ ಶೆಟ್ಟಿ ಸಹಾಯ ಹಸ್ತ ನೆರವು' ಪ್ರದಾನ ; 4 ಸಾವಿರ ಕುಟುಂಬಗಳಿಗೆ 9.5 ಕೋ.ರೂ ಆರ್ಥಿಕ ನೆರವು

# ನೆರವು ಪಡೆದ ಮಕ್ಕಳು ಮುಂದೆ ನನ್ನಂತೆ ಸಮಾಜದ ನೊಂದವರ ಪರ ನಿಲ್ಲಲಿ: ಡಾ.ಪ್ರಕಾಶ್ ಶೆಟ್ಟಿ

**ಮಂಗಳೂರು;** ಎಂ.ಆರ್.ಜಿ. ಗ್ರೂಪ್ ನ ಆಶಾ ಪ್ರಕಾಶ್ ಶೆಟ್ಟಿ ಸಹಾಯ ಪ್ರದಾನ ಸಮಾರಂಭ 'ನೆರವು–2025' ಗುರುವಾರ ಸಂಜೆ ಬಂಗ್ರಕೂಳೂರಿನ ಗೋಲ್ಡ್ ಫಿಂಚ್ ಸಿಟಿಯಲ್ಲಿ ನಡೆಯಿತು.

ಕಾರ್ಯಕ್ರಮವನ್ನು ಅತಿಥಿಗಳು ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿದರು. ಬಳಿಕ ಮಾತಾಡಿದ ಎಂ.ಆರ್.ಜಿ.ಗ್ರೂಪಿನ ಚೇರ್ಮನ್ ಡಾ.ಪ್ರಕಾಶ್ ಶೆಟ್ಟಿ ಅವರು, "ನಾನೊಬ್ಬ ಸಾಮಾನ್ಯ ಕುಟುಂಬದಲ್ಲಿ ಒಂದು ಸಣ್ಣ ಹಳ್ಳಿಯಲ್ಲಿ ಜನಿಸಿದೆ. ತಂದೆ ಮಾಧವ ಶೆಟ್ಟಿ, ತಾಯಿ ರತ್ನ ಶೆಟ್ಟಿ ಅವರೊಂದಿಗೆ ಕಷ್ಟದ ಜೀವನ ನಡೆಸಿ ಶಾಲಾ ದಿನಗಳಲ್ಲಿ ಜಾತಿ, ಧರ್ಮ ಯಾವುದನ್ನು ನೋಡದೆ ಎಲ್ಲರ ಮನೆಗಳಲ್ಲಿ ತಿಂದು ಅವರ ಅಂಗಳದಲ್ಲಿ ಆಡಿದ ನೆನಪು ಇನ್ನೂ ಇದೆ. ಅಮ್ಮನಿಗಿಂತ ಶ್ರೇಷ್ಠವಾದುದು ಜಗತ್ತಿನಲ್ಲಿ ಯಾವುದೂ ಇಲ್ಲ. ನಮ್ಮ ಮುಂದಿನ ಬದುಕನ್ನು ರೂಪಿಸುವುದು ನಮ್ಮ ಅಮ್ಮ ಮಾತ್ರ. ಅಮ್ಮನ ಮಮತೆ, ತಂದೆಯ ಪ್ರೀತಿ, ತುಳುನಾಡಿನ ಸಂಸ್ಕೃತಿ ಜೊತೆಗಿನ ಬದುಕು ನನ್ನನ್ನು ಇಂದು ಈ ಮಟ್ಟಕ್ಕೆ ಬೆಳೆಸಿದೆ. 1983ರಲ್ಲಿ ಬದುಕು ಕಟ್ಟಿಕೊಳ್ಳಲು ಬೆಂಗಳೂರು ತಲುಪಿ 15 ವರ್ಷಗಳ ಕಾಲ ಅವಮಾನ, ಕಷ್ಟ ಎಲ್ಲವನ್ನು ಮೆಟ್ಟಿನಿಂತು ಯಶಸ್ಸಿನತ್ತ ಒಂದೊಂದೇ ಮೆಟ್ಟಿಲು ಹತ್ತತೊಡಗಿದೆ. ರಿಯಲ್ ಎಸ್ಟೇಟ್, ಹೋಟೆಲ್ ಉದ್ಯಮಕ್ಕೆ ಕೈಹಾಕಿದೆ. ದೇವರ ಶಕ್ತಿ ಆಶೀರ್ವಾದದಿಂದ ನಾನೊಬ್ಬ ಉದ್ಯಮಿಯಾಗಿ ಬೆಳೆದೆ. ಆಗ ನನಗೆ ಕಂಡಿದ್ದು ನನ್ನ ಉಡುಪಿ, ಮಂಗಳೂರಿನ ಜನತೆ. ನನ್ನ ಊರಿಗೆ ಏನಾದರೂ ಮಾಡಬೇಕು ಎಂಬ ನಿಟ್ಟಿನಲ್ಲಿ 2019ರಲ್ಲಿ ನನ್ನ ಆತ್ಮೀಯರು ಹೇಳಿದ್ದಕ್ಕೆ ಧ್ವನಿಗೂಡಿಸಿ ನೆರವು ಯೋಜನೆ ಪ್ರಾರಂಭಿಸಿದೆ. ಏಳು ಜಿಲ್ಲೆಗಳ ಫಲಾನುಭವಿಗಳಿಗೆ ಇಂದು ನೀಡುತ್ತಿರುವ ಆರ್ಥಿಕ ಸಹಾಯದ ಸದುಪಯೋಗವಾಗಬೇಕು. ಹಿಂದೆ ನಾನು ನಿಮ್ಮಂತೆ ವೇದಿಕೆಯ ಕೆಳಗಡೆ ಕೂತಿರುತ್ತಿದ್ದೆ. ಇಂದು ನಿಮ್ಮನ್ನು ನೋಡುವಾಗ ಖುಷಿಯಾಗುತ್ತದೆ. ನಿಮಗೆಲ್ಲರಿಗೂ ಪ್ರೇರಣೆಯಾಗಬೇಕು ಎಂದು ಕಾರ್ಯಕ್ರಮ ಆಯೋಜಿಸುತ್ತಿದ್ದೇವೆ. ಮಕ್ಕಳು ಇದರ ಪ್ರಯೋಜನ ಪಡೆದುಕೊಂಡು ಸಮಾಜದಲ್ಲಿ ಎತ್ತರದ ಸ್ಥಾನಕ್ಕೇರಬೇಕು. ಮುಂದೆ ನನ್ನಂತೆ ಸಮಾಜದ ನೊಂದವರ ಶೋಷಿತರ ಪರ ನೀವೆಲ್ಲರೂ ನಿಲ್ಲಬೇಕು" ಎಂದು ಆಶಯ ವ್ಯಕ್ತಪಡಿಸಿದರು.

"ಈ ವರ್ಷ ನೆರವು ಯೋಜನೆ ಏಳನೇ ವರ್ಷವನ್ನು ಪೂರೈಸುತ್ತಿದೆ. ಇನ್ನು ಮೂರು ವರ್ಷಗಳ ಕಾಲ ಯೋಜನೆ ಮುಂದುವರಿಯುತ್ತದೆ. ದಶಮಾನೋತ್ಸವ ಬಳಿಕ 'ನೆರವು' ಯೋಜನೆಯ ಫಲಾನುಭವಿಗಳನ್ನು ಸೇರಿಸಿಕೊಂಡು ಅದಕ್ಕೊಂದು ಸಾಮೂಹಿಕ ರೂಪ ಕೊಡುವ ಚಿಂತನೆ ಇದೆ. ಈ ವಿಸ್ತರಣೆಯಿಂದ ಪ್ರತೀ ವರ್ಷ ಕನಿಷ್ಠ ಹದಿನಾಲ್ಕು ಸಾವಿರ ಕುಟುಂಬಗಳಿಗೆ ನೆರವು ಕೊಡಲು ಸಾಧ್ಯವಾಗಲಿದೆ. ಇಂದಿನ ಆಧುನಿಕ ತಂತ್ರಜ್ಞಾನ ಯುಗದಲ್ಲಿ ವೈದ್ಯಕೀಯ ಚಿಕಿತ್ಸೆ ಸುಲಭವಾಗಿದೆ. ಆದರೆ ಆ ಸವಲತ್ತುಗಳಿಗೆ ಎಲ್ಲರಿಗೂ ಪ್ರವೇಶ ಸಾಧ್ಯವಾಗುತ್ತಿಲ್ಲ




ಎಂಬುದೂ ಅಷ್ಟೇ ಸತ್ಯ, ನಮ್ಮ ನೆರವಿನ ಮೊತ್ತದಲ್ಲಿ ದೊಡ್ಡ ಭಾಗ ಇದಕ್ಕೆ ಮೀಸಲಾಗಿದೆ. ಆಧುನಿಕ ಚಿಕಿತ್ಸೆಯ ಪ್ರಜಾಪ್ರಭುತ್ವೀಕರಣದ ನಿಟ್ಟಿನಲ್ಲಿ ನಮ್ಮದೊಂದು ಕಿರು ಹೆಜ್ಜೆ ಎಂದು ನಾವು ಪ್ರಾಮಾಣಿಕವಾಗಿ ಮತ್ತು ನಮ್ರತೆಯಿಂದ ಭಾವಿಸುತ್ತೇವೆ. ಈ ಯೋಜನೆಯನ್ನು ಆರಂಭ ಮಾಡಿದ ಮೊದಲ ವರ್ಷ ಒಟ್ಟು 1.25 ಕೋ.ರೂ. ನೆರವು ವಿತರಿಸಿದ್ದೇವೆ. ಆಗ 28 ಸಂಘ ಸಂಸ್ಥೆಗಳು ಪ್ರಯೋಜನ ಪಡೆದಿವೆ. ಈಗ 7ನೇ ವರ್ಷದಲ್ಲಿ 100ಕ್ಕೂ ಅಧಿಕ ಸಂಘ ಸಂಸ್ಥೆಗಳಿಗೆ ನೆರವು ವಿತರಣೆಯಾಗಲಿದೆ" ಎಂದರು.

ವಿಧಾನಸಭಾ ಸ್ಪೀಕರ್ ಯು.ಟಿ.ಖಾದರ್ ಅವರು ಮಾತನಾಡಿ, "ಹುಟ್ಟುವಾಗ ಹೆಸರು ಇರುವುದಿಲ್ಲ ಉಸಿರು ಮಾತ್ರ ಇರುತ್ತದೆ. ಹೋಗುವಾಗ ಉಸಿರು ಇರುವುದಿಲ್ಲ ಹೆಸರು ಮಾತ್ರ ಉಳಿಯುತ್ತದೆ ಅನ್ನುವ ಮಾತಿನಂತೆ ಎಂ.ಆರ್.ಜಿ. ಗ್ರೂಪ್ ಒಂದು ಅರ್ಥಪೂರ್ಣ ಕಾರ್ಯಕ್ರಮ ಆಯೋಜಿಸಿಕೊಂಡು ಬಂದಿದೆ. ಬದುಕು ಬೆಲೆ ಕಟ್ಟಲಾರದ ಮಾಣಿಕ್ಯ ಅದರಲ್ಲಿ ಶಾಂತಿ ಸಹಬಾಳ್ವೆ ಪ್ರೀತಿ ವಿಶ್ವಾಸದಿಂದ ಬದುಕಬೇಕು ಪ್ರಕಾಶ್ ಶೆಟ್ಟಿಯವರ ಬದುಕು ನಮಗೆಲ್ಲರಿಗೂ ಆದರ್ಶವಾಗಬೇಕು. ಮಾನವೀಯ ಮೌಲ್ಯಗಳನ್ನು ಇಂದಿನ ಯುವಪೀಳಿಗೆ ಮತ್ತು ಮುಂದಿನ ಸಮುದಾಯಕ್ಕೆ ವರ್ಗಾಯಿಸುವ ಬಲುದೊಡ್ಡ ಜವಾಬ್ದಾರಿ ನಮ್ಮೆಲ್ಲರದ್ದಾಗಬೇಕು. ಎಲ್ಲ ಜಾತಿ ಎಲ್ಲ ಸಮುದಾಯದ ಜನರನ್ನು ಒಂದೆಡೆ ಸೇರಿಸಿ ನೊಂದ ಶೋಷಿತ ಜನರ ಜೊತೆ ನಾನಿದ್ದೇನೆ ಎನ್ನುವ ಪ್ರಕಾಶ್ ಶೆಟ್ಟಿಯವರ ಮನೋಬಲಕ್ಕೆ ನಾವೆಲ್ಲರೂ ಬೆಂಬಲ ನೀಡಬೇಕಿದೆ. ಸಾಮರಸ್ಯ ಮತ್ತು ಶಾಂತಿಯುತ ಸಮಾಜದ ನಿರ್ಮಾಣವಾಗಬೇಕು ಇದಕ್ಕಾಗಿ ನಾವೆಲ್ಲರೂ ಶ್ರಮಪಡಬೇಕು" ಎಂದರು.

ಕಾರ್ಯಕ್ರಮದಲ್ಲಿ ಅಶ್ವಿನಿ ಪುನೀತ್ ರಾಜ್ ಕುಮಾರ್, ಆಶಾ ಪ್ರಕಾಶ್ ಶೆಟ್ಟಿ, ಮೂಡಬಿದ್ರೆಯ ಆಳ್ವಾಸ್ ಎಜುಕೇಷನ್ ಟ್ರಸ್ಟ್ ಅಧ್ಯಕ್ಷ ಡಾ.ಮೋಹನ್ ಆಳ್ವ, ಕಾಪು ಶಾಸಕ ಗುರ್ಮೆ ಸುರೇಶ್ ಶೆಟ್ಟಿ, ಎಂ.ಆರ್.ಜಿ.ಗ್ರೂಪ್ ಆಡಳಿತ ನಿರ್ದೇಶಕ ಗೌರವ್ ಪಿ.ಶೆಟ್ಟಿ, ಜಾಗತಿಕ ಬಂಟರ ಸಂಘಗಳ ಒಕ್ಕೂಟದ ಅಧ್ಯಕ್ಷ ಐಕಳ ಹರೀಶ್ ಶೆಟ್ಟಿ, ಒಡಿಯೂರು ಕ್ಷೇತ್ರದ ಗುರು ದೇವಾನಂದ ಸ್ವಾಮೀಜಿ, ಸಂಸದ ಬ್ರಿಜೇಶ್ ಚೌಟ, ಮಂಗಳೂರು ಉತ್ತರ ಕ್ಷೇತ್ರದ ಶಾಸಕ ಡಾ.ಭರತ್ ವೈ.ಶೆಟ್ಟಿ, ದಕ್ಷಿಣ ಕ್ಷೇತ್ರದ ಶಾಸಕ ಡಿ.ವೇದವ್ಯಾಸ ಕಾಮತ್, ದೇವಾನಂದ ಶೆಟ್ಟಿ ಸೇರಿದಂತೆ ಮತ್ತಿತರರು ಭಾಗಿಯಾಗಿದ್ದರು.

ಕಾಪು ಶಾಸಕ ಗುರ್ಮೆ ಸುರೇಶ್ ಶೆಟ್ಟಿ ಅವರು ಪ್ರಾಸ್ತಾವಿಕ ಮಾತನಾಡಿ ಅತಿಥಿಗಳನ್ನು ಸ್ವಾಗತಿಸಿದರು.

ಸಭಾ ಕಾರ್ಯಕ್ರಮದ ಬಳಿಕ ಸುಮಾರು 4000 ಕುಟುಂಬಗಳು ಹಾಗು 100ಕ್ಕೂ ಅಧಿಕ ಸಂಘ ಸಂಸ್ಥೆಗಳಿಗೆ ಒಟ್ಟು ರೂಪಾಯಿ 9.5 ಕೋಟಿಗೂ ಅಧಿಕ ಮೊತ್ತದ ನೆರವು ವಿತರಣೆ ಮಾಡಲಾಯಿತು.

ದಾಮೋದರ ಶರ್ಮಾ, ನಿತೇಶ್ ಎಕ್ಕಾರ್ ಕಾರ್ಯಕ್ರಮ ನಿರೂಪಿಸಿದರು. ಸಮೀಕ್ಷಾ ಶೆಟ್ಟಿ ಧನ್ಯವಾದ ಸಮರ್ಪಿಸಿದರು.

# ಕನ್ನಡ ಮಾಧ್ಯಮ ಕಲಿತು ಬಂದರೂ ಶೈಕ್ಷಣಿಕ ಸಾಧನೆ ಸಾಧ್ಯ: ನ್ಯಾ.ಡಾ.ಟಿ.ಎನ್.ಇನ್ನವಳ್ಳಿ



**ಹರೇಕಳ:** ಜೀವನದಲ್ಲಿ ಮುಖ್ಯವಾಗಿ ಬೇಕಾದುದು ವಿದ್ಯೆ. ಇದರಿಂದ ಜೀವನದ ಸುಖವನ್ನು ಗಳಿಸಿಕೊಳ್ಳಲು ಸಾಧ್ಯ, ಸುಖದ ಅನುಭವ ಮಕ್ಕಳಿಗೆ ಸಿಗಬೇಕಾದರೆ ಕಷ್ಟದ ಅರಿವೂ ಇರಬೇಕು. ವಿದ್ಯಾರ್ಥಿಗಳಲ್ಲಿ ಸಂಸ್ಕಾರ, ವಿಯೆಯ ಬೆಲೆಯನ್ನು ತಿಳಿಸುವ ಜವಬ್ದಾರಿ ಶಿಕ್ಷಕರದ್ದಾಗಿದೆ. ನಾವು ಜೀವನದಲ್ಲಿ ಎಷ್ಟೇ ಎತ್ತರಕ್ಕೆ ಏರಿದರೂ ನಾವು ಬೆಳೆದು ಬಂದ ದಾರಿ, ಬೇರುಗಳನ್ನು ಮರೆಯದೆ ಮುನ್ನಡೆಯಬೇಕು ಎಂದು ಕರ್ನಾಟಕ ಉಚ್ಛನ್ಯಾಯಾಲಯದ ನ್ಯಾಯಧೀಶರಾದ ಡಾ.ಟಿ.ಎನ್.ಇನ್ನವಳ್ಳಿ ಅವರು ಅಭಿಪ್ರಾಯಪಟ್ಟರು.

ಇವರು ಹರೇಕಳ ರಾಮಕೃಷ್ಣ ಅನುದಾನಿತ ಪ್ರೌಢಶಾಲೆ, ಪ್ರಾಥಮಿಕ ಶಾಲೆಯ ಪ್ರತಿಭೋತ್ಸವ–2025 ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಪೊಲೀಸ್ ಸ್ಟೇಷನ್, ಕೋರ್ಟ್ ಮೊದಲಾದವುಗಳನ್ನು ನೋಡದೆ ನಾವು ಬೆಳೆಯಬಹುದು. ಆದರೆ ನೀರು, ಆಹಾರ, ರೈತನನ್ನು ನೋಡದೆ ಬೆಳೆಯಲು ಖಂಡಿತಾ ಸಾಧ್ಯವಿಲ್ಲ. ಆದ್ದರಿಂದ ವಿದ್ಯೆಯೊಂದಿಗೆ ಜೀವನ ಸತ್ವವನ್ನು ಮರೆಯಬಾರದು. ಇಂದು ಹತ್ತು ಹನ್ನೆರಡು ವರ್ಷದ ಮಕ್ಕಳು ಆತ್ಮಹತ್ಯೆ ಮಾಡುತ್ತಾ ಇದ್ದಾರೆ. ಇದಕ್ಕೆಲ್ಲ ಎಳವೆಯಲ್ಲಿ ಮಕ್ಕಳಿಗೆ ಜೀವನದ ಶಿಕ್ಷಣ ಸಿಗದಿರುವುದೇ ಮುಖ್ಯ ಕಾರನ. ಈ ನಿಟ್ಟಿನಲ್ಲಿ ಶಿಕ್ಷಕರು ಹಾಗೂ ಪಾಲಕರ ಪಾತ್ರ ಮಹತ್ತರವಾದುದು ಎಂದರು.

> ಹರೇಕಳ ರಾಮಕೃಷ್ಣ ಶಾಲೆಯ ಹಳೆ ವಿದ್ಯಾರ್ಥಿಯಾಗಿದ್ದ ನನಗೆ ಮುಂದೆ ಹೈಸ್ಕೂಲ್ ಟೀಚರ್, ಉಪನ್ಯಾಸಕ ಆಗಬೇಕೇಂಬ ಕನಸು ಇತ್ತು. ಇದಕ್ಕಾಗಿ ಪಿಯುಸಿಯಲ್ಲಿ ಕಲಾವಿಭಾಗವನ್ನು ಆಯ್ಕೆ ಮಾಡಿದ್ದೆ.ಬಳಿಕ ತಂದೆಯ ಕನಸಿನಂತೆ ಲಾ ಕಾಲೇಜಿಗೆ ಸೇರಿ ಇದೀಗ ಉಚ್ಛನ್ಯಾಯಾಲಯದ ನ್ಯಾಯಾಧೀಶನಾಗಿದ್ದೇನೆ. ಹಳ್ಳಿಯಿಂದ, ಕನ್ನಡ ಮಾಧ್ಯಮ ಕಲಿತು ಬಂದವರೂ ಶೈಕ್ಷಣಿಕ ಸಾಧನೆಯಿಂದ ಜೀವನದಲ್ಲಿ ಯಶಸ್ಸು ಗಳಿಸಲು ಸಾಧ್ಯ
> ■ ನ್ಯಾ.ಟಿ.ಎನ್.ಇನ್ನವಳ್ಳಿ

ತ್ರಿಶಕ್ತಿ ವಿದ್ಯಾವರ್ಧಕ ಸಂಘದ ಅಧ್ಯಕ್ಷ ಕೆ.ಎನ್ ಆಳ್ವ ಅವರು ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿ, ಮಕ್ಕಳಿಗೆ ಭಾಷಾ ಜ್ಞಾನ ಮಾತ್ರವಲ್ಲ ಬದುಕಿನ ಜ್ಞಾನವನ್ನು ಬೆಳೆಸಬೇಕು. ಇದರಲ್ಲಿ ಶಿಕ್ಷಕರ ಪಾತ್ರ ಮಹತ್ವವಾದುದು ಎಂದರು

ಕಾರ್ಯಕ್ರಮದಲ್ಲಿ ನಿವೃತ್ತ ದೈಹಿಕ ಶಿಕ್ಷಕರಾದ ಗೋಪಾಲಕೃಷ್ಣ ಭಂಡಾರಿ, ಕಾರ್ಯದರ್ಶಿ ರಾಜ್‌ಕುಮಾರ್ ಶೆಟ್ಟಿ, ಕಡೆಂಜ ಸೋಮಶೇಖರ ಚೌಟ, ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕಿ ಪ್ರೇಮಲತಾ ಮೊದಲಾದವರು ಉಪಸ್ಥಿತರಿದ್ದರು.

ಮುಖ್ಯೋಪಾಧ್ಯಾಯರಾದ ಮೋಹಿನಿ ಅವರು ಸ್ವಾಗತಿಸಿದರು. ಶಿಕ್ಷಕರಾದ ಕೃಷ್ಣಶಾಸ್ತ್ರಿ ಅವರು ವಂದಿಸಿದರು. ದೈಹಿಕ ಶಿಕ್ಷಕರಾದ ತ್ಯಾಗಂ ಹರೇಕಳ ಕಾರ್ಯಕ್ರಮ ನಿರೂಪಿಸಿದರು.

# ಅಡ್ಯಾರ್ ಗ್ರಾಮೋತ್ಸವ ಇತರ ಗ್ರಾಮಗಳಿಗೂ ಮಾದರಿಯಾಗಲಿ: ನರೇಂದ್ರ ನಾಯಕ್

**ಮಂಗಳೂರು:** ಅಡ್ಯಾರು ಗ್ರಾಮ ಪಂಚಾಯತ್, ಪ್ರಕೃತಿ ಸಂಜೀವಿನಿ ಒಕ್ಕೂಟ ಹಾಗೂ ಸಹ್ಯಾದ್ರಿ ಕಾಲೇಜ್ ಆಫ್ ಇಂಜಿನಿಯರಿಂಗ್ ಅಂಡ್ ಮ್ಯಾನೇಜ್‌ಮೆಂಟ್ ಇದರ ಸಂಯುಕ್ತ ಆಶ್ರಯದಲ್ಲಿ 'ಅಡ್ಯಾರು ಗ್ರಾಮೋತ್ಸವ 2025' ಕಾರ್ಯಕ್ರಮವು ಡಿ.20ರ ಶನಿವಾರ ಸಹ್ಯಾದ್ರಿ ಕಾಲೇಜು ಮೈದಾನ, ಅಡ್ಯಾರಿನಲ್ಲಿ ವಿಜೃಂಭಣೆಯಿಂದ ಜರುಗಿತು.

'ಸೌಹಾರ್ದಯುತ ಗ್ರಾಮ ಸೌಹಾರ್ದಯುತ ಭಾರತ' ಎಂಬ ಸಂದೇಶದೊಂದಿಗೆ ಆಯೋಜಿಸಲಾಗಿರುವ ಈ ಗ್ರಾಮೋತ್ಸವದ ಮುನ್ನ ವಿವಿಧ ಶಾಲಾ ಮಕ್ಕಳ ಆಕರ್ಷಕ ಪಥ ಪಸಂಚಲನ, ಡ್ರೋನ್ ಹಾರಾಟ, ಜಾನಪದ ನೃತ್ಯ ನಡೆಯಿತು. ಕಾರ್ಯಕ್ರಮವನ್ನು ಪಾರಿವಾಳ ಹಾರಿಸುವ ಮೂಲಕ ಚಾಲನೆ ಗಣ್ಯರು ಚಾಲನೆ ನೀಡಿದರು.



ಎಕ್ಸ್ ಪರ್ಟ್ ಪರ್ಟ್ ಎಜುಕೇಷನಲ್ ಆಂಡ್ ಚಾರಿಟೇಬಲ್ ಟ್ರಸ್ಟ್ ನಿರ್ದೇಶಕ ನರೇಂದ್ರ ನಾಯಕ್ ರಿಬ್ಬನ್ ಕತ್ತರಿಸುವ ಮೂಲಕ ಪ್ರಕೃತಿ ಸಂಜೀವಿನಿ ಒಕ್ಕೂಟ ಹಾಗೂ ಗ್ರಾಮಸ್ಥರ ಸ್ವಸಹಾಯ ಗುಂಪುಗಳ ಮಾರಾಟ ಮಳಿಗೆಗಳಿಗೆ ಚಾಲನೆ ನೀಡಿದರಲ್ಲದೆ, ತೆಂಗಿನ ಸಿರಿಯನ್ನು ಅರಳಿಸುವ ಮೂಲಕ ಉದ್ಘಾಟನಾ ಸಮಾರಂಭ ನೆರವೇರಿಸಿದರು.

ಬಳಿಕ ಮಾತನಾಡಿದ ಅವರು, "ಮಕ್ಕಳು ಎಳವೆಯಲ್ಲೇ ಶಿಸ್ತು, ಸಂಯಮ ಬೆಳೆಸಿಕೊಳ್ಳಬೇಕು. ಗ್ರಾಮಗಳ ಜನರು ಒಗ್ಗಟ್ಟಾಗಿ ಸಂಘ ಸಂಸ್ಥೆಗಳು, ಗಣ್ಯರ ಕೂಡುವಿಕೆಯಿಂದ ಗ್ರಾಮೋತ್ಸವ ನಡೆಸಿ ಸಮಾಜದಲ್ಲಿ ಶಾಂತಿ, ಸಮಾನತೆ ಮತ್ತು ಏಕತೆಯನ್ನು ಏಕತೆಯನ್ನು ಸಾರಬೇಕು. ಅಡ್ಯಾರ್ ಗ್ರಾಮೋತ್ಸವ ಇತರ ಗ್ರಾಮಗಳಿಗೂ ಮಾದರಿ ಕಾರ್ಯಕ್ರಮವಾಗಬೇಕು" ಎಂದರು.

ಮುಖ್ಯ ಅತಿಥಿಯಾಗಿದ್ದ ಮಿನರ್ವ ಕಾಲೇಜ್ ಎಂಡಿ ಮನೋಜ್ ಕುಮಾರ್ ಮಾತನಾಡಿ, "ಇಂದು ರಸ್ತೆ ಅಪಘಾತ ಹೆಚ್ಚಾಗುತ್ತಿದ್ದು, ಮಕ್ಕಳು ರಸ್ತೆ ಸುರಕ್ಷತಾ ನಿಯಮಗಳನ್ನು ಪಾಲಿಸಬೇಕು. ರಸ್ತೆಯಲ್ಲಿ ವಾಹನ ಚಲಾಯಿಸುವಾಗ ನಿಯಮಗಳನ್ನು ಸರಿಯಾದ ರೀತಿಯಲ್ಲಿ ಪಾಲಿಸುವುದಲ್ಲದೆ ರಸ್ತೆ ದಾಟವಾಗ ಎಚ್ಚರವಹಿಸಬೇಕು" ಎಂದು ಕಿವಿಮಾತು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಅಡ್ಯಾರು ಗ್ರಾಮ ಪಂಚಾಯತ್ ಅಧ್ಯಕ್ಷ ಅಬ್ದುಲ್ ಜಲೀಲ್ ಮಾತನಾಡಿ, "ಗ್ರಾಮೋತ್ಸವ ನಡೆಸಲು ನಮಗೆ ಎಲ್ಲರ ಸಹಕಾರ ಸಿಕ್ಕಿದೆ. ಗ್ರಾಮದ ಜನರು ಸೇರಿಕೊಂಡು ಗ್ರಾಮದ ಜನರ ಅನೋನ್ಯತೆ, ಸೌಹಾರ್ದತೆಯನ್ನು ಹೆಚ್ಚಿಸುವ ನಿಟ್ಟಿನಲ್ಲಿ ಈ ಕಾರ್ಯಕ್ರಮ ಆಯೋಜಿಸಲಾಗಿದೆ. ಮುಂದೆಯೂ ಹಲವು ಸಮಾಜಮುಖಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು" ಎಂದರು.

ಬಳಿಕ ಅಡ್ಯಾರು ಗ್ರಾಮ ಪಂಚಾಯತ್ ವ್ಯಾಪ್ತಿಯ ಶಾಲಾ ಮಕ್ಕಳ ವೈವಿಧ್ಯಮಯ ಸಾಂಸ್ಕೃತಿಕ ಸ್ಪರ್ಧೆಗಳು ನಡೆದವು.

ವೇದಿಕೆಯಲ್ಲಿ ಅಡ್ಯಾರ್ ಗ್ರಾಮ ಪಂಚಾಯತ್ ಉಪಾಧ್ಯಕ್ಷೆ ಝೋಹರಾ, ತಾಲೂಕು ಮಟ್ಟದ ಗ್ಯಾರಂಟಿ ಸಮಿತಿಯ ಅಧ್ಯಕ್ಷ ಸುರೇಂದ್ರ ಕಂಬಳಿ, ಪ್ರಕೃತಿ ಸಂಜೀವಿನಿ ಒಕ್ಕೂಟದ ಅಧ್ಯಕ್ಷೆ ವಿಜಯಲಕ್ಷ್ಮಿ , ಪಿಡಿಓ ಅಬ್ದುಲ್ ಆಶ್ರಫ್, ಮಾಜಿ ಪಂಚಾಯತ್ ಅಧ್ಯಕ್ಷರು ಅಬ್ದುಲ್ ಸತ್ತಾರ್ ಮತ್ತಿತರರು ಉಪಸ್ಥಿತರಿದ್ದರು. ವಿಜೆ ಮನೋಜ್ ಕುಮಾರ್ ವಾಮಂಜೂರು ಕಾರ್ಯಕ್ರಮ ನಿರೂಪಿಸಿ, ಧನ್ಯವಾದವಿತ್ತರು. ಪ್ರಕೃತಿ ಸಂಜೀವಿನಿ ಒಕ್ಕೂಟದ ಸದಸ್ಯರಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಸಹ್ಯಾದ್ರಿ ಕಾಲೇಜು ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಪ್ರದರ್ಶನಗಳು ನಡೆದವು.

# ಸಯ್ಯಿದ್ ಮದನಿ ಮಹಿಳಾ ಕಾಲೇಜು ಕಟ್ಟಡದ ಗೇಟ್ ಉದ್ಘಾಟನೆ, ಕಟ್ಟಡಕ್ಕೆ ಶಿಲಾನ್ಯಾಸ



**ಉಳ್ಳಾಲ;** ಅಭಿವೃದ್ಧಿ ನಮ್ಮ ಗುರಿ ಆಗಿದ್ದು, ವಿದ್ಯಾರ್ಥಿಗಳು ಉನ್ನತಮಟ್ಟದ ಶಿಕ್ಷಣ ಪಡೆದು ಅಭಿವೃದ್ಧಿ ಕಡೆ ಹೆಜ್ಜೆ ಇಡಬೇಕು ಎಂದು ಸ್ಪೀಕರ್ ಯು.ಟಿ ಖಾದರ್ ಹೇಳಿದರು.

ಇವರು ಉಳ್ಳಾಲ ಸಯ್ಯದ್ ಮದನಿ ಚಾರಿಟೇಬಲ್ ಟ್ರಸ್ಟ್ ಇದರ ಆಶ್ರಯದಲ್ಲಿ ಹಝ್ರತ್ ಸಯ್ಯಿದ್ ಮದನಿ ಮಹಿಳಾ ಕಾಲೇಜು ಕಟ್ಟಡದ ಗೇಟ್ ಉದ್ಘಾಟನೆ ಹಾಗೂ ನೂತನ ಕಟ್ಟಡಕ್ಕೆ ಶಿಲಾನ್ಯಾಸ ನೆರವೇರಿಸಿ ಮಾತನಾಡಿದರು.

ವಿದ್ಯಾರ್ಥಿಗಳು ಜೀವನದಲ್ಲಿ ಒಂದು ಗುರಿಯನ್ನು ಇಟ್ಟುಕೊಳ್ಳಬೇಕು. ಅದಕ್ಕೆ ಅನುಗುಣವಾಗಿ ಶಿಕ್ಷಣ ಮುಂದುವರಿಸಿ ಒಂದು ಹಂತಕ್ಕೆ ತಲುಪಲು ವಿದ್ಯಾರ್ಥಿಗಳು ಪ್ರಯತ್ನ ಮಾಡಬೇಕು ಎಂದರು.

ಸಯ್ಯಿದ್ ಮಸೂದ್ ತಂಙಳ್ ನೂತನ ಕಟ್ಟಡ ನಿರ್ಮಾಣಕ್ಕೆ ಶಿಲಾನ್ಯಾಸಗೈದು ದುಆ ನೆರವೇರಿಸಿದರು. ದರ್ಗಾ ಅಧ್ಯಕ್ಷ ಹನೀಫ್ ಹಾಜಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

ಈ ಕಾರ್ಯಕ್ರಮದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಸದಾಶಿವ ಉಳ್ಳಾಲ್, ದರ್ಗಾ ಮಾಜಿ ಅಧ್ಯಕ್ಷ ಹಂಝು, ಹಾಲಿ ಸದಸ್ಯ ಝೈನುದ್ದೀನ್ ಮೇಲಂಗಡಿ, ವಕ್ಫ್ ಅಧಿಕಾರಿ ಅಬೂಬಕ್ಕರ್, ದಗಾ ಉಪಾಧ್ಯಕ್ಷ ಆಶ್ರಫ್ ರೈಟ್ ವೇ, ಪ್ರಧಾನ ಕಾರ್ಯದರ್ಶಿ ಶಿಹಾಬುದ್ದೀನ್ ಸಖಾಫಿ, ಕೋಶಾಧಿಕಾರಿ ನಾಝಿಮ್ ರಹ್ಮಾನ್, ಕಾರ್ಯದರ್ಶಿ ಮುಸ್ತಫಾ, ಮಾಜಿ ಅಧ್ಯಕ್ಷ ಕಣಚೂರು ಮೋನು, ಚೆರೆ ಮೋನು, ಅಬ್ದುಲ್ ಖಾದರ್, ಅಬ್ಬಾಸ್ ಕೋಡಿ, ಝಿಯಾದ್ ತಂಙಳ್ ಮೊಯ್ದಿನ್ ಕಲ್ಲಾಪು ಖಲೀಲ್, ಹಝ್ರತ್ ಸಯ್ಯಿದ್ ಮದನಿ ಮಹಿಳಾ ಕಾಲೇಜು ಪ್ರಾಂಶುಪಾಲ ರಸೂಲ್ ಖಾನ್, ಅಲ್ತಾಫ್, ಚಾರಿಟೇಬಲ್ ಟ್ರಸ್ಟ್ನ ಪ್ರಧಾನ ಕಾರ್ಯದರ್ಶಿ ಇಮ್ತಿಯಾಝ್ ಹಾಗೂ ಮತ್ತಿತರರು ಉಪಸ್ಥಿತರಿದ್ದರು. ಕೆಎಮ್ಕೆ ಮಂಜನಾಡಿ ಕಾರ್ಯಕ್ರಮ ನಿರೂಪಿಸಿದರು.

# ದಿ| ಅಬ್ದುಲ್ ರಹಿಮಾನ್ ಕೊಳತ್ತಮಜಲು ಸ್ಮರಣಾರ್ಥ ನಡೆದ ರಕ್ತದಾನ ಶಿಬಿರ

**ಮುಡಿಪು:** ಒಬ್ಬರ ಜೀವ ಉಳಿಸುವುದು, ನೊಂದವರ ಕಣ್ಣೀರು ಒರೆಸುವುದು, ಹಸಿದವರಿಗೆ ಅನ್ನ ನೀಡುವುದು ಅತ್ಯಂತ ಪುಣ್ಯದಾಯಕ ಕಾರ್ಯ. ಇದನ್ನು ಎಸ್ಕೆಎಸ್ಸೆಸ್ಸೆಫ್ ವಿವಿಧ ಶಾಖೆಗಳ ಮೂಲಕ ನಿರಂತರ ಮಾಡುತ್ತಾ ಬಂದಿದೆ. ಸಮಸ್ತ ನೂರನೇ ವರ್ಷಾಚರಣೆ ಪ್ರಯುಕ್ತ ರಕ್ತದಾನ ಸಹಿತ ವಿವಿಧ ಸಾಮಾಜಿಕ ಕಾರ್ಯ ನಡೆಸುತ್ತಿರುವುದು ಶ್ಲಾಘನೀಯ ಎಂದು ಆನೆಕಲ್ ಮಸೀದಿಯ ಖತೀಬ್ ಸಯ್ಯಿದ್ ಇಬ್ರಾಹಿಂ ಬಾತಿಷಾ ತಂಙಳ್ ಅಲ್ ಬುಖಾರಿ ಅಭಿಪ್ರಾಯಪಟ್ಟರು.



ಎಸ್ಕೆಎಸ್ಸೆಸ್ಸೆಫ್ ಇನೋಳಿ ಶಾಖೆ ಆಶ್ರಯದಲ್ಲಿ ಎಸ್ಕೆಎಸ್ಸೆಸ್ಸೆಫ್ ವಿಖಾಯ ದ.ಕ.ಜಿಲ್ಲಾ ಪಶ್ಚಿಮ ರಕ್ತದಾನಿ ಬಳಗ ಹಾಗೂ ದೇರಳಕಟ್ಟೆ ಯೆನೆಪೋಯ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ಸಹಯೋಗದಲ್ಲಿ ಸಮಸ್ತ ನೂರನೇ ವಾರ್ಷಿಕ ಪ್ರಚಾರ ಹಾಗೂ ದಿವಂಗತ ಅಬ್ದುಲ್ ರಹಿಮಾನ್ ಕೊಳತ್ತಮಜಲು ಸ್ಮರಣಾರ್ಥ ಇನೋಳಿ ಕಂಬಳ ಪದವು ಅಂಬೇಡ್ಕರ್ ಭವನದಲ್ಲಿ ನಡೆದ ರಕ್ತದಾನ ಶಿಬಿರ ಉದ್ಘಾಟಿಸಿ ಮಾತನಾಡಿದರು.

ಮಂಗಳೂರು ತಾಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ಮಹಮ್ಮದ್ ಮೋನು ಮಲಾರ್ ಮಾತನಾಡಿ, ಯಾವುದೇ ವಸ್ತು ಹಣ ಕೊಟ್ಟರೆ ಸಿಗುತ್ತದೆ, ಆದರೆ ರಕ್ತವನ್ನು ಹಣಕೊಟ್ಟು ಪಡೆಯುವುದಾಗಲೀ, ಕೃತವಾಗಿ ಸೃಷ್ಟಿಸುವುದಾಗಲೀ ಅಸಾಧ್ಯ, ರಕ್ತದಾನದಿಂದ ಇನ್ನೊಬ್ಬರಿಗೆ ಜೀವನ ನೀಡಿದ ಪುಣ್ಯವೂ ಸಿಗುತ್ತದೆ ಎಂದು ತಿಳಿಸಿದರು.

ಇನೋಳಿ ಜಾಮಿಯಾ ಮುಬಾರಕ್ ಮಸೀದಿಯ ಅಧ್ಯಕ್ಷ ಟಿ.ಎಚ್.ಅಬ್ಬಾಸ್ ಅಧ್ಯಕ್ಷತೆ ವಹಿಸಿದ್ದರು. ಪಜೀರ್ ಮರ್ಸಿಯಮ್ಮನವರ ಚರ್ಚ್ ಪಾಲನಾ ಮಂಡಳಿ ಉಪಾಧ್ಯಕ್ಷ ವಲೇರಿಯನ್ ಡಿಸೋಜ, ಪಾವೂರು ಗ್ರಾಮ ಪಂಚಾಯಿತಿ ಅಧ್ಯಕ್ಷ ಅಬ್ದುಲ್ ಮಜೀದ್ ಸಾತ್ಕೋ, ಇನೋಳಿ ಮಸೀದಿಯ ಮಾಜಿ ಅಧ್ಯಕ್ಷ ಮಹಮ್ಮದ್ ಮೋನು ಚಕ್ಕರ್, ಎಸ್ಕೆಎಸ್ಸೆಸ್ಸೆಫ್ ಇನೋಳಿ ವಲಯಾಧ್ಯಕ್ಷ ಜಾಫರ್ ಇನೋಳಿ, ದೇರಳಕಟ್ಟೆ ವಲಯ ಪ್ರಧಾನ ಕಾರ್ಯದರ್ಶಿ ಇರ್ಷಾದ್ ಎಚ್.ಕಲ್ಲ್, ಇನೋಳಿ ಬಿಸ್ಮಿಟ್ ಮಸೀದಿಯ ಉಪಾಧ್ಯಕ್ಷ ಹುಸೈನ್ ಬಾವು ಮೊದಲಾದವರು ಉಪಸ್ಥಿತರಿದ್ದರು.

ಪಾವೂರು ಗ್ರಾ.ಪಂ. ಸದಸ್ಯ ಮುಹಮ್ಮದ್ ಅನ್ಸಾರ್ ಸ್ವಾಗತಿಸಿದರು. ಎಸ್ಕೆಎಸ್ಸೆಸ್ಸೆಫ್ ಪ್ರಧಾನ ಕಾರ್ಯದರ್ಶಿ ಇಕ್ಬಾಲ್ ಕಾನ ಕಾರ್ಯಕ್ರಮ ನಿರೂಪಿಸಿದರು.

# ಹಳೆಕೋಟೆ ಸಯ್ಯದ್ ಮದನಿ ಶಾಲಾ ವಾರ್ಷಿಕ ಕ್ರೀಡಾಕೂಟ



**ಉಳ್ಳಾಲ:** ಶಾಲೆಗಳಲ್ಲಿ ಪಠ್ಯದ ಜೊತೆ ಪಠ್ಯೇತರ ಚಟುವಟಿಕೆಗಳೂ ಅಮೂಲ್ಯ. ಇತರ ಶಿಕ್ಷಣ ಸಂಸ್ಥೆಗಳಲ್ಲಿರುವ ವ್ಯವಸ್ಥೆಗಿಂತಲೂ ಹೆಚ್ಚಿನ ವ್ಯವಸ್ಥೆ ನಮ್ಮ ಸಂಸ್ಥೆಗಳಲ್ಲೂ ಇರಬೇಕೆನ್ನುವ ನೆಲೆಯಲ್ಲಿ ಕಾರ್ಯನಿರ್ವಹಿಸುತ್ತಿದೆ. ಡಿ.25ರಂದು ಕ್ರೀಡಾಂಗಣದ ಉದ್ಘಾಟನೆ ನಡೆಯಲಿದೆ ಎಂದು ಸಯ್ಯದ್ ಮದನಿ ದರ್ಗಾ ಅಧ್ಯಕ್ಷ ಸಯ್ಯದ್ ಮದನಿ ಜಾರಿಟೇಬಲ್ ಟ್ರಸ್ಟ್ ಅಧ್ಯಕ್ಷ ಬಿ.ಜಿ ಹನೀಫ್ ಅಭಿಪ್ರಾಯಪಟ್ಟರು.

ಉಳ್ಳಾಲದ ಮಾಸ್ತಿಕಟ್ಟೆ ಹಝ್ರತ್ ಶಾಲಾ ಮೈದಾನದಲ್ಲಿ ನಡೆದ ಹಳೆಕೋಟೆ ಸಯ್ಯದ್ ಮದನಿ ಉರ್ದು ಹಿರಿಯ ಪ್ರಾಥಮಿಕ ಮತ್ತು ಸಯ್ಯದ್ ಮದನಿ ಪ್ರೌಢಶಾಲಾ ವಾರ್ಷಿಕ ಕ್ರೀಡಾಕೂಟದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕ್ರೀಡೆ ಬದುಕಿನುದ್ದಕ್ಕೂ ಆರೋಗ್ಯ ಮತ್ತು ಮನಸ್ಸಿಗೆ ಸಂತೋಷ ನೀಡುತ್ತದೆ. ಹಝ್ರತ್ ಶಾಲೆಯಲ್ಲಿ ವಿಶಾಲ ಕ್ರೀಡಾಂಗಣ ನಿರ್ಮಿಸುವ ಮೂಲಕ ಟ್ರಸ್ಟ್ ಅಧೀನದ ಶಿಕ್ಷಣ ಸಂಸ್ಥೆಗಳಿಗೆ ಕ್ರೀಡಾಂಗಣ ಕೊರತೆ ನಿವಾರಿಸಲಾಗಿದೆ ಎಂದು ತಿಳಿಸಿದರು.

ಟ್ರಸ್ಟ್ ಕೋಶಾಧಿಕಾರಿ ಅಬೂಬಕ್ಕರ್ ಕ್ರೀಡಾಕೂಟ ಉದ್ಘಾಟಿಸಿದರು. ಈ ಸಂದರ್ಭ ಸಯ್ಯಾದ್ ಮದನಿ ಚಾರಿಟೇಬಲ್ ಟ್ರಸ್ಟ್ ಪ್ರಧಾನ ಕಾರ್ಯದರ್ಶಿ ಇಮ್ತಿಯಾಝ್ ಹುಸೈನ್, ದರ್ಗಾ ಕೋಶಾಧಿಕಾರಿ ನಾಝಿಂ, ಉಳ್ಳಾಲ ಗುಚ್ಚ ಸಂಪನ್ಮೂಲ ವ್ಯಕ್ತಿ ಮೋಹನ್ ಕುಮಾರ್, ದೈಹಿಕ ಶಿಕ್ಷಣ ಶಿಕ್ಷಕರ ಸಂಘ ಮಂಗಳೂರು ದಕ್ಷಿಣ ವಲಯ ಕಾರ್ಯದರ್ಶಿ ಮೋಹನ್ ಶಿರ್ಲಾಲ್, ಹಳೆಕೋಟೆ ಶಾಲಾಭಿವೃದ್ಧಿ ಸದಸ್ಯರಾದ ಅಲ್ತಾಫ್ ಯು.ಎಚ್., ಕರೀಂ ಯು.ಎಚ್., ಕ್ರೀಡಾ ಸಂಘಟಕ ಸಾಜಿದ್ ಉಳ್ಳಾಲ್, ಅಧೀನ ವಿದ್ಯಾಸಂಸ್ಥೆಗಳ ಪ್ರಾಂಶುಪಾಲರು, ಮುಖ್ಯಶಿಕ್ಷಕರು ಉಪಸ್ಥಿತರಿದ್ದರು.

ಮುಖ್ಯಶಿಕ್ಷಕ ಕೆಎಂಕೆ ಮಂಜನಾಡಿ ಸ್ವಾಗತಿಸಿದರು. ಶಿಕ್ಷಕಿ ಸಪ್ನಾ ವಂದಿಸಿದರು. ಶಿಕ್ಷಕಿ ಶಕೀಲಾ ಕಾರ್ಯಕ್ರಮ ನಿರೂಪಿಸಿದರು.

# ಕೆ.ಸಿ.ರೋಡಲ್ಲಿ ಎಮ್‌ಡಿಎಂಎ ಮಾರಾಟ: 11 ಗ್ರಾಂ ಡ್ರಗ್ಸ್ ವಶ

**ಉಳ್ಳಾಲ:** ತಲಪಾಡಿ ಗ್ರಾಮದ ಕೆ.ಸಿ ರೋಡ್ ಫಲಾಹ್ ಶಾಲಾ ಬಸ್ಸು ನಿಲ್ದಾಣದ ಬಳಿಯ ಸಾರ್ವಜನಿಕ ಸ್ಥಳದಲ್ಲಿ ಎಮ್‌ಡಿಎಂಎ ಕ್ರಿಸ್ಟಲ್ ಎಂಬ ಮಾದಕ ವಸ್ತುವನ್ನು ಮಾರಾಟದಲ್ಲಿ ತೊಡಗಿದ್ದ ಕೇರಳದ ಉಪ್ಪಳ, ಮಂಗಲ್ಪಾಡಿ ನಿವಾಸಿ ಶೇಖ್ ಮೊಹಮ್ಮದ್ ಕೈಫ್ (22) ಎಂಬಾತನನ್ನು ಉಳ್ಳಾಲ ಪೊಲೀಸರು ಸೋಮವಾರದಂದು ಕಾರ್ಯಾಚರಣೆ ನಡೆಸಿ ವಶಕ್ಕೆ ಪಡೆದಿದ್ದು ,ಕೃತ್ಯದಲ್ಲಿ ತೊಡಗಿದ್ದ ಮತ್ತಿಬ್ಬರು ಪೆಡ್ಲರ್ ಗಳು ಪರಾರಿಯಾಗಿದ್ದಾರೆ.



ಬಂಧಿತ ಆರೋಪಿ ಮೊಹಮ್ಮದ್ ಕೈಫ್ ನಿಂದ 55,000/– ರೂಪಾಯಿ ಬೆಲೆ ಬಾಳುವ ನಿಷೇಧಿತ 11 ಗ್ರಾಂ ಎಮ್ ಡಿಎ??? ಕ್ರಿಸ್ಟಲ್ ಮತ್ತು ಕೃತ್ಯಕ್ಕೆ ಬಳಸಿದ್ದ 1 ತೂಕ ಮಾಪನ,500 ರೂ.ನಗದು ಮತ್ತು 1 ಮೊಬೈಲ್ ಫೋನನ್ನು ಪೊಲೀಸರು ಜಪ್ತಿಗೊಳಿಸಿದ್ದಾರೆ.ಸ್ಥಳದಲ್ಲಿದ್ದ ಮತ್ತಿಬ್ಬರು ಡ್ರಗ್ ಪೆಡ್ಲರ್ ಗಳಾದ ಶಮೀರ್ ಕಾಂಬ್ಳೆ ಮತ್ತು ಜಾವೀದ್ ಎಂಬವರು ಪರಾರಿಯಾಗಿದ್ದಾರೆ.

ಮೊಹಮ್ಮದ್ ಕೈಫ್ ಎಂಬಾತನು ವಿಲಾಸಿ ಜೀವನ ನಡೆಸಲು ಉಪ್ಪಳದ ಶಮೀರ್ ಕಾಂಬ್ಳೆ ಮತ್ತು ಜಾವೀದ್ ಎಂಬವರೊಂದಿಗೆ ಸೇರಿ ಕೆಸಿ ರೋಡ್ ಫಲಾಹ್ ಶಾಲಾ ಬಳಿಯ ಸಾರ್ವಜನಿಕ ಸ್ಥಳದಲ್ಲಿ ಪರಿಚಯಸ್ಥ ಗಿರಾಕಿಗಳಿಗೆ ಎಮ್‌ಡಿಎಂಎ ಕ್ರಿಸ್ಟಲನ್ನು ಪೂರೈಸುತ್ತಿದ್ದನೆನ್ನಲಾಗಿದೆ. ಈ ಬಗ್ಗೆ ಖಚಿತ ಮಾಹಿತಿ ಪಡೆದ ಉಳ್ಳಾಲ ಪೊಲೀಸರು ಸ್ಥಳಕ್ಕೆ ದಾಳಿ ನಡೆಸಿದಾಗ ಶಮೀರ್ ಕಾಂಬ್ಳೆ ಮತ್ತು ಜಾವೀದ್ ಬೈಕಲ್ಲಿ ತಲೆಮರೆಸಿಕೊಂಡಿದ್ದಾರೆ.

ಪೊಲೀಸರು ಶೇಖ್ ಮೊಹಮ್ಮದ್ ಕೈಫ್ ನನ್ನು ವಶಕ್ಕೆ ಪಡೆದು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದಾರೆ.

# ತೊಕ್ಕೊಟ್ಟು ಶ್ರೀ ಸಾಯಿ ಪರಿವಾರ್ ಟ್ರಸ್ಟ್‌ಗೆ ಅಯ್ಯಪ್ಪ ವ್ರತಧಾರಿಗಳ ಆಗಮನ



**ತೊಕ್ಕೊಟ್ಟು:** ತೊಕ್ಕೊಟ್ಟಿನ ಅಯ್ಯಪ್ಪ ವೃತಧಾರಿಗಳು ಸಾಯಿ ಪರಿವಾರ್ ಸೇವಾಲಯಕ್ಕೆ ಆಗಮಿಸಿ, ಬಾಬಾರಿಗೆ ಆರತಿ ಬೆಳಗಿ, ಫಲಹಾರ ಸ್ವೀಕರಿಸಿದರು.

ಈ ಸಂದರ್ಭದಲ್ಲಿ 108 ದಿನಗಳ ಕಾಲ ಸಾಯಿ ಪರಿವಾರ್ ನಲ್ಲಿ ವೃತಾಚರಣೆಗೈದು, ಕೊಲ್ಲೂರಿನಿಂದ ಶಬರಿಮಲೆಗೆ ಪಾದಯಾತ್ರೆ ಕೈಗೊಂಡ ವಿಜಯ ಪಂಡಿತ್ ಹೌಸ್ ಅವರನ್ನು ಗೌರವಿಸಲಾಯಿತು.

ಸಾಯಿ ಪರಿವಾರ್‌ನ ಟ್ರಸ್ಟಿ ಪುರುಷೋತ್ತಮ ಕಲ್ಲಾಪು ಸಾಯಿ ಪರಿವಾರ್ ನಿಂದ ಶಬರಿಮಲೆ ಯಾತ್ರೆ ಕೈಗೊಂಡಿದ್ದಾರೆ.

ಈಸಂದರ್ಭ ಪುಟ್ಟಪ್ಪ ಗುರುಸ್ವಾಮಿ ಅಯ್ಯಪ್ಪ ಭಕ್ತವೃಂದದ ಗುರುಸ್ವಾಮಿ ಪ್ರವೀಣ್ ಮಸ್ಕಾಂ ಮತ್ತು ವೃತಧಾರಿಗಳು, ಸಾಯಿ ಪರಿವಾರ್ ಸದಸ್ಯರು, ಮಹಿಳಾ ಸದಸ್ಯರು ಉಪಸ್ಥಿತರಿದ್ದರು.

# ಮಂಗಳೂರು ವಿಶ್ವವಿದ್ಯಾನಿಲಯದ ವಿದ್ಯಾರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳ ತಯಾರಿಗಾಗಿ ಕಾರ್ಯಾಗಾರ

**ಕೊಣಾಜೆ:** ಮಂಗಳೂರು ವಿಶ್ವವಿದ್ಯಾನಿಲಯದ ವಾಣಿಜ್ಯ ವಿಭಾಗ ಮತ್ತು ಯೂನಿಯನ್ ಬ್ಯಾಂಕ್ ಚೇರ್ ವತಿಯಿಂದ ವಿದ್ಯಾರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತಯಾರಿ ಕುರಿತು ಒಂದು ವಾರದ ಕಾರ್ಯಾಗಾರ ಇತ್ತೀಚಿಗೆ ನಡೆಯಿತು.

ಸಂಪನ್ಮೂಲ ವ್ಯಕ್ತಿಗಳಾಗಿ ಶ್ರೀ ಗೋಕರ್ಣನಾಥೇಶ್ವರ ಕಾಲೇಜು ಮಂಗಳೂರಿನ ಪ್ರಾಧ್ಯಪಕರಾದ ಡಾ.ಯತೀನ್, ಮಂಗಳೂರು ಶಾರದಾ ಕಾಲೇಜಿನ ಇಮಗ್ಲೀಷ್ ಪ್ರಾಧ್ಯಾಪಕರಾದ ಡಾ.ಮೀನಾ ಕೆ ವಣಿಕೇರ್, ಮಂಗಳೂರಿನ ಬೆಸೆಂಟ್ ಸಂಧ್ಯಾ ಕಾಲೇಜಿನ ಸಹಾಯಕ ಪ್ರಾಧ್ಯಾಪಕರಾದ ಡಾ.ಪ್ರಸನ್ನಕುಮಾರ್ ಎಂ.ಜೆ, ಯೆನಪೋಯ ವಿಶ್ವವಿದ್ಯಾನಿಲಯದ ಸಂಶೋಧನಾ ವಿದ್ಯಾರ್ಥಿ ಮ್ಯೂರಲ್



ಹೆನ್ರಿತ ಕುಟಿನ್ಹ ಮತ್ತು ಮಂಗಳೂರು ವಿಶ್ವವಿದ್ಯಾನಿಲಯ ವಾಣಿಜ್ಯ ವಿಭಾಗದ ಮುಖ್ಯಸ್ಥರಾದ ಡಾ.ಪ್ರೀತಿ ಕೀರ್ತಿ ಡಿ'ಸೋಜ ಮಾಹಿತಿಗಳನ್ನು ಹಂಚಿಕೊಂಡರು.

ಕಾರ್ಯಾಗಾರ ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಮಂಗಳೂರು ವಿಶ್ವವಿದ್ಯಾನಿಲಯ ವಿಶ್ರಾಂತ ಕುಲಸಚಿವರಾದ ಕೆ.ರಾಜು ಮೊಗವೀರ ಕೆ.ಎಎಸ್ ಮತ್ತು ಅತಿಥಿಗಳಾಗಿ ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್ ಲೆಕ್ಕಾಧಿಕಾರಿ ಅಸ್ಮಾ ಕೆ.ಎಸ್.ಎ.ಎಸ್ ಉಪಯುಕ್ತ ಮಾರ್ಗದರ್ಶನ ನೀಡಿದರು.

ಸಮಾರೋಪ ಸಮಾರಂಭದ ಸಭಾಧ್ಯಕ್ಷತೆಯನ್ನು ವಾಣಿಜ್ಯ ವಿಭಾಗದ ಮುಖ್ಯಸ್ಥರಾದ ಡಾ.ಪ್ರೀತಿ ಕೀರ್ತಿ ಡಿಸೋಜ ವಹಿಸಿದ್ದರು. ವೇದಿಕೆಯಲ್ಲಿ ಉಪನ್ಯಾಸಕರಾದ ಡಾ.ದಿನಕರ ಕೇಂಜೂರು, ಡಾ.ರಮ್ಯ ಕೆ.ಆರ್, ವೈಶಾಲಿ ಕೆ ಮತ್ತು ಸಿ.ಲಹರಿ ಉಪಸ್ಥಿತರಿದ್ದರು.

ಕೃತಿಕ ಸ್ವಾಗತಿಸಿದರು. ಹರ್ಷಿತಾ ಬಿ,ನ್ ಮತ್ತು ಪಲ್ಲವಿ ಜೆ ಅತಿತಿಗಳನ್ನು ಪರಿಚಯಿಸಿದರು. ಪ್ರಿನ್ಸನ್ ಡಿಸೋಜ ಕಾರ್ಯಾಗಾರದ ವಿದ್ಯಾರ್ಥಿಗಳ ಪಟ್ಟಿಯನ್ನು ವಾಚಿಸಿದರು. ಮೋಕ್ಷಿತ ಎಮ್, ಮತ್ತು ತಂಡದವರು ಪ್ರಾರ್ಥಿಸಿದರು. ವೈಶಾಲಿ ಕೆ ವಂದಿಸಿದರು. ಸಜೀಲಾ ಕೆ ಕಾರ್ಯಕ್ರಮ ನಿರೂಪಿಸಿದರು.

## ಅಮೂಲ್ ಐಸ್‌ಕ್ರೀಂ ಪಾರ್ಲರ್ ಲಕ್ಕಿ ಕೂಪನ್ ಡ್ರಾ!
# ಪ್ರಥಮ ವಜ್ರ, ದ್ವಿತೀಯ ಮೊಹಮ್ಮದ್ ಸಮದ್, ತೃತೀಯ ರೋದಿ ಮೊಂತೆರೋ

ತೊಕ್ಕೊಟ್ಟು: ಇಲ್ಲಿ ಕಾರ್ಯಾಚರಿಸುತ್ತಿರುವ ಅಮೂಲ್ ಐಸ್‌ಕ್ರೀಂ ಪಾರ್ಲರ್ 6ನೇ ವರ್ಷವನ್ನು ಪೂರೈಸಿದೆ. ಈ ಹಿನ್ನಲೆ ಪಾರ್ಲರ್ ಮಾಲಕರಾದ ಜಯಪ್ರಕಾಶ್, ನಮಿತಾ ದಂಪತಿ ನೇತೃತ್ವದಲ್ಲಿ ಲಕ್ಕಿ ಕೂಪನ್ ಡ್ರಾ ನಡೆದಿದೆ. ಹೌದು, ಸದಾ ಗ್ರಾಹಕರ ನೆಚ್ಚಿನ ಐಸ್‌ಕ್ರೀಂ ಪಾರ್ಲರ್ ಆಗಿರುವ ಅಮೂಲ್ ಐಸ್‌ಕ್ರೀಂ ಪಾರ್ಲರ್ ತನ್ನ 6ನೇ ವಾರ್ಷಿಕೋತ್ಸವದ ಪ್ರಯುಕ್ತ ಬಿಗ್ ಆಫರ್ ಇಟ್ಟಿತ್ತು. ಫ್ರೀ ಕೂಪನ್ ಪಡೆದ ಗ್ರಾಹಕರ ಪೈಕಿ ಮೊದಲ ಅದೃಷ್ಟಶಾಲಿ ಬಹುಮಾನವನ್ನು ಗ್ರಾಹಕರಾದ ವಜ್ರ ಅವರು ಪಡೆದುಕೊಂಡಿದ್ದಾರೆ. ಎರಡನೇ ಅದೃಷ್ಟಶಾಲಿ ಬಹುಮಾನವನ್ನು ಮೊಹಮ್ಮದ್ ಸಮದ್ ಅವರು ತಮ್ಮದಾಗಿಸಿಕೊಂಡರೆ, ಮೂರನೇ ಬಹುಮಾನವನ್ನು ರೋದಿ ಮೋತೆರೋ ಅವರು ಪಡೆದುಕೊಂಡಿದ್ದಾರೆ. ಇನ್ನುಳಿದಂತೆ



10 ಅದೃಷ್ಟಶಾಲಿ ಗ್ರಾಹಕರು ಗಿಫ್ಟಳನ್ನು ತಮ್ಮದಾಗಿಸಿಕೊಂಡಿದ್ದಾರೆ. ಅಮೂಲ್ ಐಸ್‌ಕ್ರೀಂ ಅಂದರೆ ಯಾರಿಗೆ ತಾನೇ ಇಷ್ಟ ಆಗಲ್ಲಾ..? ಸಣ್ಣಮಕ್ಕಳಿಂದ ಹಿಡಿದು ಪ್ರತಿಯೊಬ್ಬರಿಗೂ ಅಮೂಲ್ ಬ್ರ್ಯಾಂಡ್ ಐಸ್‌ಕ್ರೀಂ ಅಂದರೆ ಬಲುಇಷ್ಟ. ಸಂತಸದ ಕ್ಷಣಗಳನ್ನು ಅಮೂಲ್ ಐಸ್‌ಕ್ರೀಂ ಜೊತೆ ಕಳೆಯಿರಿ. ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ; 7349238233, 9611263985

## ಮರಳಿ ಕಾಂಗ್ರೆಸಿಗೆ ಕಾಂಗ್ರೆಸ್ ಮುಖಂಡ ಸಂತೋಷ್ ಶೆಟ್ಟಿ ಅಸೈಗೋಳಿ?

**ಉಳ್ಳಾಲ:** ಹಿಂದೆ ಉಳ್ಳಾಲ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾಗಿದ್ದ ಹಿರಿಯ ಕಾಂಗ್ರೆಸ್ ಮುಖಂಡ ಸಂತೋಷ್ ಶೆಟ್ಟಿ ಅಸೈಗೋಳಿ ಮರಳಿ ಕಾಂಗ್ರೆಸ್ಸಿಗೆ ಬರುವ ಎಲ್ಲಾ ಲಕ್ಷಣಗಳು ಗೋಚರಿಸಿವೆ. ಉಳ್ಳಾಲ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾಗಿದ್ದುಕೊಂಡು ಕಾಂಗ್ರೆಸ್ಸಿನಲ್ಲಿ ಸಕ್ರಿಯವಾಗಿದ್ದ ಸಂತೋಷ್ ಶೆಟ್ಟಿ ಅಸೈಗೋಳಿ,



ಬಳಿಕ ಕಾಂಗ್ರೆಸ್ಸನ್ನು ತೊರೆದು ಉಳ್ಳಾಲ ಶಾಸಕರ ವಿರುದ್ಧ ಮಂಗಳೂರಿನಲ್ಲಿ ಸುದ್ದಿಗೋಷ್ಠಿ ನಡೆಸಿ ಆರೋಪಗಳ ಸುರಿಮಳೆಯನ್ನೇ ಗೈದಿದ್ದರು. ತದನಂತರ ಮಂಗಳೂರು ಮಂಡಲ ಬಿಜೆಪಿ ಹಮ್ಮಿಕೊಂಡಿದ್ದ ಸಭೆಯಲ್ಲಿ ಅಧಿಕೃತವಾಗಿ ಸೇರ್ಪಡೆಗೊಂಡು ಬಿಜೆಪಿಯಲ್ಲಿಯೂ ಪಕ್ಷದ ಜವಾಬ್ದಾರಿಯನ್ನು ಪಡೆದುಕೊಂಡಿದ್ದರು. ಇದೀಗ ಪಟ್ಟೋರಿಯಲ್ಲಿ ನಡೆದ ವರ್ಷಾವಧಿ ಜಾತ್ರೆ ಪ್ರಯುಕ್ತ ವಿಧಾನಸಭಾಧ್ಯಕ್ಷರು ಯು.ಟಿ.ಖಾದರ್, ಸಹೋದರ ಯು.ಟಿ.ಇಫ್ತಿಕಾರ್ ಆಲಿ ಸೇರಿದಂತೆ ಕಾಂಗ್ರೆಸ್ ಮುಖಂಡರು ಸಂತೋಷ್ ಶೆಟ್ಟಿ ಅಸೈಗೋಳಿ ಅವರ ಮನಗೆ ಭೇಟಿ ನೀಡಿದ್ದಾರೆ. ಇದರಿಂದ ಮತ್ತೊಮ್ಮೆ ಸಂತೋಷ್ ಶೆಟ್ಟಿ ಅಸೈಗೋಳಿ ಶಾಸಕರ ಜತೆಗಿದ್ದ ಮುನಿಸು ಮರೆತು ಕಾಂಗ್ರೆಸ್ಸಿನತ್ತ ವಾಲಿರುವುದು ಸ್ಪಷ್ಟ ಅನ್ನುವ ಮಾತುಗಳು ಸಾರ್ವಜನಿಕ ವಲಯದಿಂದ ಕೇಳಿಬಂದಿದೆ. ಇನ್ನು ಮುನಿಸಿನ ಸಂದರ್ಭದಲ್ಲಿ ಇವರ ಜೊತೆಗೆ ಬಿಜೆಪಿ ಪಕ್ಷದಲ್ಲಿದ್ದವರ ನಡೆ ಏನೆಂಬುವುದು ಕುತೂಹಲ ಮೂಡಿಸಿದೆ.

## ಜಿಲ್ಲಾಮಟ್ಟದ ಪ್ರತಿಭಾ ಕಾರಂಜಿ: ಅನನ್ಯಾ ರಾಜ್ಯಮಟ್ಟಕ್ಕೆ ಆಯ್ಕೆ



**ಬಂಟ್ವಾಳ :**ಮೂಡುಬಿದಿರೆಯ ಸೈಂಟ್ ಥಾಮಸ್ ಆಂಗ್ಲಮಾಧ್ಯಮ ಪ್ರೌಢಶಾಲೆಯಲ್ಲಿ ನಡೆದ ದಕ್ಷಿಣ ಕನ್ನಡ ಜಿಲ್ಲಾಮಟ್ಟದ ಪ್ರತಿಭಾ ಕಾರಂಜಿಯ ರಂಗೋಲಿ ಸ್ಪರ್ಧೆಯಲ್ಲಿ ಅನನ್ಯ ತಲೆಂಗಳ ಪ್ರಥಮ ಸ್ಥಾನ ಪಡೆದಿದ್ದಾರೆ. ಆ ಮೂಲಕ ರಾಜ್ಯ ಮಟ್ಟದ ಪ್ರತಿಭಾ ಕಾರಂಜಿಗೆ ಆಯ್ಕೆಯಾಗಿದ್ದಾರೆ. ಕೊಣಾಜೆ ವಿಶ್ವಮಂಗಳ ಹೈಸ್ಕೂಲ್‌ನ ಹತ್ತನೇ ತರಗತಿ ವಿದ್ಯಾರ್ಥಿನಿಯಾಗಿರುವ ಅನನ್ಯ ತಲೆಂಗಳ ಅವರು ಪತ್ರಕರ್ತ ಕೃಷ್ಣಮೋಹನ ತಲೆಂಗಳ ಮತ್ತು ಶಿಕ್ಷಕಿ ವತ್ಸಲ ಅವರ ಸುಪುತ್ರಿಯಾಗಿದ್ದಾಳೆ.

## ನರಿಂಗಾನ ದೈಹಿಕ ಶಿಕ್ಷಕ ಪ್ರಭಾಕರ್ ಜೋಗಿ ಇನ್ನಿಲ್ಲ

**ನರಿಂಗಾನ:** ನರಿಂಗಾನ ಕಲ್ಲರಕೋಡಿ ಸರ್ಕಾರಿ ಶಾಲಾ ದೈಹಿಕ ಶಿಕ್ಷಣ ಶಿಕ್ಷಕರಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ವಿದ್ಯಾರ್ಥಿಗಳ ನೆಚ್ಚಿನ ಶಿಕ್ಷಕರೆಂದೇ ಕರೆಸಿಕೊಳ್ಳುತ್ತಿದ್ದ ಪ್ರಭಾಕರ್ ಜೋಗಿ ಅವರು ಮಾಡೂರು ಸಮೀಪದ ಕೊಂಡಾಣದಲ್ಲಿರುವ ತನ್ನ ಸ್ವಂತ ನಿವಾಸದಲ್ಲಿರುವ ಬಾವಿಗೆ ಹಾರಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ.



ಪ್ರಭಾಕರ ಜೋಗಿಯವರು ಉಳ್ಳಾಲ ತಾಲೂಕಿನ ಹಲವು ಶಾಲೆಗಳಲ್ಲಿ ಶಿಕ್ಷಕರಾಗಿ ಕರ್ತವ್ಯ ನಿರ್ವಹಿಸಿದ್ದು, ವಿದ್ಯಾರ್ಥಿಗಳು ಮೆಚ್ಚಿದ ಶಿಕ್ಷಕರಾಗಿದ್ದರು. ಅದಲ್ಲದೇ ದೈಹಿಕ ಶಿಕ್ಷಕರ ಸಂಘಟನೆಗಳಲ್ಲಿಯೂ ಗುರುತಿಸಿಕೊಂಡವರಾಗಿದ್ದರು.

ಸರಳ, ಸಜ್ಜನಿಕೆಯ ಸ್ವಭಾವವುಳ್ಳವರು, ಒರ್ವ ಶಿಕ್ಷಕರಾಗಿ ವಿದ್ಯಾರ್ಥಿಗಳಿಗೆ ಬುದ್ಧಿಮಾತು ಹೇಳುವ ಸ್ಥಾನದಲ್ಲಿದ್ದ ಜೋಗಿಯವರು ಆತ್ಮಹತ್ಯೆ ಮಾಡಿಕೊಂಡಿರುವುದು ನಿಜವಾಗಿಯೂ ದುರಂತವೇ ಸರಿ. ಆತ್ಮಹತ್ಯೆಗೆ ನಿಖರ ಕಾರಣ ತಿಳಿದು ಬಂದಿಲ್ಲ. ಈ ಬಗ್ಗೆ ಸಂಬಂಧಪಟ್ಟ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಈ ಹಿಂದೆ ಪ್ರಭಾಕರ ಜೋಗಿಯವರು ನಾಪತ್ತೆಯಾಗಿರುವ ಬಗ್ಗೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು ಎನ್ನಲಾಗಿದೆ.



ಫಜೀರು ಮರ್ಸಿಯಮ್ಮನವರ ಇಗರ್ಜಿಯಲ್ಲಿ ಕ್ರಿಸ್ಮಸ್ ಪ್ರಯುಕ್ತ ಜರಗಿದ ವಿಶೇಷ ಪೂಜೆಯಲ್ಲಿ ಪ್ರಧಾನ ಧರ್ಮಗುರುಗಳಾಗಿ ಫಾ.ರೊಕ್ಕಿ ಡಿಕುನ್ಹಾ, ಚರ್ಚ್ ಧರ್ಮಗುರು ಜೋಸೆಫ್ ಮಸ್ಕರೇನಸ್, ಫಾ. ರೋಷನ್ ಡಿಸೋಜಾ ಹಾಗೂ ಫಾ.ಸೂರಜ್ ಜೋಸೆಫ್ ಲೋಬೊ ಪಾಲ್ಗೊಂಡರು.

## ಬೀರಿಯ ಅನುದಾನಿತ ಸ್ಟೆಲ್ಲಾ ಮಾರಿಸ್ ಶಾಲೆ ಕಣ್ಣಿನ ದ್ರಷ್ಟಿದೋಷ ವಿರುವ ವಿದ್ಯಾರ್ಥಿಗಳಿಗೆ ಕನ್ನಡಕ ವಿತರಣೆ

**ಸೋಮೇಶ್ವರ:** ಲಯನ್ಸ್ ಕ್ಲಬ್ ಸೋಮೇಶ್ವರದ ಸೇವಾ ಅಂಗವಾಗಿ ಬೀರಿಯ ಅನುದಾನಿತ ಸ್ಟೆಲ್ಲಾ ಮಾರಿಸ್ ಶಾಲೆ ಕಣ್ಣಿನ ದ್ರಷ್ಟಿದೋಷ ವಿರುವ ವಿದ್ಯಾರ್ಥಿಗಳಿಗೆ ಉಚಿತ ಕನ್ನಡಕಗಳನ್ನು ವಿತರಿಸಲಾಯಿತು.



ಅನುದಾನಿತ ಸ್ಟೆಲ್ಲಾ ಮೇರಿಸ್ ಶಾಲೆ ಬೀರಿಯಲ್ಲಿ ನಡೆದ ಸಭೆಯಲ್ಲಿ ಸಮಾರಂಭದ ಅಧ್ಯಕ್ಷತೆಯನ್ನು ಕ್ಲಬ್ ಅಧ್ಯಕ್ಷ ಲಯನ್ ವಿಜಯನ್ ಕೆ. ವಹಿಸಿದ್ದರು. ಲಯನ್ಸ್ ಜಿಲ್ಲೆ 317ಡಿ ಯ ಹೆಚ್ಚುವರಿ ಸಂಪುಟ ಕಾರ್ಯದರ್ಶಿ ಲಯನ್ ಚಂದ್ರಹಾಸ್ ರೈ ಕನ್ನಡಕ ವಿತರಿಸುವ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಲಯನ್ ಕೆ. ಶಶಿ ಕುಮಾರ್ ನಾಯರ್, ನಾಗರಾಜ್ ಗಟ್ಟಿ, ರಾಘವನ್ ಮೂತಾಲ್, ಫ್ಲೇವಿಯಾ ಡಿ'ಸೋಜಾ, ನಿರ್ಮಿತಾ ಭಂಡಾರಿ ಉಪಸ್ಥಿತರಿದ್ದರು.

ಶಾಲಾ ಮುಖ್ಯೋಪಾಧ್ಯಾಯಿನಿ ಸಿಸ್ಟರ್ ಪ್ರಸಿಲ್ಲಾ ಸ್ವಾಗತಿಸಿದರು ಮತ್ತು ಖಜಾಂಚಿ ಲಯನ್ ನಿತೀಶ್ ಕೃಷ್ಣ ವಂದಿಸಿದರು.

## ತೊಕ್ಕೊಟ್ಟು ಫ್ಲೈಓವರ್ ಬಳಿ ಪ್ರತಿಭಟನೆ; ಸ್ಪೀಕರ್ ರಾಜೀನಾಮೆಗೆ ಆಗ್ರಹ

# ಕರಾವಳಿಗರನ್ನು ಅಪಮಾನಿಸಿದ ಸಚಿವರ ಬೈರತಿ ಸುರೇಶ್ ವಿರುದ್ಧ ಪ್ರತಿಭಟನೆ

**ತೊಕ್ಕೊಟ್ಟು :** ಸಚಿವ ಬೈರತಿ ಸುರೇಶ್ ಅವರು ದಕ್ಷಿಣ ಕನ್ನಡ ಜಿಲ್ಲೆಯ ಮತದಾರರು ಹಾಗೂ ನಾಗರಿಕರಿಗೆ ಅಪಚಾರ ಮಾಡಿದ್ದರು, ಅವರ ನಡೆ ಖಂಡನೀಯವಾಗಿದೆ. ಈ ವಿಚಾರವಾಗಿ ದಕ್ಷಿಣ ಕನ್ನಡ ಜಿಲ್ಲೆಯ ಸ್ಪೀಕರ್ ಯು.ಟಿ. ಖಾದರ್ ಅವರು ಮೂಕಪ್ರೇಕ್ಷಕರಂತೆ ವರ್ತಿಸುತ್ತಿದ್ದು, ಉತ್ತರ ಕರ್ನಾಟಕದ ಕೈಗೊಂಬೆಯಂತೆ ನಡೆದುಕೊಳ್ಳುತ್ತಿದ್ದಾರೆ ಕೂಡಲೇ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಜಿಲ್ಲಾ ಕಾರ್ಯದರ್ಶಿ ಹಾಗೂ ಮಂಡಲ ಪ್ರಭಾರಿ ದಿನೇಶ್ ಅಮ್ಟೂರು ಆಗ್ರಹಿಸಿದರು.

ಇವರು ಕರಾವಳಿಗರನ್ನು 'ಬೆಂಕಿ ಹಚ್ಚುವವರು' ಎಂದು ಅಪಮಾನಿಸಿದ ಕಾಂಗ್ರೆಸ್ ಪಕ್ಷದ ವಿರುದ್ಧ ಬಿಜೆಪಿ ಮಂಗಳೂರು ಮಂಡಲದ ವತಿಯಿಂದ ತೊಕ್ಕೊಟ್ಟು ಫ್ಲೈಓವರ್ ಬಳಿ ನಡೆದ ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡಿದರು.

ಕಳೆದ ಎರಡೂವರೆ ವರ್ಷಗಳಿಂದ ಬಿಜೆಪಿ ನಾಯಕರು, ಹಿಂದೂಪರ ಸಂಘಟನೆಗಳು ಹಾಗೂ ಸಂಘಪರಿವಾರವನ್ನು ಮಟ್ಟ ಹಾಕುವ ಉದ್ದೇಶದಿಂದ ಕಾಂಗ್ರೆಸ್ ಸರಕಾರ ದ್ವೇಷ ಭಾಷಣ ವಿಧೇಯಕವನ್ನು ಬೆಳಗಾವಿ ಚಳಿಗಾಲದ ಅಧಿವೇಶನದಲ್ಲಿ ಮಂಡಿಸಲು ಮುಂದಾಗಿದೆ. ಸಂವಿಧಾನವನ್ನು ಸಮಗ್ರವಾಗಿ ಅಧ್ಯಯನ ಮಾಡದೇ ಆತುರದಲ್ಲಿ ವಿಧೇಯಕ ಮಂಡಿಸಿದರೆ ಉಗ್ರ ಹೋರಾಟ ಎದುರಿಸಬೇಕಾಗುತ್ತದೆ ಎಂದು ಎಚ್ಚರಿಸಿದರು. ಕಿಸೆಯಲ್ಲಿ ಸಂವಿಧಾನದ ಪುಸ್ತಕ ಹಿಡಿದುಕೊಂಡು ನಾವು ಸಂವಿಧಾನ ಪರವಿದ್ದೇವೆ ಎಂದು ಹೇಳುತ್ತಾ ಜನರನ್ನು ಮೂರ್ಖರನ್ನಾಗಿಸುವ ಕೆಲಸ ನಡೆಯುತ್ತಿದೆ ಎಂದು ಟೀಕಿಸಿದರು.ಪೂರ್ಣ ಪ್ರಮಾಣದಲ್ಲಿ ಅಧ್ಯಯನ ನಡೆಸದೆ, ದ್ವೇಷ ಭಾಷಣ ಕಾಯ್ದೆಯನ್ನು ಜಾರಿಗೊಳಿಸುವ ಮೂಲಕ ಸಮಾಜವನ್ನು ವಿಭಜಿಸಿ ಒಟ್ಟಾಗುವ ಪ್ರಯತ್ನ ನಡೆಯುತ್ತಿದೆ ಎಂದು ಆಗ್ರಹಿಸಿದರು.



ಬಿಜೆಪಿ ಮಂಗಳೂರು ಮಂಡಲ ಅಧ್ಯಕ್ಷ ಜಗದೀಶ್ ಆಳ್ವ ಕುವೆತ್ತಬೈಲ್ ಮಾತನಾಡಿ , ತನಗಾದ ಅನ್ಯಾಯವನ್ನು ಸಮಾಜದ ಮುಂದೆ ಇಡುವಂತಿಲ್ಲ ಅನ್ನುವ ಪರಿಸ್ಥಿತಿ ವಿಧೇಯಕ ಮಂಡಿಸುವ ಮೂಲಕ ಕಾಂಗ್ರೆಸ್ ಸರಕಾರ ಜನರನ್ನು ಬಾಯಿ ಮುಚ್ಚಿಸುವುದು ಕಂಡುಬರುತ್ತದೆ. ಅಧ್ಯಯನ ಮಾಡಿ, ಚರ್ಚಿಸಿ ಮಾಡಬೇಕೇ ಹೊರತು ಆತುರದಿಂದ ಹಿಂದೂ ನಾಯಕರು, ಸಂಘಪರಿವಾರವನ್ನು ದಮನಿಸುವ ಉದ್ದೇಶದಿಂದ ಮಾಡುವುದು ಸೂಕ್ತವಲ್ಲ. ಸಚಿವ ಸುರೇಶ್ ಬೈರತಿ ಇಡೀ ದಕ್ಷಿಣ ಕನ್ನಡ ಜಿಲ್ಲೆಯನ್ನೇ ಅಣಕಿಸಿದರೂ, ಜಿಲ್ಲೆಯ ಸ್ಪೀಕರ್ ಮೌನವಿರುವುದು ತಪ್ಪು ಹಾಗೂ ಖಂಡನೀಯ. ಸಚಿವರ ವಿರುದ್ಧ ಕೇವಲ ಬಿಜೆಪಿ ಮಾತ್ರವಲ್ಲ ಇಡೀ ದ.ಕ ಜನತೆ ಒಟ್ಟಾಗಿ ಹೋರಾಡಬೇಕಿದೆ. ಜಿಲ್ಲೆಯಾದ್ಯಂತ ತುಳುನಾಡಿನ ಆರಾಧನೆಗಳ ಕಟ್ಟುಪಾಡುಗಳನ್ನು ವಿರೋಧಿಸುವ ಕಾರ್ಯಗಳು ನಿರಂತರವಾಗಿ ನಡೆಯುತ್ತಿದೆ. ಜೊತೆಗೆ ಯಕ್ಷಗಾನ, ಸಾಂಸ್ಕೃತಿಕ ವಿಚಾರದಲ್ಲಿಯೂ ಧ್ವನಿ ಪೆಟ್ಟಿಗೆಗಳನ್ನು ವಶಕ್ಕೆ ಪಡೆದುಕೊಳ್ಳುವ ಪೊಲೀಸರ ಕ್ರಮದಿಂದಾಗಿ ಕಲಾವಿದರ ಸ್ಥಿತಿಯೂ ಸಂಕಷ್ಟದಲ್ಲಿದೆ. ಸಮುದಾಯವೊಂದು ಗುಪ್ತವಾಗಿ ಹರಡುವ ದ್ವೇಷದ ವಿರುದ್ಧ ಸರಕಾರ ವಿಧೇಯಕವನ್ನು ಮಂಡಿಸುತ್ತಿಲ್ಲ ಎಂದರು.

ಪ್ರತಿಭಟನೆಯಲ್ಲಿ ಪ್ರಧಾನ ಕಾರ್ಯದರ್ಶಿಗಳಾದ ಮೋಹನ್ ರಾಜ್ ಕೆ ಆರ್, ದಯಾನಂದ ತೊಕ್ಕೊಟ್ಟು, ಉಪಾಧ್ಯಕ್ಷರಾದ ರವಿಶಂಕರ್ ಸೋಮೇಶ್ವರ, ಹುಕ್ರಪ್ಪ ನಾಯ್ಕ್, ಸುಮನಾ ಹರೀಶ್ ಶೆಟ್ಟಿ, ಕಾರ್ಯದರ್ಶಿಯಾದ ರಮೇಶ್ ಬೆದ್ರೋಳಿಕೆ, ಕಿಶೋರ್ ಕುತ್ತಾರ್, ರಾಜೇಶ್ ಜಾಲಹಿತ್ಲು, ಕಾರ್ಯಾಲಯ ಕಾರ್ಯದರ್ಶಿ ಸುಜಾತ ಬಿ ಶೆಟ್ಟಿ, ಜಿಲ್ಲಾ ಫಲಾನುಭವಿಗಳ ಪ್ರಕೋಷ್ಠ ಸಂಚಾಲಕರಾದ ಜಯಶ್ರೀ ಕರ್ಕೇರಾ, ಸಹ ಸಂಚಾಲಕರಾದ ಜಿತೇಂದ್ರ ಶೆಟ್ಟಿ, ಪ್ರಮುಖರಾದ ಹೇಮಂತ್ ಶೆಟ್ಟಿ, ಕೋಟೆಕಾರ್ ಮಹಾ ಶಕ್ತಿಕೇಂದ್ರ ಅಧ್ಯಕ್ಷರು ಹಾಗೂ ಪಟ್ಟಣ ಪಂಚಾಯತ್ ಅಧ್ಯಕ್ಷರಾದ ದಿವ್ಯಾ ಶೆಟ್ಟಿ, ಪ್ರಧಾನ ಕಾರ್ಯದರ್ಶಿ ಅತುಲ್ ಬಗಂಬಿಲ, ಉಳ್ಳಾಲ ಮಹಾ ಶಕ್ತಕೇಂದ್ರ ಅಧ್ಯಕ್ಷರಾದ ಸುರೇಂದ್ರ ಶೆಟ್ಟಿ, ಪುದು ಮಹಾ ಶಕ್ತಿಕೇಂದ್ರ ಅಧ್ಯಕ್ಷರಾದ ಸುಕೇಶ್ ಶೆಟ್ಟಿ, ಜಿಲ್ಲಾ ಕಾರ್ಯಕಾರಿಣಿ ಸದಸ್ಯರಾದ ಹರಿಯಪ್ಪ ಸಾಲಿಯಾನ್, ಹರೀಶ್ ಅಂಬ್ಲಮೊಗರು, ಓಬಿಸಿ ಮೋರ್ಚಾ ಮಂಡಲ ಅಧ್ಯಕ್ಷರಾದ ಗಣೇಶ್ ಸುವರ್ಣ ತುಂಬೆ, ಯುವಮೋರ್ಚಾ ಮಂಡಲ ಅಧ್ಯಕ್ಷರಾದ ಮುರಳಿಧರ ಕೋಣಾಜೆ, ಪ್ರಧಾನ ಕಾರ್ಯದರ್ಶಿ ದೀಕ್ಷಿತ್ ಉಳ್ಳಾಲ್ ಬೈಲ್, ರೈತಮೋರ್ಚಾ ಮಂಡಲ್ ಅಧ್ಯಕ್ಷರಾದ ಪದ್ಮನಾಭ ಗಟ್ಟಿ ಕೋಣಾಜೆ, ಎಸ್ಸಿ ಮೋರ್ಚಾ ಮಂಡಲ ಅಧ್ಯಕ್ಷರಾದ ವರುಣ್ ರಾಜ್ ತಲಪಾಡಿ, ಕಾರ್ಯದರ್ಶಿ ವಿನೋದ್ ಚೆಂಬುಗುಡ್ಡೆ, ಹಿರಿಯರ ಪ್ರಕೋಷ್ಠ ಜಿಲ್ಲಾ ಸಂಚಾಲಕರಾದ ದೇವದಾಸ್ ಕೊಲ್ಯ, ಯುವಮೋರ್ಚಾ ಜಿಲ್ಲಾ ಕಾರ್ಯದರ್ಶಿ ನಿಶಾನ್ ಪೂಜಾರಿ, ಓಬಿಸಿ ಮೋರ್ಚಾ ಜಿಲ್ಲಾ ಕಾರ್ಯದರ್ಶಿ ಸಂಪತ್ ಕುಕ್ಯಾನ್ ಬೀರಿ, ಅಲ್ಪಸಂಖ್ಯಾತ ಮೋರ್ಚಾ ಜಿಲ್ಲಾ ಉಪಾಧ್ಯಕ್ಷರಾದ ಸಿದ್ದಿಕ್ ತಲಪಾಡಿ, ಅಸ್ಗರ್ ಮುಡಿಪು, ನಗರಸಭೆ ಮಾಜಿ ಕೌನ್ಸಿಲರ್ ಗೀತಾ ಬಾಯಿ, ಸೋಮೇಶ್ವರ ಪುರಸಭೆ ಸದಸ್ಯರಾದ ಅಮಿತಾ ಪೂಜಾರಿ, ಜಯಶ್ರೀ ಉಚ್ಚಿಲ, ಕೋಟೆಕಾರ್ ಪಟ್ಟಣ ಪಂಚಾಯತ್ ಸದಸ್ಯರಾದ ಅನಿತ ಕುಲಾಲ್, ತಲಪಾಡಿ ಪಂಚಾಯತ್ ಸದಸ್ಯರಾದ ಶೈಲೇಶ್ ಶೆಟ್ಟಿ ತಲಪಾಡಿ, ಸತ್ಯರಾಜ್ ತಲಪಾಡಿ, ಫಲಾನುಭವಿಗಳ ಪ್ರಕೋಷ್ಠ ಮಂಡಲ ಸಂಚಾಲಕರಾಗಿ ಆನಂದ ಶೆಟ್ಟಿ ಭಟ್ನಗರ, ಪಜೀರ್ ಶಕ್ತಿಕೇಂದ್ರ ಪ್ರಮುಖರಾದ ಶಿವ ಕುಮಾರ್ ಅಡಪ್ಪ, ಮಹಿಳಾ ಮೋರ್ಚಾ ಸದಸ್ಯರಾದ ಹೇಮರಾವ್, ವಿಶಾಲ ಶೆಟ್ಟಿ, ಪ್ರಮುಖರಾದ ಗಣೇಶ್ ನಡಾರ್ ಹಾಗೂ ಅನೇಕರು ಭಾಗಿಯಾಗಿದ್ದರು.

## ಉಳ್ಳಾಲ ಘಟಕದ ಕರ್ನಾಟಕ ಜಾನಪದ ಪರಿಷತ್ತು ಅಧ್ಯಕ್ಷರಾಗಿ ಪ್ರವೀಣ್ ಕುಂಪಲ

**ಉಳ್ಳಾಲ,:** ಕರ್ನಾಟಕ ಜಾನಪದ ಪರಿಷತ್ತು ಬೆಂಗಳೂರು, ಇದರ ದಕ್ಷಿಣ ಕನ್ನಡ ಜಿಲ್ಲಾ ಘಟಕದ ಅಧೀನಕ್ಕೊಳಪಟ್ಟ ಉಳ್ಳಾಲ ಘಟಕದ ಅಧ್ಯಕ್ಷರಾಗಿ ಪ್ರವೀಣ್ ಕುಂಪಲ ಅವರನ್ನು ಆಯ್ಕೆ ಮಾಡಲಾಗಿದೆ.ಈ ಬಗ್ಗೆ ದ.ಕ ಜಿಲ್ಲಾ ಜಾನಪದ ಪರಿಷತ್ತಿನ ಅಧ್ಯಕ್ಷರಾದ ಪ್ರವೀಣ್ ಕೊಡಿಯಾಬೈಲ್ ಅವರು ಅಧಿಕೃತವಾಗಿ ಮಾಹಿತಿಯನ್ನು ಹಂಚಿಕೊಂಡಿದ್ದಾರೆ.

ಜಾನಪದ ವಿಷಯಗಳಲ್ಲಿ ಆಸಕ್ತಿ ಹೊಂದಿರುವ ಪ್ರವೀಣ್ ಕುಂಪಲ ಅವರು ಜಿಲ್ಲಾ ಘಟನಕದೊಂದಿಗೆ ಸಕ್ರಿಯವಾಗಿ ತೊಡಗಿಸಿಕೊಳ್ಳಲು ಸನ್ನದ್ದರಾಗಿದ್ದಾರೆ.

ರಾಜ್ಯ ಮತ್ತು ಜಿಲ್ಲಾ ಘಟಕದ ಮಾರ್ಗದರ್ಶನದೊಂದಿಗೆ ಉಳ್ಳಾಲ ಭಾಗದಲ್ಲಿ ಜಾನಪದದೊಂದಿಗೆ ಉಳ್ಳಾಲ ಭಾಗದಲ್ಲಿ ಜಾನಪದ ಸಂಸ್ಕೃತಿಯನ್ನು ಉಳಿಸಿ ಬೆಳೆಸುವ ನಿಟ್ಟಿನಲ್ಲಿ ಅತ್ಯುತ್ತಮ ಕೆಲಸ ನಿರ್ವಹಿಸಬೇಕಾಗುತ್ತದೆ. ಮುಂದಿನ ದಿನಗಳಲ್ಲಿ ಉಳ್ಳಾಲ ಘಟಕದ ವತಿಯಿಂದ ವಿವಿಧ ಜಾನಪದ ಕಾರ್ಯಕ್ರಮಗಳು ಮತ್ತು ಸಾಂಸ್ಕೃತಿಕ ಚಟುವಟಿಕೆಗಳು ಯಶಸ್ವಿಯಾಗಿ ನಡೆಯಲಿವೆ ಎಂಬ ನಿರೀಕ್ಷೆಯಿದೆ.

- **ರಾಜ್ಯ ಮತ್ತು ಜಿಲ್ಲಾ ಘಟಕದ ಮಾರ್ಗದರ್ಶನದೊಂದಿಗೆ ಉಳ್ಳಾಲ ಭಾಗದಲ್ಲಿ ಜಾನಪದದೊಂದಿಗೆ ಉಳ್ಳಾಲ ಭಾಗದಲ್ಲಿ ಜಾನಪದ ಸಂಸ್ಕೃತಿಯನ್ನು ಉಳಿಸಿ ಬೆಳೆಸುವ ನಿಟ್ಟಿನಲ್ಲಿ ಅತ್ಯುತ್ತಮ ಕೆಲಸ ನಿರ್ವಹಿಸಬೇಕಾಗುತ್ತದೆ.**
- **ಮುಂದಿನ ದಿನಗಳಲ್ಲಿ ಉಳ್ಳಾಲ ಘಟಕದ ವತಿಯಿಂದ ವಿವಿಧ ಜಾನಪದ ಕಾರ್ಯಕ್ರಮಗಳು ಮತ್ತು ಸಾಂಸ್ಕೃತಿಕ ಚಟುವಟಿಕೆಗಳು ಯಶಸ್ವಿಯಾಗಿ ನಡೆಯಲಿವೆ**



ಉಳ್ಳಾಲ ಭಾಗದಲ್ಲಿ ಜಾನಪದ ಕಲೆ, ಸಂಸ್ಕೃತಿ ಮತ್ತು ಪರಂಪರೆ ಅಭಿವೃದ್ಧಿಗೆ ಪೂರಕವಾಗಿ ಈ ಆಯ್ಕೆಯನ್ನು ಮಾಡಲಾಗಿದೆ. ಪ್ರವೀಣ್ ಕುಂಪಲ ಅವರ ನೇಮಕಾತಿಯು ಉಳ್ಳಾಲ ಘಟಕದ ವ್ಯಾಪ್ತಿಯಲ್ಲಿ ಜಾನಪದ ಚಟುವಟಿಕೆಗಳಿಗೆ ಹೊಸ ಚೈತನ್ಯ ನೀಡಲಿದ್ದು, ಈ ಭಾಗದ ಕಲೆಗಳ ಅಭಿವೃದ್ಧಿಗೆ ಸಹಕಾರಿಯಾಗಲಿದೆ ಎಂದು ಜಿಲ್ಲಾಧ್ಯಕ್ಷ ಪ್ರವೀಣ್ ಕೊಡಿಯಾಬೈಲ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

## ಜ.2,3,4ರಂದು ಮುಡಿಪುವಿನಲ್ಲಿ ಮಹಾನಾಯಕ ಜೈ ಭೀಮ್ ಟ್ರೋಫಿ–2026; ಪೂರ್ವಭಾವಿ ಸಭೆ

**ಮುಡಿಪು:** 2026ರ ಜ.2,3,4 ರಂದು ಮುಡಿಪುವಿನ ರಾಜೀವ್ ಗಾಂಧಿ ಪಂಚಾಯತ್ ಮೈದಾನದಲ್ಲಿ 8ನೇ ಬಾರಿಯ ರಾಜ್ಯಮಟ್ಟದ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಸಮಾಜಬಾಂಧವರ ಹೊನಲು ಬೆಳಕಿನ ಪ್ರತಿಷ್ಠಿತ ಲೀಗ್ ಕಮ್ ನಾಕೌಟ್ ಮಹಾನಾಯಕ ಜೈ ಭೀಮ್ ಟ್ರೋಫಿ–2026 ಕ್ರಿಕೆಟ್ ಪಂದ್ಯಾಟ ನಡೆಯಲಿದೆ. ಈ ಹಿನ್ನಲೆ ಪಂದ್ಯಾಟದ ಪೂರ್ವಭಾವಿ ಸಭೆ ಮುಡಿಪು ಕುಲಾಲ ಭವನದಲ್ಲಿ ನಡೆಯಿತು.

ವಿಧಾನಸಭಾಧ್ಯಕ್ಷರಾದ ಯು.ಟಿ.ಖಾದರ್ ಫರೀದ್ ಅವರ ನೇತೃತ್ವದಲ್ಲಿ ನಡೆಯಲಿರುವ ಪಂದ್ಯಾಟದ ಪೂರ್ವಭಾವಿ ಸಭೆಯ ಅಧ್ಯಕ್ಷತೆಯನ್ನು ಅಲೈಡ್ ಹೆಲ್ತ್ ಕೇರ್ ಕೌನ್ಸಿಲ್ ಅಧ್ಯಕ್ಷ ಡಾ.ಯು.ಟಿ.ಇಫ್ತಿಕಾರ್ ಆಲಿ ಫರೀದ್ ಅಧ್ಯಕ್ಷತೆಯಲ್ಲಿ ಜರಗಿತು.

ಈ ವೇಳೆ ಇಫ್ತಿಕಾರ್ ಮಾತನಾಡಿ, ಮಹಾನಾಯಕ ಜೈಭೀಮ್ ಕ್ರಿಕೆಟ್ ಪಂದ್ಯಾಟ , ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಸಮುದಾಯ ಬಾಂಧವರಿಗಾಗಿ ರಾಜ್ಯ ಮಟ್ಟದ ಹೊನಲು ಬೆಳಕಿನ ಮೂರು ದಿನದ ಕ್ರಿಕೆಟ್ ಪಂದ್ಯಾಟವನ್ನು ಆಯೋಜಿಸಿರುವುದು ಅತ್ಯಂತ ಸಂತೋಷ. ಸಭಾಧ್ಯಕ್ಷರ ಆಪ್ತ ಸಹಾಯಕರಾದ ಪ್ರವೀಣ್ ಕುಮಾರ್ ಜೆ ಪಿ ಹಾಗೂ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ಸಮಾಜದ ಕ್ರಿಕೆಟ್ ಆಯೋಜಕರಾದ ಜಗದೀಶ್ ಗಂಗೊಳ್ಳಿ ರವರ ಸಾರಥ್ಯದೊಂದಿಗೆ ಅತ್ಯಂತ ವಿಜೃಂಭಣೆಯಿಂದ ನಡೆದು ಯಶಸ್ವಿಯಾಗಲಿ. ಈ ಪಂದ್ಯಾಕೂಟಕ್ಕೆ ತಾವು ಬನ್ನಿ ತಮ್ಮವರನ್ನು ಕರೆತನ್ನಿ, ಮಹಾನಾಯಕ ಜೈಭೀಮ್ ಪಂದ್ಯಾಕೂಟವನ್ನು ಯಶಸ್ವಿಗೊಳಿಸಿರಿ ಎಂದರು.



ಈ ಸಂದರ್ಭದಲ್ಲಿ ಪ್ರವೀಣ್ ಕುಮಾರ್ ಜೆ.ಪಿ, ಜಗದೀಶ್ ಗಂಗೊಳ್ಳಿ, ದಿನೇಶ್ ಮೂಳೂರು, ಸದಾನಂದ ಬಾಳೆಪುಣಿ, ಯಾದವ ಅಸೈಗೋಳಿ, ರೋಹಿತ್ ಉಳ್ಳಾಲ್, ನಾಗೇಶ್ ಕೈರಂಗಳ, ಸಂದೀಪ್ ಯೆನೆಪೋಯ, ರವಿ.ಯೆಸ್.ಗಾಂಧಿನಗರ, ಸುರೇಶ್ ಕೆ.ಸಿ.ರೋಡ್, ಶಶಿಧರ್, ಮಾಧವ ಸುತ್ತಾಡಿ, ಸಂದೀಪ್ ಕೆ.ಸಿ.ರೋಡ್, ಗೌತಮ್ ರಾಜ್, ಶಿವಪ್ರಸಾದ್, ಪೂವಪ್ಪ ಬಾಳೆಪುಣಿ, ವಸಂತ್ ಕುರ್ನಾಡ್, ಹೇಮಂತ್ ಕೆ.ತೆಕ್ಕುಂಜ, ಅಶೋಕ್ ಇರಾ ಪರ್ಲಡ್ಕ, ರವಿ ಪರಿಯಾಲ, ಹೇಮಂತ್ ಕುರ್ನಾಡ್, ಬಾಲಕೃಷ್ಣ, ಮೀನಾಕ್ಷಿ, ಚರಣ್ ಕಿನ್ಯ, ಅಭಿಷೇಕ್ ವಾಲ್ಮೀಕಿ, ಮಹೇಶ್, ಮಂಜುನಾಥ್, ಸಾದಿರ ಅತ್ತಾವರ, ಶೋಭ, ಸತೀಶ್ ಜೆಪ್ಪು, ದಿನೇಶ್ ಕುರ್ನಾಡ್, ರಾಮದಾಸ್ ಕೋಟ್ಯಾನ್, ಭಾಸ್ಕರ್ ನಾರ್ಯ, ಸಂಜೀವ ನಾರ್ಯ, ಭಾಸ್ಕರ್ ಮೂಳೂರು, ಚಂದ್ರಹಾಸ್ ಗುಂಡ್ಯ ಬೋಳಿಯಾರ್, ಯು.ಉಮೇಶ್ ಅಮೀನ್, ಸಂದೀಪ್, ಚಂದನ್, ಅರುಣಾ, ಸಿದ್ದರಾಮೇಶ್ವರ, ಸಂಜಯ್ ಜೆ.ಎಸ್, ಅರುಣ್ ಕುಮಾರ್, ಭರತ್ ರಾಜ್, ಪೃಥ್ವಿರಾಜ್, ವೀಕ್ಷಿತ್, ಪವನ್, ಉಮನಾಥ್ ಕೋಟ್ಯಾನ್ ಉಪಸ್ಥಿತರಿದ್ದರು.

### ಕಣಚೂರು ಮೆಡಿಕಲ್ ಕಾಲೇಜಿನ ಎಂಬಿಬಿಎಸ್‌ನ ಪ್ರಥಮ ವರ್ಷದ ವೈದ್ಯಕೀಯ ವಿದ್ಯಾರ್ಥಿಗಳಿಗೆ ವೈಟ್‌ಕೋಟ್ ವಿತರಣಾ ಸಮಾರಂಭದಲ್ಲಿ ಸಂಸದ ಕ್ಯಾ.ಬ್ರಿಜೇಶ್ ಚೌಟ

# ಭಾರತೀಯ ವೈದ್ಯ ಪರಂಪರೆಯ ಮಹತ್ವ ಅರಿತು ಯುವ ವೈದ್ಯರು ಮುನ್ನಡೆಯಬೇಕಾಗಿದೆ

**ಕಣಚೂರು;** ವೈದ್ಯರನ್ನು ದೇವರ ಸ್ಥಾನದಲ್ಲಿ ನೋಡುವ ಸಂಸ್ಕೃತಿ ಭಾರತೀಯರದ್ದು. ಭಾರತೀಯ ವೈದ್ಯರ ಸಾಮರ್ಥ್ಯ ಹಾಗೂ ವೃತ್ತಿ ನಿಷ್ಠೆ ಬೇರೆ ಯಾವ ದೇಶದಲ್ಲೂ ಕಾಣಲು ಸಾಧ್ಯವಿಲ್ಲ. ಇಂತಹ ಭಾರತೀಯ ವೈದ್ಯ ಪರಂಪರೆಯ ಮಹತ್ವವನ್ನು ಅರಿತುಕೊಂಡು ಆ ಪರಂಪರೆಯನ್ನು ಮುನ್ನಡೆಸಿಕೊಂಡು ಹೋಗುವ ಜವಬ್ದಾರಿ ಇಂದಿನ ಯುವ ವೈದ್ಯರಿಗಿದೆ ಎಂದು ಸಂಸದರಾದ ಕ್ಯಾ.ಬ್ರಿಜೇಶ್ ಚೌಟ ಹೇಳಿದ್ದಾರೆ. ಇವರು ದೇರಳಕಟ್ಟೆಯ ಕಣಚೂರು ಮೆಡಿಕಲ್ ಕಾಲೇಜಿನ ಎಂಬಿಬಿಎಸ್‌ನ ಪ್ರಥಮ ವರ್ಷದ ವೈದ್ಯಕೀಯ ವಿದ್ಯಾರ್ಥಿಗಳಿಗೆ ವೈಟ್‌ಕೋಟ್ ವಿತರಣಾ ಸಮಾರಂಭದಲ್ಲಿ ಮಾತನಾಡಿದರು.

ವೈದ್ಯಕೀಯ ವೃತಿ ಕೇವಲ ವೃತ್ತಿ ಮಾತ್ರವಲ್ಲ ಜನರ ಆರೋಗ್ಯ ಜೀವದ ರಕ್ಷಣೆಯೊಂದಿಗೆ ನಮ್ಮ ಸಮಾಜಕ್ಕೆ ರಾಷ್ಟ್ರಕ್ಕೆ ಅವರ ಕೊಡುಗೆ ಅಪಾರವಾದುದು. ಈ ವೃತ್ತಿ ಬದುಕಿಗೆ ಸ್ಫೂರ್ತಿಯೂ ಹೌದು, ತಪಸ್ಸು ಕೂಡಾ ಆಗಿದೆ ಎಂದರು.

ನರೇಂದ್ರ ಮೋದಿಯವರು ಪ್ರಧಾನಿಯಾದ ಬಳಿಕ ದೇಶದ ಜನರ ವೈದ್ಯಕೀಯ ಕ್ಷೇತ್ರ ಮತ್ತು ಆರೋಗ್ಯ ಸಂರಕ್ಷಣೆಯ ವಲಯಗಳಲ್ಲಿ ಅನೇಕ ಮಹತ್ತರವಾದ ಬದಲಾವಣೆಗಳಾಗಿದೆವೆ. ಆಯುಷ್ಮಾನ್ ಭಾರತ್, ಪ್ರಧಾನಮಂತ್ರಿ ಜನೌಷಧಿ ಯೋಜನೆ, ಇಂದ್ರಧನುಷ್ ಸೇರಿದಂತೆ ಅನೇಕ ಯೋಜನೆಗಳ ಮೂಲಕ ಹೆಲ್ತ್‌ಕೇರ್ ಕ್ಷೇತ್ರದ ಭದ್ರಬುನಾದಿಯನ್ನು ಗಟ್ಟಿಗೊಳಿಸಿದೆ ಎಂದು ಹೇಳಿದರು.

ಮಂಗಳೂರು ದಕ್ಷಿಣ ಕ್ಷೇತ್ರದ ಶಾಸಕರಾದ ವೇದವ್ಯಾಸ್ ಕಾಮತ್ ಅವರು ಅತಿಥಿಯಾಗಿ ಭಾಗವಹಿಸಿ ಮಾತನಾಡಿ, ಇಂತಹ ವೈದ್ಯಕೀಯ ಕಾಲೇಜಿಗೆ ಪ್ರವೇಶ ಪಡೆದ ಬಿಳಿ ಕೋಟ್ ಧರಿಸುವ ಅವಕಾಶ ಹೆಚ್ಚಿನವರಿಗೆ




ಸಿಗುವುದಿಲ್ಲ. ಇದೊಂದು ಜೀವನದ ಭಾಗ್ಯ ಮತ್ತು ಜೀವನದ ಸುವರ್ಣಾವಕಾಶವಾಗಿದೆ. ಪದವಿ ಗಳಿಸಿದ ಬಳಿಕ ಈ ವೃತ್ತಿಗೆ ಸಿಗುವ ಗೌರವಯುತ ಸ್ಥಾನ ಬಹಳ ವಿಶೇಷವಾದುದು ಎಂದರು.

ಕಣಚೂರು ಶಿಕ್ಷಣ ಸಮೂಹ ಸಂಸ್ಥೆಯ ಅಧ್ಯಕ್ಷರಾದ ಡಾ.ಯು.ಕೆ.ಮೋನು ಅವರು ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿ, ವೈಟ್ ಕೋಟ್ ಪಡೆದ ವಿದ್ಯಾರ್ಥಿಗಳು ಮುಂದೆ ಪದವಿಯೊಂದಿಗೆ ಸಮಾಜದಲ್ಲಿ ಮೇಲ್ಪಂಕ್ತಿಯ ಸ್ಥಾನದಲ್ಲಿ ಗುರುತಿಸಲಿದ್ದೀರಿ. ಅವಕಾಶಗಳ ಸ್ಥಳಕೆ ಮಾಡಿಕೊಂಡು ಸಮಾಜಕ್ಕೆ ಕೊಡುಗೆ ನೀಡುವಂತಾಗಬೇಕು ಎಂದರು.

> “ನರೇಂದ್ರ ಮೋದಿಯವರು ಪ್ರಧಾನಿಯಾದ ಬಳಿಕ ದೇಶದ ಜನರ ವೈದ್ಯಕೀಯ ಕ್ಷೇತ್ರ ಮತ್ತು ಆರೋಗ್ಯ ಸಂರಕ್ಷಣೆಯ ವಲಯಗಳಲ್ಲಿ ಅನೇಕ ಮಹತ್ತರವಾದ ಬದಲಾವಣೆಗಳಾಗಿದೆವೆ. ಆಯುಷ್ಮಾನ್ ಭಾರತ್, ಪ್ರಧಾನಮಂತ್ರಿ ಜನೌಷಧಿ ಯೋಜನೆ, ಇಂದ್ರಧನುಷ್ ಸೇರಿದಂತೆ ಅನೇಕ ಯೋಜನೆಗಳ ಮೂಲಕ ಹೆಲ್ತ್‌ಕೇರ್ ಕ್ಷೇತ್ರದ ಭದ್ರಬುನಾದಿಯನ್ನು ಗಟ್ಟಿಗೊಳಿಸಿದೆ.
> ■ ಕ್ಯಾ.ಬ್ರಿಜೇಶ್ ಚೌಟ, ಸಂಸದ

ಕಾರ್ಯಕ್ರಮದಲ್ಲಿ ದ.ಕ.ಜಿಲ್ಲಾ ಬಿಜೆಪಿ ಅಧ್ಯಕ್ಷರಾದ ಸತೀಶ್ ಕುಂಪಲ, ಸಲಹಾ ಸಮಿತಿ ಸದಸ್ಯ ವೈದ್ಯರಾದ ಡಾ.ಎಂ.ಬಿ ಪ್ರಭು, ಕಣಚೂರು ಮೆಡಿಕಲ್ ಕಾಲೇಜಿನ ಸಲಹಾ ಸಮಿತಿ ಅಧ್ಯಕ್ಷರಾದ ಡಾ.ಇಸ್ಮಾಯಿಲ್ ಹೆಜಮಾಡಿ, ಡೀನ್ ಡಾ.ಶಾನವಾಝ್ ಮನ್ನಿಪ್ಪಾಡಿ, ಮೆಡಿಕಲ್ ಸುಪರಿಡೆಂಟ್ ಡಾ.ಅಂಜನ್ ಕುಮಾರ್, ಅಡ್ಮಿನಿಸ್ಟ್ರೇಷನ್ ಮೆಡಿಕಲ್ ಆಫೀಸರ್ ಡಾ.ರೋಹನ್ ರೋನಿಸ್ ಮೊದಲಾದವರು ಉಪಸ್ಥಿತರಿದ್ದರು.

ಆಡಳಿತ ನಿರ್ದೇಶಕರಾದ ಅಬ್ದುಲ್ ರಹಿಮಾನ್ ಅವರು ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತುಗಳನ್ನಾಡಿದರು. ಡಾ.ರೋಶನ್ ಧನ್ಯವಾದವಿತ್ತರು. ಡಾ.ಹ್ಯಾನಿಯಲ್ ಮತ್ತು ಡಾ.ಮಮತಾ ಕಾರ್ಯಕ್ರಮ ನಿರೂಪಿಸಿದರು.

### ದೇರಳಕಟ್ಟೆ ಚಿತ್ರಣವನ್ನೇ ಬದಲಿಸಿದ ದೂರದೃಷ್ಟಿಯ ವಿನಯ್ ಹೆಗ್ಡೆ

# ವಿನಯವಂತ ನಾಯಕನಿಗೆ ಭಾವಪೂರ್ಣ ವಿದಾಯ

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಶೈಕ್ಷಣಿಕ ಮತ್ತು ಕೈಗಾರಿಕಾ ಕ್ರಾಂತಿ ನಡೆಸಿದ ನಿಟ್ಟೆ ಡೀಮ್ಡ್ ಯೂನಿವರ್ಸಿಟಿಯ ಕುಲಾಧಿಪತಿ ಡಾ.ಎನ್.ವಿನಯ ಹೆಗ್ಡೆ ಅವರು ಹೃದಯಾಘಾತದಿಂದ ಮಂಗಳೂರಿನ ಕದ್ರಿ ಶಿವಬಾಗ್‌ನಲ್ಲಿರುವ ಸ್ವ ಗೃಹದಲ್ಲಿ ನಿಧನ ಹೊಂದಿದರು. ಅವರಿಗೆ 86 ವರ್ಷ ವಯಸ್ಸಾಗಿತ್ತು. ಮೃತರು ಪತ್ನಿ, ಪುತ್ರ ಮತ್ತು ಪುತ್ರಿಯನ್ನು ಅಗಲಿದ್ದಾರೆ.

ಸುಪ್ರೀಂ ಕೋರ್ಟ್ ಮಾಜಿ ನ್ಯಾಯಮೂರ್ತಿ ಹಾಗೂ ಲೋಕ ಸಭೆಯ ಮಾಜಿ ಸ್ಪೀಕರ್ ಆಗಿದ್ದ ದಿವಂಗತ ಜಸ್ಟಿಸ್ ಕೆ.ಎಸ್. ಹೆಗ್ಡೆ ಅವರ ಎರಡನೇ ಪುತ್ರರಾಗಿದ್ದ ಎನ್. ವಿನಯ ಹೆಗ್ಡೆ ಅವರು ರಾಜ್ಯದ ಪ್ರಮುಖ ಶಿಕ್ಷಣ ತಜ್ಞ, ಉದ್ಯಮಿ ಹಾಗೂ ಸಮಾಜ ಸೇವಕರಾಗಿ ಗುರುತಿಸಿಕೊಂಡಿದ್ದಾರೆ.

ಮಂಗಳೂರಿನ ಸೈಂಟ್ ಅಲೋಶಿಯಸ್ ಕಾಲೇಜಿನಲ್ಲಿ ತಮ್ಮ ಶಿಕ್ಷಣ ಪೂರೈಸಿದ ಅವರು ತಮ್ಮ ತಂದೆಯವರ ಆಶಯದಂತೆ 1979ರಲ್ಲಿ ನಿಟ್ಟೆ ಎಜುಕೇಶನ್ ಟ್ರಸ್ಟ್ ಸ್ಥಾಪಿಸಿದರು. ಇಂದು ನಿಟ್ಟೆ ಶಿಕ್ಷಣ ಸಂಸ್ಥೆಗಳು ಮಂಗಳೂರು, ಬೆಂಗಳೂರು ಮತ್ತು ನಿಟ್ಟೆಯಲ್ಲಿ 40ಕ್ಕೂ ಹೆಚ್ಚು ವಿದ್ಯಾಸಂಸ್ಥೆಗಳನ್ನು ಹೊಂದಿವೆ. ಇದರಲ್ಲಿ ವೈದ್ಯಕೀಯ, ಎಂಜಿನಿಯರಿಂಗ್, ದಂತ ವೈದ್ಯಕೀಯ, ಫಾರ್ಮಸಿ ಮತ್ತು ಮ್ಯಾನೇಜ್‌ಮೆಂಟ್ ಕಾಲೇಜುಗಳು ಸೇರಿವೆ. ಪ್ರಸ್ತುತ ಅವರು ಮಂಗಳೂರಿನ ನಿಟ್ಟೆ ಪರಿಗಣಿತ ವಿಶ್ವವಿದ್ಯಾಲಯದ ಕುಲಪತಿಯಾಗಿದ್ದರು. ಲೆಮಿನಾ ಸಸ್ಪೆನ್ಷನ್ ಪ್ರೈವೆಟ್ ಲಿಮಿಟೆಡ್ ಸೇರಿದಂತೆ ಲೆಮಿನಾ ಸಮೂಹ ಸಂಸ್ಥೆಗಳ ಸ್ಥಾಪಕ ಅಧ್ಯಕ್ಷರಾಗಿದ್ದರು. ಈ ಸಂಸ್ಥೆಯು ಆಟೋಮೊಬೈಲ್ ಬಿಡಿಭಾಗಗಳ ತಯಾರಿ-ಕೆಯ ಪ್ರಮುಖ ಸಂಸ್ಥೆಯಾಗಿದೆ.

ರಾಜ್ಯದ ಹಲವು ಸಮಿತಿಗಳಲ್ಲಿ ಮತ್ತು ಕೈಗಾರಿಕಾ ಒಕ್ಕೂಟಗಳಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ. ಹಲವು ಸಾಮಾಜಿಕ ಮತ್ತು ಸಾಂಸ್ಕೃತಿಕ ಸಂಘಟನೆಗಳಲ್ಲಿ ಸಕ್ರಿಯರಾಗಿದ್ದರು. ಶಿಕ್ಷಣ ಮತ್ತು ಸಮಾಜ ಸೇವೆಗಾಗಿ ಅವರಿಗೆ ಕರ್ನಾಟಕ ಸರಕಾರದಿಂದ ರಾಜ್ಯೋತ್ಸವ ಪ್ರಶಸ್ತಿ ಮಂಗಳೂರು ವಿಶ್ವವಿದ್ಯಾನಿಲಯದ ಗೌರವ ಡಾಕ್ಟರೇಟ್ ಪದವಿ ಲಭಿಸಿದೆ. ಕರಾವಳಿ ಕರ್ನಾಟಕದ ಶೈಕ್ಷಣಿಕ ಮತ್ತು ಕೈಗಾರಿಕಾ ಕ್ರಾಂತಿಯಲ್ಲಿ ಪ್ರಮುಖ ಪಾತ್ರ ವಹಿಸಿದ್ದ ದೂರದೃಷ್ಟಿಯ ನಾಯಕರಾಗಿದ್ದರು.



### ದೇರಳಕಟ್ಟೆಯ ಚಿತ್ರಣವನ್ನೇ ಬದಲಿಸಿದ ದೂರದೃಷ್ಟಿಯ ಡಾ. ವಿನಯ್ ಹೆಗ್ಡೆ

ದೇರಳಕಟ್ಟೆ ಎಂದರೆ ಒಂದು ಕಾಲದಲ್ಲಿ ಶಾಂತ ಗ್ರಾಮೀಣ ಪ್ರದೇಶ. ಆದರೆ ಇಂದು ಅದು ವೈದ್ಯಕೀಯ, ಶಿಕ್ಷಣ ಹಾಗೂ ಆರೋಗ್ಯ ಸೇವೆಗಳ ಪ್ರಮುಖ ಕೇಂದ್ರವಾಗಿ ಗುರುತಿಸಿಕೊಳ್ಳುತ್ತಿದೆ. ಈ ರೂಪಾಂತರದ ಹಿಂದೆ ನಿಂತಿರುವ ಹೆಸರು ಒಂದೇ ದೂರದೃಷ್ಟಿಯ, ವಿನಯವಂತ ನಾಯಕ ಡಾ. ವಿನಯ್ ಹೆಗ್ಡೆ.

ಸ್ವಂತ ಸಾಧನೆಗಳನ್ನು ಮೆರೆಯದ, ಆದರೆ ತಮ್ಮ ಕಾರ್ಯಗಳ ಮೂಲಕ ಇಡೀ ಪ್ರದೇಶದ ಬದುಕನ್ನೇ ಬದಲಿಸಿದ ಅಪರೂಪದ ವ್ಯಕ್ತಿತ್ವ ಡಾ. ವಿನಯ್ ಹೆಗ್ಡೆ. ಅವರ ದೃಷ್ಟಿ ಕೇವಲ ಕಟ್ಟಡಗಳ ನಿರ್ಮಾಣಕ್ಕೆ ಸೀಮಿತವಾಗಿರಲಿಲ್ಲ; ಅದು ಮಾನವೀಯತೆ, ಸೇವಾಭಾವ ಮತ್ತು ಸಾಮಾಜಿಕ ಹೊಣೆಗಾರಿಕೆಯೊಂದಿಗೆ ಬೆಸೆದುಕೊಂಡ ಅಭಿವೃದ್ಧಿಯ ಕನಸಾಗಿತ್ತು.

ವೈದ್ಯಕೀಯ ಶಿಕ್ಷಣ, ಸುಧಾರಿತ ಆಸ್ಪತ್ರೆಗಳು, ಸಂಶೋಧನೆ ಹಾಗೂ ಉದ್ಯೋಗಾವಕಾಶಗಳ ಮೂಲಕ ಸಾವಿರಾರು ಕುಟುಂಬಗಳಿಗೆ ಆಶಾಕಿರಣವಾಗಿ ಪರಿಣಮಿಸಿದವರು ಡಾ. ವಿನಯ್ ಹೆಗ್ಡೆ. ಗ್ರಾಮೀಣ ಭಾಗದ ಜನರು ಉತ್ತಮ ಆರೋಗ್ಯ ಸೇವೆಗಾಗಿ ದೂರದ ಊರುಗಳಿಗೆ ತೆರಳಬೇಕಾಗಿಲ್ಲ ಎಂಬ ಕನಸನ್ನು ಅವರು ಸಾಕಾರಗೊಳಿಸಿದರು. ದೇರಳಕಟ್ಟೆಯನ್ನು ಕೇವಲ ಒಂದು ಸ್ಥಳವಲ್ಲ, ಒಂದು ಆರೋಗ್ಯ ಹಬ್ಬವಾಗಿ ರೂಪಿಸಿದ ಶ್ರೇಯಸ್ಸು ಅವರದೇ.

ಅಧಿಕಾರ ಅಥವಾ ಸ್ಥಾನಮಾನವನ್ನು ಎಂದಿಗೂ ಅಹಂಕಾರವಾಗಿ ಪರಿಗಣಿಸದ ಅವರು, ಎಲ್ಲರೊಂದಿಗೆ ಸಮಾನವಾಗಿ ಮಾತನಾಡುವ ವಿನಯಶೀಲ ಸ್ವಭಾವದಿಂದಲೇ ಜನಮನ ಗೆದ್ದಿದ್ದರು. ವಿದ್ಯಾರ್ಥಿಗಳು, ವೈದ್ಯರು, ಸಿಬ್ಬಂದಿ, ಗ್ರಾಮಸ್ಥರು ಎಲ್ಲರಿಗೂ ಅವರು ತಮ್ಮವರೇ ಆಗಿದ್ದರು. ಅವರ ಸರಳತೆ ಮತ್ತು ಶಾಂತ ನಾಯಕತ್ವ ಇಂದಿನ ಯುಗಕ್ಕೆ ಅಪರೂಪದ ಮಾದರಿಯಾಗಿದೆ.

ಇಂದು ಡಾ. ವಿನಯ್ ಹೆಗ್ಡೆಯ ಅಗಲಿಕೆ ದೇರಳಕಟ್ಟೆಗೆ ಮಾತ್ರವಲ್ಲ, ಇಡೀ ಜಿಲ್ಲೆಯ ಸಾಮಾಜಿಕ ಹಾಗೂ ವೈದ್ಯಕೀಯ ಕ್ಷೇತ್ರಕ್ಕೆ ತುಂಬಲಾರದ ನಷ್ಟವಾಗಿದೆ. ಆದರೆ ಅವರು ಬಿತ್ತಿದ ಮೌಲ್ಯಗಳು, ನಿರ್ಮಿಸಿದ ಸಂಸ್ಥೆಗಳು ಮತ್ತು ಸ್ಪರ್ಶಿಸಿದ ಅನೇಕ ಜೀವಗಳು ಅವರ ಸ್ಮರಣೆಯನ್ನು ಶಾಶ್ವತವಾಗಿರಿಸುತ್ತವೆ. ವ್ಯಕ್ತಿ ಹೊರಟುಹೋದರೂ, ಅವರ ದೃಷ್ಟಿ ಉಳಿಯುತ್ತದೆ. ದೇಹ ಇಲ್ಲದಿದ್ದರೂ, ಅವರ ಸೇವಾಭಾವ ಜೀವಂತವಾಗಿರುತ್ತದೆ.

### ಜನವರಿ 12ರಂದು ಮರಕಡ ಶ್ರೀ

# ಮಹಾ ಆರಾಧನೆ



**ಮಡ್ಯಾರು:** ಜನವರಿ 12ರಂದು ಶ್ರೀ ಪರಾಶಕ್ತಿ ಕ್ಷೇತ್ರದಲ್ಲಿ ಮಹಾ ಆರಾಧನೆ ಮರಕಡ ಶ್ರೀ ಗುರುಪರಾಶಕ್ತಿ ಮಠದ ಆಶ್ರಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಮಡ್ಯಾರು ಶ್ರೀ ಪರಾಶಕ್ತಿ ಕ್ಷೇತ್ರದಲ್ಲಿ ಪರಮಪೂಜ್ಯ ಶ್ರೀ ಶ್ರೀ ನರೇಂದ್ರನಾಥ ಯೋಗೇಶ್ವರೇಶ್ವರ ಮಹಾಸ್ವಾಮಿಯವರ ದಿವ್ಯ ಸಾನಿಧ್ಯದಲ್ಲಿ ಮಹಾ ಆರಾಧನೆ ಕಾರ್ಯಕ್ರಮವನ್ನು ದಿನಾಂಕ 12.01.2026, ಸೋಮವಾರ ಭಕ್ತಿಭಾವದಿಂದ ಆಯೋಜಿಸಲಾಗಿದೆ. ಶ್ರೀ ಕ್ಷೇತ್ರ ಮರಕಡದಲ್ಲಿ ಆಶ್ರಿತರ ಬದು-ಕಿಗೆ ಸಾಂತ್ವನ ನೀಡುವ ಅಧಿದೈವತವಾಗಿ, ಕಾಲಗರ್ಭದಲ್ಲಿ ಹುದುಗಿದ್ದ ದೇವಚೈತನ್ಯಗಳ ಪುನರುಜ್ಜೀವನಕ್ಕೆ ಪ್ರೇರಕ ಶಕ್ತಿಯಾಗಿ, ಆತ್ಮತತ್ವದ ಮಾರ್ಗದರ್ಶನ ನೀಡುವ ಆಧ್ಯಾತ್ಮಿಕ ಕೇಂದ್ರದ ನಿರ್ಮಾತೃಗಳಾಗಿ ಹಾಗೂ ಸನಾತನ ಧರ್ಮದ ಮೂಲತತ್ವವನ್ನು ಲೋಕಮುಖಕ್ಕೆ ಪರಿಚಯಿಸಿದ ಮಹಾನ್ ಯೋಗಿಯಾಗಿರುವ ಪರಮಪೂಜ್ಯ ಶ್ರೀ ಶ್ರೀ ನರೇಂದ್ರನಾಥ ಯೋಗೇಶ್ವರೇಶ್ವರ ಮಹಾಸ್ವಾಮಿಯವರ ಅನುಗ್ರಹಪೂರ್ಣ ಸಾನಿಧ್ಯ ಈ ಕ್ಷೇತ್ರಕ್ಕೆ ಮಹಿಮೆ ತಂದಿದೆ. ಈ ಹಿನ್ನೆಲೆಯಲ್ಲಿ ಬೆಳಿಗ್ಗೆ 09.00 ಗಂಟೆಯಿಂದ ಪರಮಪೂಜ್ಯರ ಮಹಾ ಆರಾಧನೆ ಹಾಗೂ ಪುಷ್ಪನಮನ ಕಾರ್ಯಕ್ರಮಗಳು ನಡೆಯಲಿದ್ದು, ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವ ನಿರೀಕ್ಷೆಯಿದೆ. ಇದೇ ಸಂದರ್ಭದಲ್ಲಿ ಮಧ್ಯಾಹ್ನ 01.30 ಗಂಟೆಯಿಂದ ನಿರಂತರ ಅನ್ನಸಂತರ್ಪಣೆ ವ್ಯವಸ್ಥೆ ಮಾಡಲಾಗಿದ್ದು, ಎಲ್ಲ ಭಕ್ತಾಧಿಗಳಿಗೆ ಭಾಗವಹಿಸುವಂತೆ ಶ್ರೀ ಗುರುಪರಾಶಕ್ತಿ ಮಠದ ಸಂಸ್ಥಾಪಕರು ಹಾಗೂ ಆಡಳಿತ ಮಂಡಳಿ ಮನವಿ ಮಾಡಿಕೊಂಡಿದ್ದಾರೆ.

ಈ ಪುಣ್ಯಪ್ರದ ಮಹತ್ಕಾರ್ಯದಲ್ಲಿ ಭಕ್ತಸಮೂಹವು ಪಾಲ್ಗೊಂಡು ಪೂಜ್ಯರ ಕೃಪೆಗೆ ಪಾತ್ರರಾಗಬೇಕೆಂದು ಕೋರಲಾಗಿದೆ. ಭಕ್ತ ಸಮೂಹ ಶ್ರೀ ಗುರುಪರಾಶಕ್ತಿ ಮಠ, ಮರಕಡ ಶ್ರೀ ಪರಾಶಕ್ತಿ ಕ್ಷೇತ್ರ, ಮಡ್ಯಾರು ಶ್ರೀ ದೇವರ ಅರಮನೆ, ಕೋಟೆಕಾರು


ಕರ್ನಾಟಕ ಜಾನಪದ ಪರಿಷತ್ತು ಬೆಂಗಳೂರು

## ಹಾರ್ದಿಕ ಅಭಿನಂದನೆಗಳು

ಕರ್ನಾಟಕ ಜಾನಪದ ಪರಿಷತ್ತು, ಬೆಂಗಳೂರು ಇದರ ದಕ್ಷಿಣ ಕನ್ನಡ ಜಿಲ್ಲಾ ಘಟಕದ ಅಧೀನದಲ್ಲಿರುವ ಉಳ್ಳಾಲ ಘಟಕದ ಅಧ್ಯಕ್ಷರಾಗಿ ಆಯ್ಕೆಯಾದ **ಶ್ರೀ ಪ್ರವೀಣ್ ಎಸ್. ಕುಂಪಲ** ಅವರಿಗೆ ಹೃದಯಪೂರ್ವಕ ಅಭಿನಂದನೆಗಳು ಹಾಗೂ ಶುಭಾಶಯಗಳು.

ಜಾನಪದ ಕ್ಷೇತ್ರದಲ್ಲಿ ಅಪಾರ ಆಸಕ್ತಿ, ನಿಷ್ಠೆ ಮತ್ತು ಕಾರ್ಯಶೀಲತೆಯನ್ನು ಹೊಂದಿರುವ **ಶ್ರೀ ಪ್ರವೀಣ್ ಎಸ್. ಕುಂಪಲ** ಅವರು, ದಕ್ಷಿಣ ಕನ್ನಡ ಜಿಲ್ಲಾ ಜಾನಪದ ಪರಿಷತ್ತಿನೊಂದಿಗೆ ಸಕ್ರಿಯವಾಗಿ ತೊಡಗಿಸಿಕೊಂಡು ಉಳ್ಳಾಲ ಭಾಗದಲ್ಲಿ ಜಾನಪದ ಸಂಸ್ಕೃತಿ, ಪರಂಪರೆ ಹಾಗೂ ಮೌಲ್ಯಗಳನ್ನು ಉಳಿಸಿ ಬೆಳೆಸುವಲ್ಲಿ ಮಹತ್ವದ ಪಾತ್ರ ವಹಿಸುವರೆಂಬ ವಿಶ್ವಾಸವಿದೆ.

ರಾಜ್ಯ ಹಾಗೂ ಜಿಲ್ಲಾ ಘಟಕದ ಮಾರ್ಗದರ್ಶನದೊಂದಿಗೆ ಉಳ್ಳಾಲ ಘಟಕದ ವತಿಯಿಂದ ಮುಂದಿನ ದಿನಗಳಲ್ಲಿ ವಿವಿಧ ಜಾನಪದ ಕಾರ್ಯಕ್ರಮಗಳು, ಸಾಂಸ್ಕೃತಿಕ ಚಟುವಟಿಕೆಗಳು ಹಾಗೂ ಜನಪರ ಉಪಕ್ರಮಗಳು ಯಶಸ್ವಿಯಾಗಿ ನಡೆಯಲಿದ್ದು, ಇದರಿಂದ ಉಳ್ಳಾಲ ಭಾಗದ ಜಾನಪದ ಪರಂಪರೆಗೆ ಹೊಸ ಉತ್ಸಾಹ ಹಾಗೂ ಚೈತನ್ಯ ದೊರಕಲಿದೆ ಎಂಬ ನಿರೀಕ್ಷೆಯಿದೆ.

ಈ ಗೌರವಾನ್ವಿತ ಜವಾಬ್ದಾರಿಯನ್ನು ಸ್ವೀಕರಿಸಿರುವ ಶ್ರೀ ಪ್ರವೀಣ್ ಎಸ್. ಕುಂಪಲ ಅವರ ಮುಂದಿನ ಕಾರ್ಯಯಾತ್ರೆ ಯಶಸ್ವಿಯಾಗಲಿ ಎಂದು ಹಾರೈಸುತ್ತಾ, ಮತ್ತೊಮ್ಮೆ ಹಾರ್ದಿಕ ಅಭಿನಂದನೆಗಳು.



**ಶ್ರೀ ಪ್ರವೀಣ್ ಎಸ್. ಕುಂಪಲ**

**ಪ್ರವೀಣ್ ಶೆಟ್ಟಿ** ಪಿಲಾರು ಮೇಗಿನಮನೆ
ಸಮಾಜಸೇವಕರು, ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರು

**ಚಂದ್ರಹಾಸ್ ಪಂಡಿತ್ ಹೌಸ್**
ಅಧ್ಯಕ್ಷರು, ಶ್ರೀ ಕ್ಷೇತ್ರ ಕೊಲ್ಯ ಮೂಕಾಂಬಿಕಾ ದೇವಸ್ಥಾನ
ಮ್ಹಾಲಕರು, ಶ್ರೀ ಮೂಕಾಂಬಿಕಾ ಕನ್ಸ್ಟ್ರಕ್ಷನ್ಸ್

**ಗಣೇಶ್ ಅಂಚನ್**
ಸಾಯಿ ಪರಿವಾರ್ ಟ್ರಸ್ಟ್ (ರಿ.) ತೊಕ್ಕೊಟ್ಟು

**ಗೀತೇಶ್ ಕುತ್ತಾರು**
ಸಾಯಿ ಪರಿವಾರ್ ಟ್ರಸ್ಟ್ (ರಿ.) ತೊಕ್ಕೊಟ್ಟು

**ಮಟನ್ ರಾಜ**
ಸಾಯಿ ಪರಿವಾರ್ ಟ್ರಸ್ಟ್ (ರಿ.) ತೊಕ್ಕೊಟ್ಟು

**ಪುರುಷೋತ್ತಮ್ ಕಲ್ಲಾಪು**
ಸಾಯಿ ಪರಿವಾರ್ ಟ್ರಸ್ಟ್ (ರಿ.) ತೊಕ್ಕೊಟ್ಟು

**ಗಣೇಶ್ ಪಂಡಿತ್**
ಸಾಯಿ ಪರಿವಾರ್ ಟ್ರಸ್ಟ್ (ರಿ.) ತೊಕ್ಕೊಟ್ಟು

**ರತ್ನಾಕರ್ ಉಳಿಯ**
ಸಾಯಿ ಪರಿವಾರ್ ಟ್ರಸ್ಟ್ (ರಿ.) ತೊಕ್ಕೊಟ್ಟು

**ಅಶೋಕ್ ಉಚ್ಚಿಲ್**
ಸಾಯಿ ಪರಿವಾರ್ ಟ್ರಸ್ಟ್ (ರಿ.) ತೊಕ್ಕೊಟ್ಟು

**ಪ್ರಶಾಂತ್ ಕಾಯಂಗಳ**
ಸಾಯಿ ಪರಿವಾರ್ ಟ್ರಸ್ಟ್ (ರಿ.) ತೊಕ್ಕೊಟ್ಟು

**ಸಂತೋಷ್ ಶೆಟ್ಟಿ ತೋಡ್ಡಲ**
ಬುರ್ದುಗೋಳಿ, ಶ್ರೀ ಗುಳಿಗ ಕೊರಗಜ್ಜ ಉದ್ಭವ ಶಿಲೆ ಆದಿಸ್ಥಳ ಕಲ್ಲಾಪು

**ಸತೀಶ್ ಭಟ್ನಗರ**
ಶ್ರೀ ಜೈ ವೀರ ಮಾರುತಿ ವ್ಯಾಯಾಮ ಶಾಲೆ ತೊಕ್ಕೊಟ್ಟು

**ಹರೀಶ್ ಕೊಟ್ಟಾರಿ**
ಹಿಂದೂ ರುದ್ರಭೂಮಿ ಸಮಿತಿ, ಮುನ್ನೂರು

**ಪ್ರವೀಣ್ ಕೊಲ್ಯ**
ಶ್ರೀ ರಾಮ ಭಜನಾ ಮಂದಿರ ಕೊಲ್ಯ

**ಪುರುಷೋತ್ತಮ್ ಮೇಲಾಂಟ**
ಬುರ್ದುಗೋಳಿ, ಶ್ರೀ ಗುಳಿಗ ಕೊರಗಜ್ಜ ಉದ್ಭವ ಶಿಲೆ ಆದಿಸ್ಥಳ ಕಲ್ಲಾಪು

**ರಜನೀಶ್ ಪಂಡಿತ್ ಹೌಸ್**
ವಿಜಯ ಗೇಮ್ಸ್‌ಟೀಮ್ ಪಂಡಿತ್‌ಹೌಸ್

**ಪ್ರವೀಣ್ ಮೆಸ್ಕಾಂ**
ಸಾಯಿ ಪರಿವಾರ್ ಟ್ರಸ್ಟ್ (ರಿ.) ತೊಕ್ಕೊಟ್ಟು

## 44ನೇ ರಾಜ್ಯಮಟ್ಟದ ಮಾಸ್ಟರ್ ಅಥ್ಲೆಟಿಕ್ ಕ್ರೀಡಾಕೂಟದಲ್ಲಿ ಉಳ್ಳಾಲದ ಅಬ್ದುಲ್ ರಹ್ಮಾನ್‌ಗೆ ಚಿನ್ನದ ಪದಕ

**ಉಳ್ಳಾಲ:** ಕೋಲಾರದ ವಿಶ್ವೇಶ್ವರಯ್ಯ ಸ್ಟೇಡಿಯಂನಲ್ಲಿ ಇತ್ತೀಚೆಗೆ ನಡೆದ 44ನೇ ರಾಜ್ಯಮಟ್ಟದ ಮಾಸ್ಟರ್ ಅಥ್ಲೆಟಿಕ್



ಕ್ರೀಡಾಕೂಟದಲ್ಲಿ ಉಳ್ಳಾಲದ ಅಬ್ದುಲ್ ರಹ್ಮಾನ್ 100 ಮೀಟರ್ ಓಟದಲ್ಲಿ ಚಿನ್ನದ ಪದಕ ಗಳಿಸಿ ರಾಷ್ಟ್ರ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.ರಾಷ್ಟ್ರಮಟ್ಟದ ಕ್ರೀಡಾಕೂಟವು ಕೇರಳದ ತಿರುವನಂತಪುರಂನಲ್ಲಿ ಜನವರಿಯಲ್ಲಿ ನಡೆಯಲಿದೆ. ಇತ್ತೀಚಿಗೆ ತಮಿಳುನಾಡಿನಲ್ಲಿ ನಡೆದ ಏಷ್ಯನ್ ಕ್ರೀಡಾಕೂಟದಲ್ಲಿ ಒಂದು ಚಿನ್ನ, ಒಂದು ಬೆಳ್ಳಿ ಪದಕ ಜಯಿಸಿರುವ ಅಬ್ದುಲ್ ರಹ್ಮಾನ್, ಪ್ರಸಕ್ತ ಕಲ್ಲಾಪು ಪೀಸ್ ಪಬ್ಲಿಕ್ ಸ್ಕೂಲ್ನಲ್ಲಿ ಮಕ್ಕಳಿಗೆ ಫಿಟ್ನೆಸ್ ಟ್ರೈನರ್ ಆಗಿ ಕಾರ್ಯ ನಿರ್ವಹಿಸುತ್ತಿದ್ದಾರೆ.

## ಮೇಲ್ತೆನೆ ಅಧ್ಯಕ್ಷರಾಗಿ ಮಂಗಳೂರು ರಿಯಾಝ್ ಆಯ್ಕೆ

**ದೇರಳಕಟ್ಟೆ:** ಮೇಲ್ತೆನೆ (ಬ್ಯಾರಿ ಎಲ್ತ್‌ಕಾರ್–ಕಲಾವಿದಮಾರೊ ಕೂಟ) ದೇರಳಕಟ್ಟೆ ಇದರ ವಾರ್ಷಿಕ ಸಭೆಯು ಕಾಜೂರಿನ ಖಾಸಗಿ ಹೊಟೇಲಿನಲ್ಲಿ ಗೌರವಾಧ್ಯಕ್ಷ ಆಲಿಕುಂಞ ಪಾರೆ ಅವರ ಅಧ್ಯಕ್ಷತೆಯಲ್ಲಿ ನಡೆಯಿತು. ಅಧ್ಯಕ್ಷ ಇಬ್ರಾಹೀಂ ನಡುಪದವು ಸ್ವಾಗತಿಸಿದರು. ಪ್ರಧಾನ ಕಾರ್ಯದರ್ಶಿ ಹಂಝ ಮಲಾರ್ ವರದಿ ವಾಚಿಸಿ, ಲೆಕ್ಕಪತ್ರ ಮಂಡಿಸಿದರು. ಸಭೆಯಲ್ಲಿ 2026ನೇ ಸಾಲಿನ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು. ಗೌರವಾಧ್ಯಕ್ಷರಾಗಿ



ಆಲಿಕುಂಞ ಪಾರೆ ಪುನರಾಯ್ಕೆಗೊಂಡರು. ಅಧ್ಯಕ್ಷರಾಗಿ ಮಂಗಳೂರು ರಿಯಾಝ್, ಪ್ರಧಾನ ಕಾರ್ಯದರ್ಶಿಯಾಗಿ ಹಂಝ ಮಲಾರ್, ಉಪಾಧ್ಯಕ್ಷರಾಗಿ ಇಬ್ರಾಹಿಂ ಮುದುಂಗಾರುಕಟ್ಟೆ, ಜೊತೆ ಕಾರ್ಯದರ್ಶಿಯಾಗಿ ಸಿ.ಎಂ ಶರೀಫ್ ಪಟ್ಟೋರಿ, ಕೋಶಾಧಿಕಾರಿಯಾಗಿ ವಿ. ಇಬ್ರಾಹೀಂ ನಡುಪದವು ಆಯ್ಕೆಯಾದರು. ಸದಸ್ಯರಾಗಿ ಟಿ. ಇಸ್ಮಾಯಿಲ್ ಮಾಸ್ಟರ್, ಯೂಸುಫ್ ವಕ್ತಾರ್, ಬಶೀರ್ ಅಹ್ಮದ್ ಕಿನ್ಯ, ಮುಹಮ್ಮದ್ ಬಾಷಾ ನಾಟೆಕಲ್, ಬಶೀರ್ ಕಲ್ಕಟ್ಟ, ಅಶೀರುದ್ದೀನ್ ಸಾರ್ತಬೈಲ್, ಬಿ.ಎಂ. ಕಿನ್ಯ, ಅಬೂಬಕರ್ ಹೂಹಾಕುವ ಕಲ್ಲು, ಮನ್ಸೂರ್ ಅಹ್ಮದ್ ಸಾಮಣಿಗೆ, ಅಶ್ರಫ್ ಡಿ.ಎ. ದೇರ್ಲಕಟ್ಟೆ, ಸಿದ್ದೀಕ್ ಎಸ್. ರಾಝ್, ಆಸೀಫ್ ಬಬ್ಬುಕಟ್ಟೆ, ರಫೀಕ್ ಕಲ್ಕಟ್ಟ, ಹೈದರ್ ಆಲಡ್ಕ ಆಯ್ಕೆಯಾದರು. ಆರು ವರ್ಷದ ಹಿಂದೆ ಆರಂಭಿಸಲಾಗಿದ್ದ ಮೇಲ್ತೆನೆ ಇ–ಪೇಪರ್ ಅನ್ನು ಹಂಝ ಮಲಾರ್ ಮತ್ತು ಬಶೀರ್ ಅಹ್ಮದ್ ಕಿನ್ಯ ಅವರ ಸಂಪಾದಕತ್ವದಲ್ಲಿ ಪುನಃ ಹೊರತರಲು ಸಭೆಯಲ್ಲಿ ನಿರ್ಧರಿಸಲಾಯಿತು ಎಂದು ಪ್ರಕಟನೆ ತಿಳಿಸಿದೆ."

### ನಿಧನ ಸುದ್ದಿ

### ಮೊಯಿದ್ದೀನ್ ಮಂಜನಾಡಿ

**ಮಂಜನಾಡಿ :** ಮಂಜನಾಡಿ ಪಂಚಾಯತ್



ಸದಸ್ಯರಾದ ಬಶೀರ್ ಮಂಜನಾಡಿಯವರ ತಂದೆ ಮೊಯಿದೀನ್ ಇತ್ತೀಚೆಗೆ ನಿಧನ ಹೊಂದಿದರು.

ಮೃತರು ಪತ್ನಿ, ಮೂವರು ಪುತ್ರಿಯರು ಮತ್ತು 3 ಪುತ್ರರು ಹಾಗೂ ಅಪಾರ ಬಂಧು ಮಿತ್ರರನ್ನು ಅಗಲಿದ್ದಾರೆ.

### ಶರೀಫ್ ಎನ್.ಎಸ್

**ನರಿಂಗಾನ:** ಗ್ರಾಮದ ಕೈರಂಗಳ ನಿವಾಸಿ ಶರೀಫ್ ಎನ್.ಎಸ್ (46) ಜ.2 ಮಧ್ಯಾಹ್ನ



ಜುಮಾ ನಮಾಝ್ ಬಳಿಕ ಹೃದಯಾಘಾತದಿಂದ ನಿಧನರಾದರು. ಮೃತರ ಅಂತ್ಯ ಸಂಸ್ಕಾರವು ಇಂದು ರಾತ್ರಿ 10 ಗಂಟೆಗೆ ತೋಟಾಲ್ ಜುಮಾ ಮಸೀದಿಯ ವಠಾರದಲ್ಲಿ ನಡೆಯಲಿದೆ ಎಂದು ಕುಟುಂಬಸ್ಥರು ತಿಳಿಸಿದ್ದಾರೆ.ಮೃತರು ಪತ್ನಿ, ಓರ್ವ ಪುತ್ರ, ಓರ್ವ ಪುತ್ರಿ, ತಂದೆ, ತಾಯಿ ಹಾಗು ಮೂವರು ಸಹೋದರರು, ಇಬ್ಬರು ಸಹೋದರಿಯರ ಸಹಿತ ಅಪಾರ ಬಂದು ಮಿತ್ರರನ್ನು ಅಗಲಿದ್ದಾರೆ.



ಕುಂಪಲದ ಕೇಸರಿ ಸಭಾ ಭವನದಲ್ಲಿ ನಡೆದ ಪಲ್ಸ್ ಪೋಲಿಯೋ ಕಾರ್ಯಕ್ರಮವನ್ನು , ಕೇಸರಿ ಮಿತ್ರ ವೃಂದ ಸೇವಾ ಟ್ರಸ್ಟ್ ನ ಅಧ್ಯಕ್ಷರಾದ ನಿವೃತ್ತ ಸೇನಾನಿ ಸುಧಾಕರ ಕುಂಪಲ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಅಂಗನವಾಡಿ ಕಾರ್ಯಕರ್ತೆ ಹಾಗೂ ಮಾತೃಮಂಡಳಿ ಸದಸ್ಯೆ ಕುಸುಮ ಭರತ್, ಆರೋಗ್ಯ ಇಲಾಖೆ ಸಿಬ್ಬಂದಿ, ಆಶಾ ಕಾರ್ಯಕರ್ತೆಯರು ಉಪಸ್ಥಿತರಿದ್ದರು.

## ಕಲಾಸಕ್ತಿ ಬೆಳೆಸಲು ಪ್ರೌಢ ಶಿಕ್ಷಣ ಅವಧಿ ಸೂಕ್ತ: ತೋನ್ಸೆ ಪುಷ್ಕಳ ಕುಮಾರ್

**ಹರೇಕಳ:** ಮಕ್ಕಳಲ್ಲಿ ಯಾವುದೇ ಸಾಂಸ್ಕೃತಿಕ ಕಲೆಗಳ ಆಸಕ್ತಿ,ಅಧ್ಯಯನ ಬೆಳೆಸಿಕೊಳ್ಳಲು ಪ್ರೌಢ ಶಿಕ್ಷಣ ಅವಧಿಯ ಹರೆಯ ಸೂಕ್ತವಾದದ್ದು ಎಂದು ಸಂಗೀತ ಹಾಗೂ ಸಾಂಸ್ಕೃತಿಕ ರಂಗದ ಹಿರಿಯ ಕಲಾವಿದ ತೋನ್ಸೆ ಪುಷ್ಕಳ ಕುಮಾರ್ ಅಭಿಪ್ರಾಯ ಪಟ್ಟರು. ಇವರು ಹರೇಕಳ ರಾಮಕೃಷ್ಣ ಪ್ರೌಢಶಾಲೆಯಲ್ಲಿ ಶಾಲಾಂತರ್ಗತ ಸಾಂಸ್ಕೃತಿಕ ಸ್ಪರ್ಧಾ ಕಾರ್ಯಕ್ರಮ – ಸಾಂಸ್ಕೃತಿಕ ಸಂಗಮ ವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಶಾಲೆಗಳಲ್ಲಿ ಇಂತಹ ಕಲಿಕೆ ಪ್ರದರ್ಶನಗಳ ವಾತಾವರಣ ನಿರ್ಮಾಣದ ಜೊತೆಗೆ ವಿದ್ಯಾರ್ಥಿಗಳ ಹೆತ್ತವರ ಪ್ರೇರಣೆಯು ಅತಿ ಅಗತ್ಯ, ಎಲ್ಲಾ ವಿದ್ಯಾರ್ಥಿಗಳು ಕೂಡ ಒಂದಲ್ಲ ಒಂದು ಸಾಹಿತ್ಯಾತ್ಮಕ ಅಥವಾ ಸಂಗೀತದ ಚಟುವಟಿಕೆಗಳಲ್ಲಿ ತನ್ನನ್ನು ತಾನು ತೊಡಗಿಸಿಕೊಂಡಾಗ ಸಾಂಸ್ಕೃತಿಕ



ಪ್ರಜ್ಞೆ ಮೂಡುತ್ತದೆ ಎಂದರು ಇದೇ ಸಂದರ್ಭದಲ್ಲಿ ಭಾವಗೀತೆ ಹಾಗೂ ಜನಪದ ಗೀತೆಯ ಭಿನ್ನತೆಯನ್ನು ತಿಳಿಸಿ ಹಾಡಿದರು. ಅಧ್ಯಕ್ಷತೆ ವಹಿಸಿ ಮಾತನಾಡಿದ ಶಾಲಾ ಮುಖ್ಯೋಪಾಧ್ಯಾಯನಿ ಮೋಹಿನಿ ಅವರು ಮಾತನಾಡಿ ಮಾಧ್ಯಮ ಮತ್ತು ಪರಿಸರಗಳಲ್ಲಿ ಕಾಣುವ ಅನೇಕ ಪ್ರತಿಭೆಗಳಿಗೆ ಸಂಬಂಧಪಟ್ಟ ಹಾಗೆ ನಾನೇಕೆ ಹೀಗಾಗಬಾರದು ಎಂಬ ಪ್ರಶ್ನೆ ಮತ್ತು ಪ್ರಯತ್ನ ಎಲ್ಲ ವಿದ್ಯಾರ್ಥಿಗಳಲ್ಲಿ ಮೂಡಿದಾಗ ಮಾತ್ರ ಸಾಧನೆ ಸಾಧ್ಯ ಎಂದರು. ಈ ಸಂದರ್ಭದಲ್ಲಿ ತಾಲೂಕು ಮಟ್ಟದ ಪ್ರತಿಭಾ ಕಾರಂಜಿಯಲ್ಲಿ ವಿಜೇತರಾದ ವಿದ್ಯಾರ್ಥಿಗಳನ್ನು ಗೌರವಿಸಲಾಯಿತು . ವೇದಿಕೆಯಲ್ಲಿ ಶಿಕ್ಷಕರುಗಳಾದ ಶಿವಕುಮಾರ್, ಸ್ಮಿತಾ, ಸಾಹಿತ್ಯ ಕಲಾ ಸಂಘದ ಅಧ್ಯಕ್ಷರು ಸನತ್ ಆಚಾರ್ಯ, ಶಾಲಾ ನಾಯಕಿ ಫಾತಿಮ ರಫೀದ, ಸಾಂಸ್ಕೃತಿಕ ಮಂತ್ರಿ ಮಾನ್ವಿ ಮುಂತಾದವರು ಉಪಸ್ಥಿತರಿದ್ದರು. ಇದೇ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ನೃತ್ಯ ಸ್ಪರ್ಧೆ, ಸಂಗೀತ ಸ್ಪರ್ಧೆ, ಚಿತ್ರಕಲೆ, ಅಶುಭಾಷಣ, ಕನ್ನಡ ಭಾಷಣ,ಇಂಗ್ಲಿಷ್ ಭಾಷಣ,ಹಿಂದಿ ಭಾಷಣ, ಗಝಲ್ ಸ್ಪರ್ಧೆ,ವಿಜ್ಞಾನ ಮಾದರಿ ಸ್ಪರ್ಧೆ, ರಸ ಪ್ರಶ್ನೆ, ಬೆಂಕಿ ರಹಿತ ಅಡುಗೆ ತಯಾರಿ, ಹೂ ರಂಗೋಲಿ,ಮೆಹಂದಿ, ಅಂದಾಜು ಗ್ರಹಿಸುವಿಕೆ,ಸ್ಮರಣ ಶಕ್ತಿ ಪರೀಕ್ಷೆ,ಕನ್ನಡ ಕೈ ಬರಹ ಸ್ಪರ್ಧೆ, ಇಂಗ್ಲಿಷ್ ಕೈ ಬರಹ ಸ್ಪರ್ಧೆ, ಹಿಂದಿ ಕೈ ಬರಹ ಸ್ಪರ್ಧೆ ,ಕವನ ವಾಚನ,ವಾರ್ತಾ ವಾಚನ , ಛದ್ಮ ವೇಷ ,ಮಿಮಿಕ್ರಿ , ಇಡಿಸೂಡಿ ತಯಾರಿ ಸ್ಪರ್ಧೆ ಮುಂತಾದ ಸ್ಪರ್ಧೆಗಳನ್ನು ಹಮ್ಮಿಕೊಳ್ಳಲಾಗಿತ್ತು. ಶಾಲಾ ಹಿರಿಯ ಶಿಕ್ಷಕರಾದ ರವಿಶಂಕರ್ ಸ್ವಾಗತಿಸಿದರು ದೈಹಿಕ ಶಿಕ್ಷಣ ಶಿಕ್ಷಕರಾದ ತ್ಯಾಗಮ್ ಹರೇಕಳ ಪ್ರಸ್ತಾವನೆಯೊಂದಿಗೆ ನಿರೂಪಿಸಿದರು. ಶಿಕ್ಷಕ ಕೃಷ್ಣಶಾಸ್ತ್ರೀ ಧನ್ಯವಾದ ವಿತ್ತರು

## ಅಫೀಫ ಫ್ರೆಂಡ್ಸ್ ವೆಲ್ಫೇರ್ ಟ್ರಸ್ಟ್(ರಿ) ಉಚ್ಚಿಲ ಇದರ 30ನೇ ವಾರ್ಷಿಕೋತ್ಸವ ಸಂಭ್ರಮ

**ಉಳ್ಳಾಲ:** ಅಫೀಫ ಫ್ರೆಂಡ್ಸ್ ವೆಲ್ಫೇರ್ ಟ್ರಸ್ಟ್(ರಿ)ಉಚ್ಚಿಲ ಇದರ 30ನೇ ವಾರ್ಷಿಕೋತ್ಸವ ಕಾರ್ಯಕ್ರಮ ಉಚ್ಚಿಲ ಕಿಯಾಂಝ ಗಾರ್ಡನ್ ನಡೆಯಿತು.

ಉಚ್ಚಿಲ 407 ಜುಮಾ ಮಸೀದಿಯ ಮುದರ್ರಿಸ್ ಇಬ್ರಾಹಿಂ ಫೈಝಿ ಕಾರ್ಯಕ್ರಮ ಉದ್ಘಾಟಿಸಿದರು.ಈ ಸಂದರ್ಭ ಊರಿನ ಹಿರಿಯರಾದ ಎಂ.ಎಚ್. ಪೋಕರ್ ಕುಂಞ ಹಾಗೂ ಧಾರ್ಮಿಕ ಸ್ಥಾಪನೆಗಳ ಅಭಿವೃದ್ಧಿಯಲ್ಲಿ ಸಕ್ರಿಯರಾದ ಕುಂಞ ಅಹ್ಮದ್ ಹಾಜಿ, ಕನ್ನಡ ರಾಜ್ಯೋತ್ಸವ ಸಂದರ್ಭದ ಜಿಲ್ಲಾ ಪ್ರಶಸ್ತಿ ಪುರಸ್ಕೃತ ಮುಹಮ್ಮದ್ ಅಲಿ ಜಿ.ಎಂ.ಎಚ್ ಉಚ್ಚಿಲ ಅವರನ್ನು ಸನ್ಮಾನಿಸಲಾಯಿತು. ಅಫೀಫ ಫ್ರೆಂಡ್ಸ್ ವೆಲ್ಫೇರ್ ಟ್ರಸ್ಟ್ ಅಧ್ಯಕ್ಷ ಅಬೂಬಕ್ಕರ್ ಸಿದ್ದೀಕ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದರು.

ಈ ಸಂದರ್ಭ ಕಾಲ್ಚೆಂಡು ತಂಡದ ಸಮವಸ್ತ್ರವನ್ನು ಪ್ರಧಾನ ಕಾರ್ಯದರ್ಶಿ ಅಹ್ಮದ್ ಝಿಶಾನ್, ಕೋಶಾಧಿಕಾರಿ ಸಿರಾಜ್ ಕೆ ಉಚ್ಚಿಲ ಬಿಡುಗಡೆಗೊಳಿಸಿದರು. ಹೋಪ್ ಫೌಂಡೇಶನ್ ಸ್ಥಾಪಕ




ಸೈಫ್ ಸುಲ್ತಾನ್ ಪೋಷಣೆ ಮತ್ತು ಪೋಷಕತ್ವ ಇಂದಿನ ಜವಾಬ್ದಾರಿಗಳು ಹಾಗೂ ಸವಾದ್ ಅಲಿ ಮಂಗಳೂರು ಯುವಜನತೆ ಆರೋಗ್ಯಕರ ಜೀವನ ಶೈಲಿ ಮತ್ತು ಸಾಮಾಜಿಕ ಜಾಗೃತಿ ಎಂಬ ವಿಷಯದ ಕುರಿತು ವಿಚಾರ ಮಂಡಿಸಿದರು. ಕ್ರೀಡಯಿಂದ ಸೇವೆಗೆ–ಮೂರು ದಶಕಗಳ ಪಯಣ ಅಫೀಫಾ ಸ್ಮರಣ ಸಂಚಿಕೆಯನ್ನು ಆಫೀಫ ಸಂಘಟನೆ ಸ್ಥಾಪಕ ಮುಹಮ್ಮದ್ ಶಮೀರ್ ಬಿಡುಗಡೆಗೊಳಿಸಿದರು.

ಉಚ್ಚಿಲಗುಡ್ಡೆ ರಹ್ಮಾನಿಯಾ ಇಮಾಮ್ ಅಕ್ಬರ್ ಆಲಿ ಸಅದಿ, ಉಚ್ಚಿಲ 407 ಮಸೀದಿಯ ಅಧ್ಯಕ್ಷ ಇಸ್ಮಾಯಿಲ್ ಹಾಜಿ ಕೊಪ್ಪಳ, ಪೆರಿಬೈಲ್ ಮಸ್ಜಿದುಲ್ ಹುದಾ ಅಧ್ಯಕ್ಷ ಅಬ್ಬಾಸ್ ಹಾಜಿ, ಅಜ್ಜಿನಡ್ಕ ಬದ್ರಿಯ ಜುಮಾ ಮಸೀದಿ ಅಧ್ಯಕ್ಷ ಸುಲೈಮಾನ್ ಹಾಜಿ, ಬೈತುಲ್ಲಾ ಮಸೀದಿಯ ಅಧ್ಯಕ್ಷ ಮೊಹಿದ್ದೀನ್ ಕುಂಞ, ಯು.ಆರ್. ಅಕಾಡಮಿಯ ಪ್ರಚಾರಕ ಉಮೇಶ್ ಉಚ್ಚಿಲ್, ಫಲಾಹ್ ಎಜುಕೇಷನಲ್ ಟ್ರಸ್ಟ್ ಅಧ್ಯಕ್ಷ ಯು.ಬಿ. ಮುಹಮ್ಮದ್ ಹಾಜಿ, ಲೈಫ್‌ಲೈನ್ ಫೌಂಡೇಶನ್ ಅಧ್ಯಕ್ಷ ಅಬ್ಬಾಸ್ ಹಾಜಿ ಪೋಕರ್, ಮುಸ್ಲಿಂ ಬಾಂಧವ್ಯ ವೇದಿಕೆ ಕರ್ನಾಟಕ ರಾಜ್ಯಾಧ್ಯಕ್ಷ ಝಕೀರ್ ಹುಸೈನ್ ಉಚ್ಚಿಲ್, ಅಜ್ಜಿನಡ್ಕ ಬದ್ರಿಯಾ ವೆಲ್ಫೇರ್ ಸೊಸೈಟಿ ಅಧ್ಯಕ್ಷ ಇರ್ಷಾದ್ ಅಜ್ಜಿನಡ್ಕ, ಸೋಮೇಶ್ವರ ಪುರಸಭೆ ಸದಸ್ಯ ಅಬ್ದುಲ್ ಸಲಾಂ ಯು, ಮ್ಯಾಕ್ ಬ್ರದರ್ಸ್ ಅಧ್ಯಕ್ಷ ಹಾರಿಸ್ ಯು.ಎ, ನೂರುಲ್ ಇಸ್ಲಾಮ್ ಅಧ್ಯಕ್ಷ ಇಬ್ರಾಹಿಂ ಹಿಮಮಿ, ಬಿಎಸ್‌ಬಿ ಅಧ್ಯಕ್ಷ ಅನಸ್ ಉಚ್ಚಿಲ, ಬಿಬಿಜಿ ಅಧ್ಯಕ್ಷ ಝುಲ್ಫಾಝ್ ಉಚ್ಚಿಲ ಉಪಸ್ಥಿತರಿದ್ದರು.

ಜೊತೆ ಕಾರ್ಯದರ್ಶಿ ಝೈನುದ್ದೀನ್ ನವಾಝ್ ಪ್ರಾಸ್ತಾವಿಕ ಮಾತುಗಳನ್ನಾಡಿದರು. ವಿದ್ಯಾರ್ಥಿ ಉಮರ್ ಮುಹಮ್ಮದ್ ಫಾಹಿಂ ಪ್ರಾರ್ಥನೆಗೈದರು. ಸದಸ್ಯ ಶಬೀರ್ ಇಸ್ಮಾಯಿಲ್ ಸ್ವಾಗತಿಸಿದರು. ಮಾಧ್ಯಮ ಸಂಚಾಲಕ ಇಬ್ರಾಹಿಂ ಖಲೀಲ್ ಅರೀಫ್ ವಂದಿಸಿದರು. ಅಫೀಫ ಫ್ರೆಂಡ್ಸ್ ವೆಲ್ಫೇರ್ ಟ್ರಸ್ಟ್ ಸದಸ್ಯ ನಾಸೀರ್ ಉಚ್ಚಿಲ ಕಾರ್ಯಕ್ರಮ ನಿರೂಪಿಸಿದರು.

## ಕ್ರಿಸ್ಮಸ್–ಹೊಸ ವರ್ಷದ ಸಂಭ್ರಮಾಚರಣೆ




**ಸೋಮೇಶ್ವರ :** ಲಯನ್ಸ್ ಕ್ಲಬ್ ಸೋಮೇಶ್ವರದ ವತಿಯಿಂದ ಕ್ಲಬ್ ಸದಸ್ಯರು ಹಾಗೂ ಅವರ ಕುಟುಂಬ ಸದಸ್ಯರ ಸಹಬಾಗಿತ್ವದಲ್ಲಿ ಕ್ರಿಸ್ಮಸ್, ಹೊಸ ವರ್ಷದ ಸಂಭ್ರಮವನ್ನು ಆಚರಿಸಲಾಯಿತು.

ಪ್ರೀತಿ, ಏಕತೆ ಮತ್ತು ಸೇವೆಯ ಸಂದೇಶವನ್ನು ಸಾರುವ ಉದ್ದೇಶದಿಂದ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಕಾರ್ಯಕ್ರಮವನ್ನು ಲಯನ್ಸ್ ಜಿಲ್ಲೆ 317ಆ ಯ ಚೀಫ್ ಕೋಆರ್ಡಿನೇಟರ್ (ಕಲ್ಚರಲ್ ಪ್ರೋಗ್ರಾಂ) ಲಯನ್ ರಾಜೇಶ್ ಶೆಟ್ಟಿ ಉದ್ಘಾಟಿಸಿದರು.

ಲಯನ್ ವಿಜಯನ್ ಕೆ. (ಅಧ್ಯಕ್ಷರು) ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಲಯನ್ ಶಶಿಕುಮಾರ್ ನಾಯರ್ ಸ್ವಾಗತ ಭಾಷಣ ಮಾಡಿದರು. ಸಹ ಕಾರ್ಯದರ್ಶಿ ಲಯನ್ ರಾಜಶ್ರೀ ನಾಯರ್ ಕ್ಲಬ್ ವರದಿ ವಾಚಿಸಿದರು. ಖಜಾಂಜಿ ನಿತೀಶ್ ಕೃಷ್ಣ ವಂದಿಸಿದರು.

ಕಾರ್ಯಕ್ರಮದ ಭಾಗವಾಗಿ ವಿವಿಧ ಸಾಂಸ್ಕೃತಿಕ ಹಾಗೂ ಮನರಂಜನಾ ಕಾರ್ಯಕ್ರಮಗಳನ್ನು ಹಾಗೂ ಮಕ್ಕಳಿಗಾಗಿ ವಿಶೇಷ ಆಟೋಟ ಸ್ಪರ್ಧೆಗಳನ್ನು ಏರ್ಪಡಿಸಲಾಗಿತ್ತು. ಸಾಂತಾ ಕ್ಲಾಸ್ ಅವರ ಸಾನ್ನಿಧ್ಯವು ಸಂಭ್ರಮಕ್ಕೆ ಇನ್ನಷ್ಟು ಕಳೆ ತಂದವು. ಸಭಾ ಕಾರ್ಯಕ್ರಮದ ನಂತರ ಕೇಕ್ ಕತ್ತರಿಸಿ ಉಪಹಾರ ವಿತರಣೆಯೊಂದಿಗೆ ಕಾರ್ಯಕ್ರಮ ಸಂಪನ್ನಗೊಂಡಿತು.

## ಬೀರಿ ಜಂಕ್ಷನ್ ಶಾಶ್ವತ ಸಂಚಾರಿ ಪೊಲೀಸ್ ನೇಮಕಾತಿಗೆ ಮನವಿ



**ಕೋಟೆಕಾರು:** ಬೀರಿ ಜಂಕ್ಷನ್, ಕೊಲ್ಯದಲ್ಲಿ ಶಾಶ್ವತವಾಗಿ ಸಂಚಾರಿ ಪೊಲೀಸ್ ಅಧಿಕಾರಿಯನ್ನು ನೇಮಿಸುವಂತೆ ಮಾನ್ಯ ಪೊಲೀಸ್ ಆಯುಕ್ತರಾದ ಸುಧೀರ್ ಕುಮಾರ್ ರೆಡ್ಡಿ ಇವರಿಗೆ ಮನವಿಯನ್ನು ಸಲ್ಲಿಸಲಾಯಿತು.

ಸೋಮೇಶ್ವರ ಪುರಸಭೆ ಮತ್ತು ಕೋಟೆಕಾರ್ ಪಟ್ಟಣ ಪಂಚಾಯತ್ ನ ವ್ಯಾಪ್ತಿಯಲ್ಲಿನ 13 ಕ್ಕೂ ಹೆಚ್ಚು ಸಂಘ ಸಂಸ್ಥೆಗಳ 350 ಕ್ಕೂ ಹೆಚ್ಚು ಜನಗಳ ಸಹಿ ಸಂಗ್ರಹಿಸಿ ಮನವಿ ಸಲ್ಲಿಸಲಾಯಿತು. ಇತ್ತೀಚಿನ ದಿನಗಳಲ್ಲಿ ಬೀರಿಯಲ್ಲಿ ವಾಹನದಟ್ಟಣೆ ಹೆಚ್ಚಿದ್ದು, ಹೆಚ್ಚಿನ ಅಪಘಾತಗಳು ಸಂಭವಿಸುತ್ತಿದ್ದು, ಸಾರ್ವಜನಿಕರಿಗೆ ರಸ್ತೆ ದಾಟುವುದಕ್ಕೂ ಕಷ್ಟಕರವಾಗುತ್ತಿದೆ. ಶಾಲಾ ಕಾಲೇಜುಗಳು, ವಾಣಿಜ್ಯ ಸಂಕೀರ್ಣಗಳು, ಮಳಿಗೆಗಳು, ಬ್ಯಾಂಕ್ ಸೇರಿದಂತೆ ಧಾರ್ಮಿಕ ಕೇಂದ್ರಗಳಿರುವ ಪ್ರದೇಶವಾಗಿರುವ ಬೀರಿಯಲ್ಲಿ ಸಂಚಾರಿ ಪೊಲೀಸ್ ಅಧಿಕಾರಿ ನೇಮಿಸಿದಲ್ಲಿ ಸಾರ್ವಜನಿಕರಿಗೆ ಸಹಕಾರಿಯಾಗಬಹುದು.

ಈ ನಿಟ್ಟಿನಲ್ಲಿ ಪೊಲೀಸ್ ಆಯುಕ್ತರನ್ನು ಕೇಳಿಕೊಳ್ಳಲಾಯಿತು. ಈ ಸಂದರ್ಭ ಸೋಮೇಶ್ವರ ಪುರಸಭೆಯ ಉಪಾಧ್ಯಕ್ಷರಾದ ರವಿ ಶಂಕರ್ ಸೋಮೇಶ್ವರ, ಕೋಟೆಕಾರ್ ಪಟ್ಟಣ ಪಂಚಾಯತ್ ಉಪಾಧ್ಯಕ್ಷರಾದ ಪ್ರವೀಣ್ ಬಗಂಬಿಲ, ಶ್ರೀ ಗಣೇಶ ಭಜನಾ ಮಂದಿರ ಬೀರಿ ಇದರ ಗೌರವಾಧ್ಯಕ್ಷರಾದ ನಾರಾಯಣ ಕುಂಪಲ, ಕಾರ್ಯದರ್ಶಿ ಆಶಿಕ್ ಗೋಪಾಲಕೃಷ್ಣ, ಸದಸ್ಯರಾದ ಅಶೋಕ್ ಉಚ್ಚಿಲ್, ಲತೀಶ್ ಉಚ್ಚಿಲ್, ಮಿತೇಶ್ ಮಾಡೂರು, ಹರ್ಷಿತ್ ಸೋಮೇಶ್ವರ, ಮಾಜಿ ಯೋಧರಾದ ಸುಧಾಕರ ಕುಂಪಲ ಮತ್ತು ಜಿ ಎಸ್ ಪ್ರಸಾದ್ ಉಪಸ್ಥಿತರಿದ್ದರು.

## ಆತ್ಮವಿಶ್ವಾಸದೊಂದಿಗೆ ಪರೀಕ್ಷೆ ಎದುರಿಸಿ: ವಿದ್ಯಾರ್ಥಿಗಳಿಗೆ ಕೆ.ಕೆ ಶಾಹುಲ್ ಹಮೀದ್ ಕರೆ

**ಕೊಣಾಜೆ:** ಎಸ್ಸೆಸ್ಸೆಲ್ಸಿ ಪರೀಕ್ಷೆ ಎಂದರೆ ಯುದ್ಧವೂ ಅಲ್ಲ, ಕಬ್ಬಿಣದ ಕಡಲೆಯೂ ಅಲ್ಲ. ಪರಿಶ್ರಮ ಹಾಗೂ ಆತ್ಮವಿಶ್ವಾಸದೊಂದಿಗೆ ಪರೀಕ್ಷೆ ಎದುರಿಸುವ ಚಾಕಚಕ್ಯತೆ ನಮ್ಮದಾಗಬೇಕು. ಪರೀಕ್ಷೆಗಾಗಿ ವ್ರತದಂತೆ ಪೂರ್ವತಯಾರಿ ನಡೆಸಿ, ಉತ್ತಮ ಅಂಕ,ಮೌಲ್ಯಯುತ ಶಿಕ್ಷಣದೊಂದಿಗೆ ಉತ್ತಮ ಭವಿಷ್ಯವನ್ನು ರೂಪಿಸಿ ಎಂದು ದ.ಕ. ಮತ್ತು ಉಡುಪಿ ಜಿಲ್ಲಾ ನಿಕಟಪೂರ್ವ ಜಿಲ್ಲಾಧ್ಯಕ್ಷ ಕೆ.ಕೆ ಶಾಹುಲ್ ಹಮೀದ್ ಹೇಳಿದರು.ಜಮೀಯ್ಯತುಲ್ ಫಲಾಹ್ ಉಳ್ಳಾಲ ತಾಲೂಕು ಘಟಕ ಇದರ ವತಿಯಿಂದ ಕೊಣಾಜೆ ವಿಶ್ವಮಂಗಳ ವಿದ್ಯಾಸಂಸ್ಥೆಯ ಸಹಯೋಗದೊಂದಿಗೆ ನಡೆದ ಉಳ್ಳಾಲ ತಾಲೂಕು ವ್ಯಾಪ್ತಿಯ ಎಸ್ಸೆಸ್ಸೆಲ್ಸಿ ವಿದ್ಯಾರ್ಥಿಗಳಿಗಾಗಿ ಶನಿವಾರ ನಡೆದ \"ಚೈತನ್ಯ ಚಿಲುಮೆ\" ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದರು. ಕ್ಷೇತ್ರ ಪ್ರಭಾರ ಶಿಕ್ಷಣಾಧಿಕಾರಿ ಡಾ.ಪ್ರಶಾಂತ್ ಕುಮಾರ್ ಅವರು ಮಾತನಾಡಿ, ಇದು ಶಿಕ್ಷಣದೊಂದಿಗೆ ಸಾಮಾಜಿಕ ಜವಬ್ದಾರಿ, ಮೌಲ್ಯವನ್ನು ಬೆಳೆಸುವ ಕಾರ್ಯಕ್ರಮವಾಗಿದೆ. ಪರೀಕ್ಷೆಯಲ್ಲಿ ಉತ್ತೀರ್ಣ ಆಗುವುದಕ್ಕಿಂತ ಗುಣಮಟ್ಟವನ್ನು ಹೆಚ್ಚಿಸುವ ಶಿಕ್ಷಣ ಮತ್ತು ಅಂತಹ ಪ್ರಯತ್ನಗಳು ಅಗತ್ಯ ಎಂದರು.



ಜಮೀಯತುಲ್ ಫಲಾಹ್ ಉಳ್ಳಾಲ ತಾಲೂಕು ಘಟಕಾಧ್ಯಕ್ಷ ಅಬ್ದುಲ್ ರಹ್ಮಾನ್ ಕೋಡಿಜಾಲ್ ಅಧ್ಯಕ್ಷತೆ ವಹಿಸಿ ಮಾತನಾಡಿ, ಪರೀಕ್ಷೆಯ ಪೂರ್ವ ತಯಾರಿಯೊಂದಿಗೆ ಜೀವನದ ಪರೀಕ್ಷೆಗೂ ಇಂತಹ ಮಾಹಿತಿ ಕಾರ್ಯಕ್ರಮಗಳು ಪೂರಕವಾಗಿದೆ ಎಂದರು. ಶಿಕ್ಷಕರಾದ ಯಾಕೂಬ್ ಕೊಯ್ಯೂರು ಮತ್ತು ಸಯ್ಯದ್ ಶರೀಫ್ ನಾರಾವಿ ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿದ್ದರು. ಮೂಡದ ಮಾಜಿ ಅಧ್ಯಕ್ಷ ಇಬ್ರಾಹಿಂ ಕೋಡಿಜಾಲ್, ವಿಶ್ವಮಂಗಳ ಸಂಸ್ಥೆಯ ಅಧ್ಯಕ್ಷ ಡಾ.ಜಗದೀಶ್ ಪ್ರಸಾದ್, ಮಂಗಳೂರು ವಿವಿ ಸಿಂಡಿಕೇಟ್ ಸದಸ್ಯ ಅಚ್ಯುತ ಗಟ್ಟಿ, ಮಾಜಿ ಒಂಬುಡ್ಸ್ ಮೆನ್ ಶೀನ ಶೆಟ್ಟಿ, ಜನಶಿಕ್ಷಣ ಟ್ರಸ್ಟ್ ನಿರ್ದೇಶಕ ಕೃಷ್ಣ ಮೂಲ್ಯ, ಬಂಟ್ವಾಳ ತಾಲೂಕು ಅಧ್ಯಕ್ಷ ಅಬ್ಬಾಸ್ ಅಲಿ, ದ.ಕ. ಮತ್ತು ಉಡುಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಹನೀಫ್ ಮಾಸ್ಟರ್, ಕೊಣಾಜೆ ಗ್ರಾ.ಪಂ. ಮಾಜಿ ಉಪಾಧ್ಯಕ್ಷ ತಾಜುದ್ದೀನ್, ಪ್ರಧಾನ ಕಾರ್ಯದರ್ಶಿ ಡಾ.ಗೋವಿಂದ ರಾಜ್, ಕೋಶಾಧಿಕಾರಿ ಸುಬ್ಬ ನಾಯಕ್, ಶಿಕ್ಷಕ–ರಕ್ಷಕ ಅಧ್ಯಕ್ಷ ರಾಜೀವ ನಾಯ್ಕ್, ಜಮೀಯತುಲ್ ಫಲಾಹ್ ತಾಲೂಕು ಕೋಶಾಧಿಕಾರಿ ಇಬ್ರಾಹಿಂ ನಡುಪದವು ಮೊದಲಾದವರು ಉಪಸ್ಥಿತರಿದ್ದರು. ಉಪಾಧ್ಯಕ್ಷರಾದ ಎ ಕೆ ಅಬ್ದುಲ್ ರಹ್ಮಾನ್ ಕೊಡಿಜಾಲ್, ಜೊತೆ ಕಾರ್ಯದರ್ಶಿ ನಾಸೀರ್ ಸಾಮಣಿಗೆ, ಮಹಮ್ಮದ್ ಮುಸ್ತಫಾ, ಮಿಫ್ತಾಬ್ ಸಲಾಂ ಹಸನ್ ಕುಂಞ ಕೋಡಿಜಾಲ್, ಇಕ್ಬಾಲ್ ಸಾಮಣಿಗೆ, ಅಮೀರ್ ಕೋಡಿಜಾಲ್, ಶರೀಫ್ ಪಟ್ಟೋರಿ ಹಾಗೂ ಇನ್ನಿತರ ಸದಸ್ಯರು ಹಾಜರಿದ್ದರು.ಅಬ್ದುಲ್ ನಾಸೀರ್ ಕೆಕೆ ಸ್ವಾಗತಿಸಿದರು. ಅಹಮದ್ ಕುಂಞ ಮಾಸ್ಟರ್ ವಂದಿಸಿದರು. ಉಪಾಧ್ಯಕ್ಷ ಕೆ–ಎಂಕೆ ಮಂಜನಾಡಿ ನಿರೂಪಿಸಿದರು.

### ಮಂಗಳೂರು ದಕ್ಷಿಣ ತಾಲೂಕು ಮಟ್ಟದ ಪ್ರಾರಂಭಿಕ ತರಬೇತಿ ಶಿಬಿರ ಹಾಗೂ ಪುನಶ್ಚೇತನ ತರಬೇತಿ ಶಿಬಿರವನ್ನು ಉದ್ಘಾಟಿಸಿ ಅನಿಲ್ ದಾಸ್

## ವಿದ್ಯಾರ್ಥಿಗಳಲ್ಲಿ ಶಿಸ್ತು, ಸೇವಾ ಮನೋಭಾವ, ದೇಶ ಪ್ರೇಮ ರೂಪಿಸುವಲ್ಲಿ ಸ್ಕೌಟ್‌ಗೈಡ್ ಪೂರಕ

**ಹರೇಕಳ:** ಸ್ಕೌಟ್ಸ್ ಗೈಡ್ಸ್ ಶಿಕ್ಷಣದಿಂದ ವಿದ್ಯಾರ್ಥಿಗಳು ಉತ್ತಮ ಪ್ರಜೆಗಳಾಗಿ ಮೂಡಿ ಬರಲು ಸಾಧ್ಯ. ಮಕ್ಕಳು ಎಳವೆಯಲ್ಲೇ ಉತ್ತಮ ಸಂಸ್ಕಾರಯುತ ಶಿಕ್ಷಣದೊಂದಿಗೆ ಶಿಸ್ತು, ಸೇವಾಮನೋಭಾವ, ದೇಶ ಪ್ರೇಮ ಮುಂತಾದ ವಿಚಾರಗಳನ್ನು ಕಲಿತಾಗ ಉತ್ತಮ ಭಾರತ ನಿರ್ಮಾಣ ಆಗುತ್ತದೆ. ಈ ಶಿಕ್ಷಣ ಸ್ಕೌಟ್ಸ್ ಗೈಡ್ಸ್‌ನಿಂದ ಸಾಧ್ಯ ಎಂದು ಕುಲಾಲ ಕುಂಬಾರ ಯುವ ವೇದಿಕೆ ಮತ್ತು ಮಹಿಳಾ ಸಂಘಟನೆಗಳ ಒಕ್ಕೂಟ ದಕ್ಷಿಣ ಕನ್ನಡ ಜಿಲ್ಲೆಯ ಅಧ್ಯಕ್ಷರು, ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರು ಆಗಿರುವ ಅನಿಲ್ ದಾಸ್ ಅಭಿಪ್ರಾಯ ಪಟ್ಟರು.

ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಕರ್ನಾಟಕ, ದಕ್ಷಿಣ ಕನ್ನಡ ಜಿಲ್ಲಾ ಸಂಸ್ಥೆ, ಮಂಗಳೂರು ದಕ್ಷಿಣ ತಾಲೂಕಿನ ಉಳ್ಳಾಲ, ಮಂಗಳೂರು



ದಕ್ಷಿಣ ಹಾಗೂ ಗುರುಪುರ ಸ್ಥಳೀಯ ಸಂಸ್ಥೆ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ ಮಂಗಳೂರು ದಕ್ಷಿಣ ವಲಯ ಇವರ ಸಹಭಾಗಿತ್ವದಲ್ಲಿ, ಕ್ಷೇತ್ರ ಸಂಪನ್ಮೂಲ ಕೇಂದ್ರ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ, ಬೋಳಾರ ಮಂಗಳೂರು ಇಲ್ಲಿ ನಡೆದ ಮಂಗಳೂರು ದಕ್ಷಿಣ ತಾಲೂಕು ಮಟ್ಟದ ಪ್ರಾರಂಭಿಕ ತರಬೇತಿ ಶಿಬಿರ ಹಾಗೂ ಪುನಶ್ಚೇತನ ತರಬೇತಿ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಂಗಳೂರು ದಕ್ಷಿಣ ತಾಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಎಚ್ ಆರ್ ಈಶ್ವರ್ ವಹಿಸಿ ಶಿಕ್ಷಕರು ಅವರ ಪಠ್ಯ ಚಟುವಟಿಕೆಗಳೊಂದಿಗೆ ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಗೆ ಪೂರಕವಾಗಿ ಹಲವಾರು ಕಾರ್ಯಕ್ರಮಗಳನ್ನು, ಚಟುವಟಿಕೆಗಳನ್ನು ಶಾಲೆಗಳಲ್ಲಿ ಮಾಡಿಸುವ ಮುಖೇನ ಉತ್ತಮ ವಿದ್ಯಾರ್ಥಿಗಳನ್ನಾಗಿ ಮಾಡಿಸಲು ಪ್ರಾಮಾಣಿಕ ಪ್ರಯತ್ನಗಳನ್ನು ಮಾಡುತ್ತಿರುವುದು ಹೆಮ್ಮೆಯ ವಿಚಾರ ಎಂದರು. ವೇದಿಕೆಯಲ್ಲಿ ಉಳ್ಳಾಲ ಸ್ಥಳೀಯ ಸಂಸ್ಥೆಯ ಅಧ್ಯಕ್ಷರು ಎಂ ಎಚ್ ಮಲಾರ್,ಜಿಲ್ಲಾ ಕಾರ್ಯದರ್ಶಿ ಪ್ರತೀಮ್ ಕುಮಾರ್,ಜಿಲ್ಲಾ ಜಂಟಿ ಕಾರ್ಯದರ್ಶಿ ಜಯವಂತಿ ಸೋನ್ಸ್,ಜಿಲ್ಲಾ ತರಬೇತಿ ಆಯುಕ್ತೆ ಜಯಶ್ರೀ, ಉಳ್ಳಾಲ ಸ್ಥಳೀಯ ಸಂಸ್ಥೆಯ ಉಪಾಧ್ಯಕ್ಷರು ಜಗದೀಶ್ ಶೆಟ್ಟಿ,ಉಳ್ಳಾಲ ಸ್ಥಳೀಯ ಸಂಸ್ಥೆಯ ಕೋಶಾಧಿಕಾರಿ ಕೆ ಎಂ ಕೆ ಮಂಜನಾಡಿ,ಶಿಬಿರ ನಾಯಕರು ಗುರುಮೂರ್ತಿ ನಾಯ್ಕಪು ,ಶಿಬಿರ ಸಹಾಯಕರು ವಿನೋದ್ ಚೇವಾರ್ , ಜಿಲ್ಲಾ ಸಂಸ್ಥೆಯ ಸ್ಥಾನೀಯ ಆಯುಕ್ತರು ಗೀತಾ ಜುಡಿತ್ ಸಲ್ಡಾನ,CRP ಮೋಹನ್,ಉಳ್ಳಾಲ ಸ್ಥಳೀಯ ಸಂಸ್ಥೆಯ ಕಾರ್ಯದರ್ಶಿ ಲಿಡಿಯ,ಮಂಗಳೂರು ದಕ್ಷಿಣ ಸ್ಥಳೀಯ ಸಂಸ್ಥೆಯ ಕಾರ್ಯದರ್ಶಿ ಪ್ರೀತಿ ಲೋಬೊ,ಗುರುಪುರ ಸ್ಥಳೀಯ ಸಂಸ್ಥೆಯ ಕಾರ್ಯದರ್ಶಿ ಜಯಲಕ್ಷ್ಮಿ,ಮಂಗಳೂರು ದಕ್ಷಿಣ ಸ್ಥಳೀಯ ಸಂಸ್ಥೆಯ ಕೋಶಾಧಿಕಾರಿ ಸಂಧ್ಯಾ ಉಪಸ್ಥಿತರಿದ್ದರು. ಪ್ರಾರಂಭಿಕ ತರಬೇತಿ ಶಿಬಿರದಲ್ಲಿ ಮತ್ತು ಪುನಶ್ಚೇತನ ಶಿಬಿರದಲ್ಲಿ ತಾಲೂಕಿನ 50 ಶಿಕ್ಷಕ ಶಿಕ್ಷಕಿಯರು ಭಾಗವಹಿಸಿದ್ದರು. ರಾಜ್ಯ ಸಹಾಯಕ ಸಂಘಟನಾ ಆಯುಕ್ತ ಭರತ್ ರಾಜ್ ಪ್ರಸ್ತಾವನೆ ಗೈದರು ಕಾರ್ಯಕ್ರಮವನ್ನು ರಾಜ್ಯ ಪ್ರತಿನಿಧಿ ತ್ಯಾಗಂ ಹರೇಕಳ ನಿರ್ವಹಿಸಿದರು.ಪ್ರೀತಿ ಲೋಬೊ ವಂದಿಸಿದರು. ಕಾರ್ಯದರ್ಶಿ ಲಿಡಿಯ ಸಹಕರಿಸಿದರು.




## ಚಿತ್ರಕಲೆಯಿಂದ ಪ್ರಕೃತಿಯ ಸೂಕ್ಷ್ಮತೆಯನ್ನು ಅರ್ಥಮಾಡಿಕೊಳ್ಳಲು ಸಾಧ್ಯ: ಅಚ್ಯುತ ಗಟ್ಟಿ



**ಕೊಣಾಜೆ:** ಪುಸ್ತಕ ಶಿಕ್ಷಣದೊಂದಿಗೆ ನಮ್ಮ ಬದುಕಿಗೆ ಸ್ಫೂರ್ತಿಯಾಗಬಲ್ಲ ಚಟುವಟಿಕೆಗಳಲ್ಲೂ ನಾವು ತೊಡಗಿಸಿಕೊಂಡರೆ ಉತ್ತಮ ಭವಿಷ್ಯವನ್ನು ರೂಪಿಸಿಕೊಳ್ಳಬಹುದು.ಚಿತ್ರಕಲೆಯಿಂದ ಪ್ರಕೃತಿಯ ಸೂಕ್ಷ್ಮತೆಯನ್ನು ಅರ್ಥಮಾಡಿಕೊಳ್ಳಲು ಸಾಧ್ಯ ಎಂದು ಮಂಗಳೂರು ವಿವಿ ಸಿಂಡಿಕೇಟ್ ಸದಸ್ಯರಾದ ಅಚ್ಯುತ ಗಟ್ಟಿ ಅವರು ಹೇಳಿದರು.

ಮಂಗಳೂರು ವಿಶ್ವವಿದ್ಯಾನಿಲಯ ಎನ್. ಜಿ.ಪಾವಂಜೆ ಲಲಿತಕಲಾ ಪೀಠ ಇದರ ಆಶ್ರಯದಲ್ಲಿ ಸರ್ಕಾರಿ ಪ್ರೌಢಶಾಲೆ ಕೊಣಾಜೆ ಪದವು ಇದರ ಸಹಯೋಗದೊಂದಿಗೆ ಕೊಣಾಜೆ ಪದವು ಶಾಲೆಯಲ್ಲಿ ಶನಿವಾರ ನಡೆದ "ಕಲಾಶಿಕ್ಷಣ–ಸೃಜನಶೀಲತೆ" ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಸೃಜನಾತ್ಮಕ ಬೆಳವಣಿಗೆಗೆ ಪೂರಕವಾದ ಇಂತಹ ಕಾರ್ಯಕ್ರಮದ ಪ್ರಯೋಜನವನ್ನು ವಿದ್ಯಾರ್ಥಿಗಳು ಸಮರ್ಪಕವಾಗಿ ಬಳಸಿಕೊಂಡು ಮುನ್ನಡೆಯಬೇಕು ಎಂದು ಹೇಳಿದರು.

ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿ ಮಾತನಾಡಿದ ಚಿತ್ರಕಲಾ ಶಿಕ್ಷಕರಾದ ಪ್ರಸನ್ನ ಕುಮಾರ್ ಅವರು ಕಲಾ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡ ಜೀವನದಲ್ಲಿ ಎಂದಿಗೂ ಸೋಲಲು ಸಾಧ್ಯವಿಲ್ಲ. ನಾವು ಆಧುನಿಕತೆಗೆ, ಆಯಾ ಕಾಲಘಟ್ಟಕ್ಕೆ ಪೂರಕವಾಗಿ ಬೆಳೆಯಬೇಕಾದರೆ ಸೃಜನಶೀಲತೆ ಅಗತ್ಯ. ಚಿತ್ರಕಲೆಯು ಮನಸ್ಸಿಗೆ ನೆಮ್ಮದಿ, ಬದುಕಿಗೆ ನಾವಿನ್ಯತೆಯನ್ನು ನೀಡುವುದರೊಂದಿಗೆ ನಮ್ಮಲ್ಲಿ ಸೃಜನಶೀಲ ಮನೋಭಾವನೆಯನ್ನು ಬೆಳೆಸುತ್ತದೆ ಎಂದರು.

ಮಂಗಳೂರು ವಿವಿ ಎನ್ ಜಿ ಪಾವಂಜೆ ಲಲಿತಾ ಕಲಾ ಪೀಠದ ಸಂಯೋಜಕರಾದ ಡಾ.ಧನಂಜಯ ಕುಂಬ್ಳೆ ಅವರು ಮಾತನಾಡಿ, ಪ್ರತಿಯೊಬ್ಬರಲೂ ಪ್ರತಿಭೆ, ಕೌಶಲವಿರುತ್ತದೆ. ಪ್ರತಿಭೆಗಳಿಗೆ, ಕಲಾ ಚಟುವಟಿಕೆಗಳಿಗೆ ವೇದಿಕೆ ದೊರೆತಾಗ ಕಲೆಯು ಬೆಳೆಯಲು ಸಾಧ್ಯವಾಗುತ್ತದೆ. ಚಿತ್ರಕಲೆಯು ನಮ್ಮ ಜೀವನದಲ್ಲಿ ಜೀವನೋತ್ಸಾಹವನ್ನು ಹೆಚ್ಚಿಸುತ್ತದೆ ಎಂದರು. ಕೊಣಾಜೆ ಪದವು ಸರ್ಕಾರಿ ಪ್ರೌಢಶಾಲೆಯ ಮುಖ್ಯೋಪಾಧ್ಯಾಯರಾದ ಗ್ರಾಯತ್ರಿ ಬಿ, ಶಿಕ್ಷಕರಾದ ಜಾನ್ ಆಂಥೋನಿ ಫೆರ್ನಾಂಡಿಸ್ ಮೊದಲಾದವರು ಉಪಸ್ಥಿತರಿದ್ದರು. ದೈಹಿಕ ಶಿಕ್ಷಕರಾದ ರಾಜೀವ್ ನಾಯ್ಕ್ ಅವರು ವಂದಿಸಿ,ಕಾರ್ಯಕ್ರಮ ನಿರೂಪಿಸಿದರು.







Ullalavani, Printed & Published by Ravi Bangera on behalf of Karnartaka News Publications (Pvt) Goodshed Road, Bunder, Mangalore, published at : Appachi Complex, Kuthar, Munnur Post, Someshwar Village, Ullal Tq - 575 017, Mob : 9845478858.
RNI:KARKAN28322, Printed at Karnartaka News Publications (Pvt) Goodshed Road, Bunder, Mangalore. Editor: Mohan Kuthar.